ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 63

21–8–2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 63

## ಕೆರೆ ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮಕ್ಕೆ ವಿಧಾನಪರಿಷತ್‌ನಲ್ಲಿ ಪಕ್ಷಬೇಧ ಮರೆತು ಆಗ್ರಹ

**ಬೆಂಗಳೂರು,ಆ.20–** ರಾಜ್ಯದಲ್ಲಿ ಕಾನೂನು ಬಾಹಿರವಾಗಿ ಕೆರೆಗಳನ್ನು ಒತ್ತುವರಿ ಮಾಡಿಕೊಂಡಿರುವವರ ವಿರುದ್ಧ ಸರ್ಕಾರ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಪಕ್ಷಬೇಧ ಮರೆತು ಸದಸ್ಯರು ವಿಧಾನಪರಿಷತ್‌ನಲ್ಲಿ ಆಗ್ರಹಿಸಿದರು. ಕರ್ನಾಟಕ ಕೆರೆ ಸಂದರ್ಶನ ಮತ್ತು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕ–2025 ಅನ್ನು ಪರಿಷತ್‌ನಲ್ಲಿ ಸಣ್ಣ ನೀರಾವರಿ ಸಚಿವ ಬೋಸರಾಜು ಅವರು ಮಂಡನೆ ಮಾಡಿದರು.

ಈ ವಿಧೇಯಕದ ಮೇಲೆ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ, ಸದಸ್ಯರಾದ ಐವಾನ್ ಡಿಸೋಜ, ಟಿ.ಎ.ಶರವಣ, ಕೆ.ಎಸ್.ನವೀನ್, ಎನ್. ರವಿಕುಮಾರ್, ಪ್ರತಾಪ್ ಸಿಂಹ ನಾಯಕ್, ರಾಮೋಜಿಗೌಡ, ಗೋವಿಂದರಾಜು, ಹೇಮಲತಾ ನಾಯಕ್, ಪಿ.ಎಚ್.ಪೂಜಾರ್, ಸಿ.ಟಿ.ರವಿ ಸೇರಿದಂತೆ ಮತ್ತಿತರರು ಮಾತನಾಡಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಕೆರೆಗಳನ್ನು ಸಂರಕ್ಷಣೆ ಮಾಡಬೇಕಾದ್ದು ಇಂದಿನ ತುರ್ತು ಅಗತ್ಯ. ಬೆಂಗಳೂರು ಸೇರಿದಂತೆ ರಾಜ್ಯದ ನಾನಾ ಕಡೆ ಸಾವಿರಾರು ಕೋಟಿ ರೂ. ಬೆಲೆ ಬಾಳುವ ಕೆರೆಗಳನ್ನು ಕಾನೂನು ಬಾಹಿರವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ. ಖಾಸಗಿ ವ್ಯಕ್ತಿಗಳು, ಸರ್ಕಾರಿ ಅಧಿಕಾರಿಗಳು ಸೇರಿದಂತೆ ದೊಡ್ಡದೊಡ್ಡ ವ್ಯಕ್ತಿಗಳು ಇದರಲ್ಲಿ ಭಾಗಿಯಾಗಿದ್ದಾರೆ. ಸರ್ಕಾರ ಇಂತವರ ಮೇಲೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಒತ್ತಾಯ ಮಾಡಿದರು.

ವಿಧೇಯಕದಲ್ಲಿ ಸಂರಕ್ಷಣೆ ಎಂಬ ಪದವಿದೆ. ಆದರೆ ಇದಕ್ಕೆ ವಿರುದ್ಧವಾಗಿ ನಾಶ, ವಿನಾಶ, ನಿರ್ಲಕ್ಷ್ಯ



ಮಾಡಲಾಗುತ್ತಿದೆ. ಸರ್ಕಾರ ಒಳ್ಳೆಯ ಉದ್ದೇಶದಿಂದ ವಿಧೇಯಕವನ್ನು ಜಾರಿ ಮಾಡಿರಬಹುದು. ಆದ–ರೆ ವಾಸ್ತವ ಚಿತ್ರಣವೇ ಬೇರೆ ಇದೆ. ಹೀಗಾಗಿ ಸರ್ಕಾರ ವಿಧೇಯಕದ ಕುರಿತು ಸಾಧಕ–ಬಾಧಕದ ಬಗ್ಗೆ ಚರ್ಚಿಸಲು ಸದನ ಸಮಿತಿಯನ್ನು ರಚನೆ ಮಾಡಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದರು.

ಎನ್.ರವಿಕುಮಾರ್ ಮಾತನಾಡಿ, ಬೆಂಗಳೂರು ಮತ್ತಿತರೆಡೆ ಕೆರೆಗಳನ್ನು ಒತ್ತುವರಿ ಮಾಡಿಕೊಂಡು ದೊಡ್ಡ ದೊಡ್ಡ ಕಟ್ಟಡಗಳು, ಅಪಾರ್ಟ್‌ಮೆಂಟ್‌ಗಳು, ಫ್ಲ್ಯಾಟ್‌ಗಳು, ಕಾರ್ಖಾನೆಗಳನ್ನು ಕಟ್ಟಲಾಗಿದೆ. ಇದನ್ನು ತೆರವು ಮಾಡದೇ ಕೆರೆ ಸಂರಕ್ಷಣೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಬೆಂಗಳೂರಿನಲ್ಲಿ ಇಂದು ಬೆಳಿಗ್ಗೆ ವಾಯುವಿಹಾರಕ್ಕೆ ಹೋಗಲು ಸ್ಥಳವಿಲ್ಲದೆ ಆ ರೀತಿ ಫುಟ್‌ಪಾತ್‌ಗಳನ್ನು ಸಹ ಒತ್ತುವರಿ ಮಾಡಿಕೊಂಡಿದ್ದಾರೆ. ಮುಂಬೈ, ದೆಹಲಿಯಲ್ಲಿ ಮಳೆ ಬಂದಾಗ ಇಡೀ ನಗರವೇ ಮುಳುಗಡೆಯಾಗುತ್ತದೆ. ಅನೇಕ ಬಾರಿ ಬೆಂಗಳೂರಿನಲ್ಲೂ ಇದು ಮರುಕಳಿಸಿದೆ. ಇದರ ಬಗ್ಗೆ ಸುದೀರ್ಘವಾಗಿ ಚರ್ಚೆ ಮಾಡಲು ಜಂಟಿ ಸದನ ಸಮಿತಿ ರಚನೆ ಮಾಡಬೇಕೆಂದು ಮನವಿ ಮಾಡಿದರು.

ಕೇಶವ ಪ್ರಸಾದ್ ಮಾತನಾಡಿ, ರಾಜ್ಯದೆಲ್ಲೆಡೆ ಕೆರೆಗಳನ್ನು ಒತ್ತುವರಿ ಮಾಡುತ್ತಿರುವ ಪರಿಣಾಮ ನೀರಿನ ಮೂಲವೇ ಬತ್ತಿ ಹೋಗುತ್ತಿದೆ. ಇಂದು ಜಾಗತಿಕ ತಾಪಮಾನದ ಬಗ್ಗೆ ಎಚ್ಚೆತ್ತುಕೊಳ್ಳಬೇಕಾದ ಅಗತ್ಯವಿದೆ. ಮುಂದೊಂದು ದಿನ ಉಸಿರಾಡಲು ಮನೆಗಳಲ್ಲಿ ಆಕ್ಸಿಜನ್ ಅಳವಡಿಸಿಕೊಳ್ಳಬೇಕಾದ ಪರಿಸ್ಥಿತಿ ಬಂದರೂ ಅಚ್ಚರಿಯಿಲ್ಲ. ಧರ್ಮಾಂಬುದಿ ಕೆರೆ ಒತ್ತುವರಿ ಮಾಡಿ ಬಸ್ ನಿಲ್ದಾಣ ಮಾಡಲಾಯಿತು. ವೃಷಭಾವತಿ ನದಿ ಮೂಲ ಎಲ್ಲಿದೆ ಎಂದು ಹುಡುಕುವ ಪ್ರಶ್ನೆ ಉದ್ಭವವಾಗಿದೆ. ಸರ್ಕಾರ ಕೆರೆಗಳ ಸಂರಕ್ಷಣೆಗೆ ಆದ್ಯತೆ ನೀಡಲಿ ಎಂದು ಸಲಹೆ ನೀಡಿದರು. ಟಿ.ಎ.ಶರವಣ ಮಾತನಾಡಿ, ಬೆಂಗಳೂರಿನಲ್ಲಿ ಕೋಟ್ಯಂತರ ರೂ. ಬೆಲೆ ಬಾಳುವ ಕೆರೆಗಳನ್ನು ಒತ್ತುವರಿ ಮಾಡಿಕೊಂಡಿದ್ದಾರೆ. ಇದರ ಬಗ್ಗೆ ಸರ್ಕಾರಕ್ಕೆ 4ಕ್ಕೂ ಹೆಚ್ಚು ವರದಿಗಳನ್ನು ಸಲ್ಲಿಸಲಾಗಿದೆ. ಎ.ಟಿ.ರಾಮಸ್ವಾಮಿ, ಲಕ್ಷ್ಮಣ ಅಯ್ಯರ್, ಬೆಂಗಳೂರು ನಗರ ಜಿಲ್ಲಾಧಿಕಾರಿ ಜಗದೀಶ್ ಸೇರಿದಂತೆ ಒಟ್ಟು ನಾಲ್ವರು ಕೆರೆ ಒತ್ತುವರಿ ಕುರಿತು ವರದಿ ಕೊಟ್ಟಿದ್ದಾರೆ. ಸರ್ಕಾರ ಕಾಲಕಾಲಕ್ಕೆ ವಶಪಡಿಸಿಕೊಳ್ಳುವ ಕೆಲಸವನ್ನು ಮಾಡುತ್ತಿದೆ. ಅದರಲ್ಲೂ ಉಪಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಉತ್ತಮವಾದ ಕೆಲಸ ಮಾಡುತ್ತಿದ್ದಾರೆ. ಸರ್ಕಾರ ಈ ವರದಿಗಳನ್ನು ಅನುಷ್ಠಾನ ಮಾಡಿ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಜರುಗಿಸಲಿ ಎಂದು ಆಗ್ರಹಿಸಿದರು. ಸಿ.ಟಿ.ರವಿ ಮಾತನಾಡಿ, ಸಂರಕ್ಷಣೆ ಹೆಸರಿನಲ್ಲಿ ಭಕ್ಷಣೆ ಮಾಡಲು ಮುಂದಾಗಬಾರದು. ಬಫರ್‌ಝೋನ್ ಹೆಸರಿನಲ್ಲಿ ಕಡಿತ ಮಾಡಿದರೆ ಕೆರೆಗಳ ಒತ್ತುವರಿ ಮಾಡಿಕೊಳ್ಳುವ ಆತಂಕ ಇದೆ. ಇದಕ್ಕೆ ಅವಕಾಶ ಮಾಡಿಕೊಡಬೇಡಿ ಎಂದು ಕಿವಿಮಾತು ಹೇಳಿದರು.

## ಕೆ.ಎನ್.ಹಳ್ಳಿ ಬಳಿ ಕಾಣಿಸಿಕೊಂಡ ಚಿರತೆ

**ಮಲೇಬೆನ್ನೂರು : ಪಾಳ್ಯ** – ಕೆ.ಎನ್ ಹಳ್ಳಿ ಮಧ್ಯೆ ಮಂಗಳವಾರ ಚಿರತೆ ಕಾಣಿಸಿಕೊಂಡಿದೆ ಎನ್ನಲಾಗಿದ್ದು ಜನ ಭಯಭೀತರಾಗಿದ್ದಾರೆ.

ಮುಂಜಾಗ್ರತಾ ಕ್ರಮವಾಗಿ ಕೆ ಎನ್ ಹಳ್ಳಿ ಗ್ರಾಮದಲ್ಲಿ ಗ್ರಾ ಪಂ ನಿಂದ ಧ್ವನಿವರ್ಧಕ ಮೂಲಕ ಚಿರತೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ.

ಕಳೆದ 15 ದಿನಗಳಿಂದ ಹೊಳೆಸಿರಿಗೆರೆ, ಯಲವಟ್ಟಿ, ಲಕ್ಕಶೆಟ್ಟಿಹಳ್ಳಿ, ನಂದಿಗಾವಿ ಗ್ರಾಮಗಳ ಬಳಿ ಜನರಿಗೆ ಕಾಣಿಸಿಕೊಂಡಿದ್ದ ಚಿರತೆ ಇದೀಗ ಕೆ ಎನ್ ಹಳ್ಳಿ ಬಳಿ ಕಂಡಿದೆ ಎಂಬ ವದಂತಿ ಮಂಗಳವಾರ ಹಬ್ಬಿದೆ.

ಅರಣ್ಯ ಇಲಾಖೆಯ ಅಧಿಕಾರಿಗಳು ಚಿರತೆ ಸೆರೆ ಹಿಡಿಯುವ ಆಸಕ್ತಿ ವಹಿಸುತ್ತಿಲ್ಲ ಎಂದು ನಾಗರಿಕರು ದೂರಿದ್ದಾರೆ.

## ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ

**ದಾವಣಗೆರೆ :** ಜಿಲ್ಲಾದ್ಯಂತ ಪ್ಲಾಸ್ಟರ್ ಆಫ್ ಪ್ಯಾರಿಸ್ ಹಾಗೂ ರಾಸಾಯನಿಕ ಗುಣಗಳ್ಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾದ ಗಣೇಶ ವಿಗ್ರಹಗಳ ಉತ್ಪಾದನೆ ಮಾರಾಟ ಮತ್ತು ಕೆರೆ ನದಿಗಳಲ್ಲಿ ಜಲಮೂಲಗಳಲ್ಲಿ ವಿಸರ್ಜನೆಯನ್ನು ನಿರ್ಬಂಧ ಹೇರುವ ಮೂಲಕ ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಿಸಬೇಕು. ಹಾಗೂ ಪ್ಲಾಸ್ಟರ್ ಆಫ್ ಪ್ಯಾರಿಸ್ ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹೊರರಾಜ್ಯ ಹಾಗೂ ಹೊರ ಜಿಲ್ಲೆಗಳಿಂದ ನಮ್ಮ ಜಿಲ್ಲೆಗೆ ಪ್ರವೇಶಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿದ್ದಾರೆ.

## ಲಿಡ್ಕರ್ ಚರ್ಮವಸ್ತುಗಳ ಮೇಲೆ ಶೇ.15 ರಿಯಾಯಿತಿ ದರದಲ್ಲಿ ಮಾರಾಟ

**ದಾವಣಗೆರೆ :** ಗೌರಿ ಗಣೇಶ ಹಬ್ಬದ ಪ್ರಯುಕ್ತ ಲಿಡ್ಕರ್ ನಿಗಮದಿಂದ ಎವಿಕೆ ಕಾಲೇಜ್ ರಸ್ತೆ ಹಾಗೂ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಮಳಿಗೆ ನಂ.11ರ ಹುಬ್ಬಳ್ಳಿ ಪ್ಲಾಟ್‌ಫಾರಂ ಬಳಿ ಆಗಸ್ಟ್ 26ವರೆಗೆ ಅಪ್ಪಟ ಚರ್ಮದ ಪಾದರಕ್ಷೆ, ಶೂ, ಬೆಲ್ಟ್, ಪರ್ಸ್. ಮಹಿಳೆಯರ ಪರ್ಸ್, ವ್ಯಾನಿಟಿ ಬ್ಯಾಗ್ ಇನ್ನಿತರೆ ವಸ್ತುಗಳು ಹೊಸ ಮಾದರಿಯಲ್ಲಿ ಲಭ್ಯವಿದ್ದು, ಈ ಎಲ್ಲಾ ವಸ್ತುಗಳ ಮೇಲೆ ಶೇ.15ರಷ್ಟು ರಿಯಾಯಿತಿ ದರದಲ್ಲಿ ಮಾರಾಟವಿರುತ್ತದೆ. ಸಾರ್ವಜನಿಕರು, ಗ್ರಾಹಕರು ಇದರ ಸದುಪಯೋಗಪಡೆದುಕೊಳ್ಳಬಹುದು ಎಂದು ಪ್ರಕಟಣೆ ತಿಳಿಸಿದೆ.

## ಡಿ.ಜೆ ಸಿಸ್ಟಂ ಬಳಕೆ ನಿಷೇಧ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ

**ದಾವಣಗೆರೆ :** ಜಿಲ್ಲೆಯ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಗಣೇಶೋತ್ಸವ ಹಾಗೂ ಈದ್ ಮಿಲಾದ್ ಹಬ್ಬದ ಆಚರಣೆಗಳು ಪೂರ್ಣಗೊಳ್ಳುವವರೆಗೆ ಆಗಸ್ಟ್ 27 ರಿಂದ ಸೆಪ್ಟೆಂಬರ್ 16 ರವರೆಗೆ ಜಿಲ್ಲೆಯಾದ್ಯಂತ ಡಿ.ಜೆ ಸಿಸ್ಟಂ ಬಳಕೆ ನಿಷೇಧಗೊಳಿಸಿ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿದ್ದಾರೆ.

## ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

**ಬಳ್ಳಾರಿ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಮಾಜಿ ದೇವದಾಸಿ ಮಹಿಳೆಯರ ನಿವೇಶನ ಹೊಂದಿರುವ ವಸತಿ ರಹಿತರಿಂದ ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯಿಂದ ಪಡೆದು ಭರ್ತಿ ಮಾಡಿ, ಪೂರಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಇದೇ ಕಚೇರಿಗೆ ಸೆ.25 ವರೆಗೆ ಸಲ್ಲಿಸಬಹುದಾಗಿದೆ.

***ಬೇಕಾದ ದಾಖಲೆ:** ಜಾತಿ ಮತ್ತು ಆದಾಯ ಪ್ರಮಾಣ ಪತ್ರ(ಆರ್.ಡಿ.ನಂಬರ್ ಹೊಂದಿರಬೇಕು), ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಭಾವಚಿತ್ರ–4, ನಿವೇಶನ ಖಾತಾ ಉತ್ತಾರ, ಆಧಾರ್ ಕಾರ್ಡ್ ಪ್ರತಿ, ಚಾಲ್ತಿ ಬ್ಯಾಂಕ್ ಪಾಸ್ ಪುಸ್ತಕ, ಮೊಬೈಲ್ ನಂಬರ್, ಗ್ರಾಮ ಪಂಚಾಯತಿ ವತಿಯಿಂದ ವಸತಿ ಸೌಲಭ್ಯ ಪಡೆದಿರುವುದಿಲ್ಲವೆಂಬ ದೃಢೀಕರಣ ಪತ್ರ ಸಲ್ಲಿಸಬೇಕು.

## ಅರಸುರವರ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಸಲಹೆ

### ಡಿ.ದೇವರಾಜ ಅರಸು ಜಯಂತಿಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ



**ದಾವಣಗೆರೆ :** ಸಾಮಾಜಿಕ ಅಸಮಾನತೆ ನಿವಾರಣೆಗಾಗಿ ಡಿ.ದೇವರಾಜ ಅರಸುರವರು ಅನುಷ್ಠಾನಗೊಳಿಸಿದ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಂಡಾಗ ಮಾತ್ರ ಜನ್ಮ ದಿನಾಚರಣೆ ಸಾರ್ಥಕವಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಮಹಾನಗರ ಪಾಲಿಕೆ ಸಹಯೋಗದಲ್ಲಿ ಬುಧವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಡಿ. ದೇವರಾಜ ಅರಸು ಜಯಂತಿ ಕಾರ್ಯಕ್ರಮ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಯುವಜನತೆ ಗಾಂಧೀಜಿ ಮತ್ತು ಅರಸುರವರ ಜೀವನ ಚರಿತ್ರೆ ಅರಿತುಕೊಳ್ಳಬೇಕು. ಅರಸುರವರ ಆಡಳಿತ ಅವಧಿಯಲ್ಲಿ ಉಳುವವನೇ ಭೂಮಿ ಒಡೆಯ, ಜೀತ ಪದ್ಧತಿ ನಿರ್ಮೂಲನೆ ಸೇರಿದಂತೆ ಹಲವಾರು ಪ್ರಗತಿಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಅವುಗಳಲ್ಲಿ ಮಲ ಹೊರುವ ಮತ್ತು ಜೀತಪದ್ದತಿಯನ್ನು ನಿರ್ಮೂಲನೆ ಮಾಡಿ ಹಲವಾರು ಕುಟುಂಬಗಳಿಗೆ ಮುಕ್ತಿ ಕಲ್ಪಿಸಿಕೊಟ್ಟರು. ಆದರೆ ದೇವರಾಜ ಅರಸುರವರು ಅನುಷ್ಠಾನಗೊಳಿಸಿದ ಕಾಯ್ದೆಗಳು ಇಂದು ಎಷ್ಟರ ಮಟ್ಟಿಗೆ ಅನಷ್ಠಾನಗೊಂಡಿವೆ ಎಂದು ಪರಿಶೀಲಿಸಕೊಳ್ಳಬೇಕು.

ಜಿಲ್ಲೆಯಲ್ಲಿ ವಿವಿಧ ವಿದ್ಯಾರ್ಥಿನಿಲಯಗಳಿಂದ 23 ಸಾವಿರ ಮಕ್ಕಳು ವಿದ್ಯಾಭ್ಯಾಸದಲ್ಲಿ ತೊಡಗಿದ್ದಾರೆ. ಅವರಿಗೆ ವಸತಿ ಮೂಲಸೌಕರ್ಯ ವ್ಯವಸ್ಥೆಗೆ 27 ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗಿದೆ. ಕೇಂದ್ರ ಸರ್ಕಾರದಿಂದ ಜಿಲ್ಲೆಯ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ವಿಶೇಷ ಶಾಲೆ ಮಂಜೂರು ಮಾಡಲಾಗಿದೆ. ಅಷ್ಟೇ ಅಲ್ಲದೇ ಕಾರ್ಮಿಕರ ಮಕ್ಕಳಿಗೂ ವಸತಿ ಶಾಲೆ ನಿರ್ಮಿಸಲು ಅನುಮತಿ ನೀಡಿದೆ. ಜಿಲ್ಲಾದ್ಯಂತ ಸುಮಾರು 300 ರಿಂದ 400 ಎಕರೆಯಷ್ಟು ಭೂಮಿಯನ್ನು ಶಾಲಾ–ಕಾಲೇಜ್, ವಿದ್ಯಾರ್ಥಿನಿಲಯ ಮತ್ತು ಇನ್ನಿತರೆ ಅಭಿವೃದ್ಧಿ ಕಾರ್ಯಗಳಿಗೆ ಬಳಸಿಕೊಳ್ಳಲಾಗಿದೆ. ಸ ವಿದ್ಯಾರ್ಥಿಗಳು, ಪೋಷಕರು ಸದುಪಯೋಗ ಪಡೆದುಕೊಳ್ಳಬೇಕು. ಪ್ರತಿವರ್ಷ ಹಲವಾರು ವಿದ್ಯಾರ್ಥಿಗಳು ಶಿಕ್ಷಣ ಮುಗಿಸಿ ಹೊರಬರುತ್ತಿದ್ದಾರೆ. ಆದರೆ ಇಂದಿನ ಯುವಜನತೆಯಲ್ಲಿ ಉದ್ಯೋಗಕ್ಕೆ ಬೇಕಾದ ಕೌಶಲ್ಯದ ಜ್ಞಾನವಿಲ್ಲ. ನವ ನವೀನ ಬದಲಾವಣೆ, ಆವಿಷ್ಕಾರಗಳಾಗಬೇಕಾದರೆ ಹಲವು ಅಡಚಣೆ ಬರುವುದು ಸಹಜ. ಆದರೆ ಅವೆಲ್ಲವುಗಳನ್ನು ಮೆಟ್ಟಿನಿಂತಾಗ ಎಲ್ಲರೂ ಅಭಿನಂದಿಸುತ್ತಾರೆ. ಹಾಗಾಗಿ ವಿದ್ಯಾರ್ಥಿಗಳು ಪಠ್ಯ ಚಟುವಟಿಕೆಗಳೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಳ್ಳಬೇಕು. ಕಲಿಕಾಸಕ್ತಿಯನ್ನು ಎಷ್ಟು ಗಂಭೀರವಾಗಿ ತೆಗೆದುಕೊಳ್ಳುತ್ತೀರೋ ಅಷ್ಟು ಉನ್ನತವಾಗಿ ಬೆಳೆಯಲು ಸಾಧ್ಯ. ವಿದ್ಯಾರ್ಥಿಗಳು ಯಶಸ್ಸು ಕಾಣಬೇಕಾದರೆ ದೈಹಿಕ ಮತ್ತು ಮಾನಸಿಕ ಆರೋಗ್ಯ ತುಂಬಾ ಮುಖ್ಯ. ಆರೋಗ್ಯ ಸಮತೋಲನ ಕಾಪಾಡಿಕೊಳ್ಳುವುದರ ಜೊತೆಗೆ ಹೆಚ್ಚಿನ ಓದುವ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು. ವಿದ್ಯಾರ್ಥಿ ನಿಲಯಗಳಲ್ಲಿ ಇಂದು ಸಾಕಷ್ಟು ಸುಧಾರಣೆಯಾಗಿ, ಅಭಿವೃದ್ಧಿ ಕಂಡಿವೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಆಗ ಮಾತ್ರ ಅರಸು ಮಾಡಿದ ಕಾರ್ಯಗಳು ಸಫಲವಾಗುತ್ತವೆ ಎಂದು ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.

ಪಾಲಿಕೆ ಆಯುಕ್ತೆ ರೇಣುಕಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಡಿ.ದೇವರಾಜ ಅರಸು ಸಾಧನೆ ಕೊಡುಗೆ ಅಪಾರ, ಹಿಂದುಳಿದ ವರ್ಗಗಳ ಇಲಾಖೆ ಅವರ ಶ್ರಮದಿಂದ ರಚನೆಯಾಗಿದೆ. ಅವರ ಈ ಕೊಡುಗೆಯಿಂದ ಹಿಂದುಳಿದ ವರ್ಗಗಳ ಇಲಾಖೆ ವಿದ್ಯಾರ್ಥಿಗಳು ಸಹ ಹೆಚ್ಚಿನ ಶಿಕ್ಷಣವಂತರಾಗುತ್ತಿದ್ದಾರೆ. ಶಾಲಾ, ಕಾಲೇಜ್ ವಿದ್ಯಾರ್ಥಿನಿಲಯ ಸ್ಥಾಪಿಸಿ ಉತ್ತಮ ಕೊಡುಗೆ ನೀಡಿದ್ದಾರೆ ಅಂತಹ ಧೀಮಂತ ನಾಯಕರು ಸಾಧನೆ ನಮಗೆ ಸ್ಪೂರ್ತಿ ಎಂದರು.

## ನಾಡಿನ ಇತಿಹಾಸದಲ್ಲಿ ತಾತ್ವಿಕ ನೆಲಗಟ್ಟನ್ನು ಕಲ್ಪಿಸಿದವರು ಡಿ. ಡಿ.ದೇವರಾಜ ಆರಸ್



**ಹೊನ್ನಾಳಿ :** ನಾಡಿನ ಇತಿಹಾಸದಲ್ಲಿ ಹಿಂದುಳಿದ ಚಳುವಳಿಗಳಿಗೆ ಒಂದು ಗಟ್ಟಿಯಾದ ತಾತ್ವಿಕ ನೆಲಗಟ್ಟನ್ನು ಕಲ್ಪಿಸಿದವರು ದಿವಂಗತ ಡಿ.ದೇವರಾಜ ಆರಸ್ ಅವರು ಎಂದು ಉಪವಿಭಾಗಾಧಿಕಾರಿ ವಿ. ಅಬೀಷೇಕ್ ಹೇಳಿದರು.

ತಾಲೂಕು ಅಡಳಿತ, ತಾಲೂಕು ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಪುರಸಭೆ, ಸಂಯುಕ್ತಾಶ್ರಯದಲ್ಲಿ ಹಿರೇಕಲ್ಮಠದ ಸಮುದಾಯ ಭವನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಾಮಾಜಿಕ ನ್ಯಾಯದ ಹರಿಕಾರ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಆರಸ್ ಅವರ 110ನೇ ಜನ್ಮದಿನಾಚರಣೆ ಕಾರ್ಯಕ್ರಮಕವನ್ನು ಉದ್ಘಾಟಿಸಿ ಮಾತನಾಡಿದರು.

ಅಂದಿನ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿಯವರು ಜಾರಿಗೆ ತಂದ ಉಳುವವನೇ ಹೊಲದೊಡೆಯ ಯೋಜನೆಯನ್ನು ಕರ್ನಾಟಕದಲ್ಲಿ ಆತ್ಯಂತ ಯಶಸ್ವಿಯಾಗಿ ಅನುಷ್ಟಾನ ಮಾಡಿದವರು ಎಂದರೆ ಅದು ದೇವರಾಜ ಆರಸ್ ಎಂದು ಹೇಳಿದ ಅವರು ಅವರ ಅಧಿಕಾರಾವಧಿಯಲ್ಲಿ ಹಾವನೂರು ವರದಿ ಜಾರಿಗೆ ತರುವ ಮೂಲಕ ಇಡೀ ಹಿಂದುಳಿದ ಜನ ಸಮುದಾಯಕ್ಕೆ ಸಾಮಾಜಿಕ, ಅರ್ಥಿಕ ನ್ಯಾಯ ಒದಗಿಸಿಕೊಟ್ಟಿದ್ದರು ಎಂದು ಹೇಳಿದರು.

ದಿವಂಗತ ಡಿ. ದೇವರಾಜ ಆರಸ್ ಅವರ ಕುರಿತು ಉಪನ್ಯಾಸ ನೀಡಿದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ಬಿ.ಜಿ.ಧನಂಜಯ ಅವರು ಮಾತನಾಡಿ, 1973ರಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡುವ ಮೂಲಕ ಅಧುನಿಕ ಕರ್ನಾಟಕ ನಿರ್ಮಾಪಕ ಎಂದು ಖ್ಯಾತಿಗೆ ಭಾಜನರಾಗಿದ್ದು, ರಾಜ್ಯ ರಾಜಕಾರಣದಲ್ಲಿ ವಿಶಿಷ್ಟ ಚರಿತ್ರೆಯನ್ನು ನಿರ್ಮಿಸಿದ್ದಾರೆ ಎಂದು ಹೇಳಿದರು

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಪ್ರಥಮ ಮುಖ್ಯಮಂತ್ರಿಯಾಗಿ ಸುದೀರ್ಘ ಕಾಲ ಅಧಿಕಾರ ನಡೆಸಿ ಸಮಾಜಮುಖಿ ಸಿ.ಎಂ. ಎಂಬ ಖ್ಯಾತಿ ಪಡೆದಿದ್ದು, ಶತ್ರುಗಳನ್ನು ಪ್ರೀತಿಸುವ ಅಜಾತ ಶತ್ರುವಾಗಿ ಅಂದು ಸುಮಾರು 16ಸಾವಿರಕ್ಕೂ ಹೆಚ್ಚು ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಲಿಸಿದರು,

## ರಾಜ್ಯಕ್ಕೆ ಅಪ್ರತಿಮ ಕೊಡುಗೆ ನೀಡಿದವರು ಡಿ.ದೇವರಾಜ ಅರಸು: ಡಾ.ಆರತಿ ಕೃಷ್ಣ


**ಚಿಕ್ಕಮಗಳೂರು, ಆ. 20:** ಸುದೀರ್ಘ ಅವಧಿಯಲ್ಲಿ ಮುಖ್ಯಮಂತ್ರಿಯಾಗಿ ತಮ್ಮ ಕ್ರಾಂತಿಕಾರಿ ನಿಲುವುಗಳಿಂದ ರಾಜ್ಯಕ್ಕೆ ಅಪ್ರತಿಮ ಕೊಡುಗೆಯನ್ನು ನೀಡಿದವರು ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರು ಎಂದು ಕರ್ನಾಟಕ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ. ಆರತಿ ಕೃಷ್ಣ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಸಂಯುಕ್ತ ಆಶ್ರಯದಲ್ಲಿ ಇಂದು ನಗರದ ಜಿಲ್ಲಾ ಪೊಲೀಸ್ ಸಮುದಾಯ ಭವನದಲ್ಲಿ ಪರಿವರ್ತನೆಯ ಹರಿಕಾರ ಮಾಜಿ ಮುಖ್ಯಮಂತ್ರಿ ದಿ.ಡಿ.ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ದೇವರಾಜ ಅರಸುರವರು ಸುದೀರ್ಘಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಪರಿಶಿಷ್ಟ ಜಾತಿ, ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಹಾವನೂರು ಆಯೋಗವನ್ನು ರಚಿಸಿ, ನಂತರದ ದಿನಗಳಲ್ಲಿ ಅಲ್ಪಸಂಖ್ಯಾತರ ಇಲಾಖೆ ಹಾಗೂ ಹಿಂದುಳಿದ ವರ್ಗದ ನಿಗಮ, ಮಂಡಳಿಯನ್ನು ಪ್ರಾರಂಭಿಸಿದರು. ಜೀತ ಪದ್ಧತಿಯನ್ನು ರದ್ದುಗೊಳಿಸಿ, ಬಡವರು ಹಾಗೂ ಶ್ರೀಮಂತರ ನಡುವೆ ಇರುವ ಅಂತರ ಹಾಗೂ ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು ಶ್ರಮಿಸಿದ್ದ ಅವರು, 1973ರಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಲು ಕಾರಣೀಭೂತರಾದವರು ಎಂದರು.

ನಂತರ ರೈತರಿಗೆ ಅನುಕೂಲವಾಗುವಂತೆ ಕಾಳಿ ಯೋಜನೆಯನ್ನು ಜಾರಿಗೆ ತಂದರು. ಶಿಕ್ಷಣಕ್ಕೆ ಒತ್ತು ನೀಡುವ ಸಲುವಾಗಿ ಹಿಂದುಳಿದ ವರ್ಗದವರು ಶೈಕ್ಷಣಿಕ ಕ್ಷೇತ್ರದಲ್ಲಿ ಮುಂದುವರಿಯಬೇಕೆಂಬ ಆಶಯ ಹೊಂದಿದ್ದರು. ಈ ಕಾರಣದಿಂದಲೇ ಹಿಂದುಳಿದ ವರ್ಗದವರಿಗೆ ಹಾಗೂ ಅಲ್ಪಸಂಖ್ಯಾತರಿಗೆ ಪ್ರತ್ಯೇಕ ಹಾಸ್ಟೆಲ್ ಸೌಲಭ್ಯವನ್ನು ಒದಗಿಸಿ, ವಿದ್ಯಾವಂತ ನಿರುದ್ಯೋಗಿಗಳಿಗೆ ಸ್ಟೈಫಂಡರಿ ಯೋಜನೆಯಲ್ಲಿ ಉದ್ಯೋಗ ಕಲ್ಪಿಸಿದ್ದರು. ಬಡವರ ಧ್ವನಿಯಾಗಿ ಭೂಸುಧಾರಣೆಯನ್ನು ಜಾರಿಗೆ ತಂದು ಉಳುವವನೇ ಭೂಮಿಯ ಹೊಲದೊಡೆಯ ಎನ್ನುವ ಕಾನೂನನ್ನು ಜಾರಿಗೆ ತಂದರು ಎಂದು ತಿಳಿಸಿದರು.

ಅಂದು ಶೃಂಗೇರಿ ಕ್ಷೇತ್ರದ ಶಾಸಕರಾಗಿದ್ದ ತಮ್ಮ ತಂದೆ ಬೇಗಾನೆ ರಾಮಯ್ಯನವರು ಅರಸು ಅವರ ನಿಕಟವರ್ತಿಯಾಗಿ ಭೂಸುಧಾರಣಾ



ಸಮಿತಿಯ ಸದಸ್ಯರೂ ಆಗಿದ್ದರು. ನಂತರ ಅವರು ಈ ಜಿಲ್ಲೆಯ ಉಸ್ತುವಾರಿ ಸಚಿವರಾಗಿ ಗ್ರಾಮೀಣಾಭಿವೃದ್ಧಿ ಸಚಿವರಾಗಿ ಮಲೆನಾಡು ಭಾಗಕ್ಕೆ ಬೋರ್‌ವೆಲ್ ಅನ್ನು ಒದಗಿಸುವ ಮೂಲಕ ಬೋರ್‌ವೆಲ್ ರಾಮಯ್ಯ ಎಂದೇ ಖ್ಯಾತಿ ಪಡೆದಿದ್ದರು ಎಂದು ಹೇಳಿದರು.

ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್ ಮಾತನಾಡಿ, ಇಂದು ದೇಶ ಕಂಡ ಅಪ್ರತಿಮ ನಾಯಕ ದೇವರಾಜ ಅರಸು ಅವರ ಹಾಗೂ ಆಧುನಿಕ ತಂತ್ರಜ್ಞಾನದ ಹರಿಕಾರರಾಗಿದ್ದ ಮಾಜಿ ಪ್ರಧಾನಿ ದಿ.ರಾಜೀವ್ ಗಾಂಧಿಯವರ ಹುಟ್ಟುಹಬ್ಬವೂ ಆಗಿದೆ. ತಮ್ಮ ದಕ್ಷ ಆಡಳಿತದ ಮೂಲಕ ಹಲವಾರು ದೂರದೃಷ್ಟಿಯ ಕಾರ್ಯಕ್ರಮಗಳನ್ನು ನೀಡಿದ ದೇವರಾಜ ಅರಸು, ಭೂ ಒಡೆತನದ ಹಕ್ಕು ನೀಡಿರುವುದು ಮಾತ್ರವಲ್ಲ, ಮಾಜಿ ಪ್ರಧಾನಿ ದಿ. ಇಂದಿರಾಗಾಂಧಿಯವರ 20 ಅಂಶಗಳ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಿದವರು. ಗ್ರಾಮೀಣ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕೆ ಅನುಕೂಲವಾಗುವಂತೆ ಹಾಸ್ಟೆಲ್ ಸೌಲಭ್ಯವಲ್ಲದೆ, ವಿದ್ಯಾರ್ಥಿ ವೇತನವನ್ನು ನೀಡುವ ವ್ಯವಸ್ಥೆಯನ್ನು ಜಾರಿಗೆ ತಂದು ಬಡವರಿಗೆ ಬದುಕು ಕಟ್ಟಿಕೊಟ್ಟವರು ಎಂದು ತಿಳಿಸಿದರು.

ದಿ.ಡಿ.ದೇವರಾಜ ಅರಸು ಅವರ ತತ್ವ ಮತ್ತು ಸಾಧನೆಗಳ ಬಗ್ಗೆ ಐಡಿಎಸ್‌ಜಿ ಸರ್ಕಾರಿ ಕಾಲೇಜಿನ ಅರ್ಥಶಾಸ್ತ್ರ–ಸ್ನಾತಕೋತ್ತರ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ.ಲಕ್ಷ್ಮೀಕಾಂತ್ ಉಪನ್ಯಾಸ ನೀಡಿ, ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಒಬ್ಬ ಶ್ರೇಷ್ಠ ಮತ್ತು ಧೀಮಂತ ನಾಯಕ, ದಾರ್ಶನಿಕ. 1969 ರಿಂದ 1979ರವರೆಗಿನ ಕಾಲಘಟ್ಟವನ್ನು ಅರಸು ಯುಗವೆಂದು ಕರೆಯಲಾಗುತ್ತದೆ. 1969–70ರ ಅವಧಿಯಲ್ಲಿ ರಾಜ್ಯದ ಅವಿಸ್ಮರಣೀಯ ಬೆಳವಣಿಗೆಗೆ ಉತ್ತಮ ಅಡಿಪಾಯವನ್ನು ಹಾಕಿಕೊಟ್ಟವರು. ಅವರು ವಿಶೇಷವಾಗಿ ದೀನ ದಲಿತರು, ಬಡವರು, ಹಿಂದುಳಿದವರ ಬಗ್ಗೆ ಹಲವಾರು ಯೋಜನೆಗಳನ್ನು ಜಾರಿಗೆ ತಂದವರು. ಶೋಷಿತ ಜನರ ಕಷ್ಟ ಕಾರ್ಪಣ್ಯವನ್ನು ಅರಿತುಕೊಂಡಿದ್ದರು. ಬಡತನ ನಿರ್ಮೂಲನೆಗೆ ಶ್ರಮಿಸಿದ ಮಹಾನ್ ನಾಯಕ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನಾ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಪೌತಿ ಖಾತೆಯ ವಾರಸುದಾರರಿಗೆ ಪಹಣಿಗಳನ್ನು ವಿತರಿಸಲಾಯಿತು. ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಜಿಲ್ಲಾ ಅರಸು ಸಂಘದ ಅಧ್ಯಕ್ಷ ಕೆ. ಜೆ.ಮಂಜುನಾಥ ರಾಜ್ ಅರಸ್, ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯ ನಾಗರಾಜ ಅರಸ್, ನಗರಸಭೆ ಸದಸ್ಯರುಗಳಾದ ಮಧುಕುಮಾರ್ ರಾಜೇ ಅರಸ್, ಪರಮೇಶ್ ಅರಸ್, ಅಲೆಮಾರಿ ಸಂಘದ ಅಧ್ಯಕ್ಷ ಚಂದ್ರಶೇಖರ್, ಉಪವಿಭಾಗಾಧಿಕಾರಿ ಸುದರ್ಶನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀನಿವಾಸ ಆಲದರ್ತಿ, ಮುಖಂಡರಾದ ಕೆ.ಟಿ.ರಾಧಾಕೃಷ್ಣ, ಹೆಚ್.ಪಿ.ಮಂಜೇಗೌಡ, ಜಯರಾಜ ಅರಸ್ ಮತ್ತಿತರರು ಉಪಸ್ಥಿತರಿದ್ದರು. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎನ್.ಮಂಜುನಾಥ್ ಸ್ವಾಗತಿಸಿದರು. ಮಲ್ಲಿಗೆ ಸುಧೀರ್ ಮತ್ತು ತಂಡದವರು ನಾಡಗೀತೆ ಹಾಗೂ ಗೀತ ಗಾಯನ ನಡೆಸಿಕೊಟ್ಟರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನಿಮ್ಮ ಸಂಗಾತಿಯ ಆರೋಗ್ಯ ಒತ್ತಡ ಮತ್ತು ಆತಂಕಕ್ಕೆ ಕಾರಣವಾಗಬಹುದು ಪ್ರೀತಿಯ ಇಂದ್ರಜಾಲ ಇಂದು ನಿಮ್ಮನ್ನು ಕಟ್ಟಿಹಾಕಲಿದೆ. ಕೇವಲ ಈ ಆನಂದವನ್ನು ಆಸ್ವಾದಿಸಿ. ಕೆಲಸದ ಒತ್ತಡ ಇನ್ನೂ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ.

### ವೃಷಭ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ. ಮಕ್ಕಳು ಅಧ್ಯಯನದಲ್ಲಿ ಅವರ ನಿರಾಸಕ್ತಿಯಿಂದಾಗಿ ಶಾಲೆಯಲ್ಲಿ ನಿರಾಸೆಯುಂಟುಮಾಡಬಹುದು. ಪ್ರಣಯದ ಬಂಧಗಳು ನಿಮ್ಮ ಸಂತೋಷವನ್ನು ಆಸಕ್ತಿಕರವಾಗಿಸುತ್ತವೆ.ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶ್ರೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಮಿಥುನ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ. ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತದೆ.

### ಕರ್ಕ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ನೀವು ಸ್ನೇಹಿತರೊಂದಿಗೆ ಪಾರ್ಟಿಯಲ್ಲಿ ಸಾಕಷ್ಟು ಹಣವನ್ನು ಖರ್ಚು ಮಾಡಬಹುದು ಆದರೆ ಇದರ ಹೊರೆತಾಗಿಯೂ ನಿಮ್ಮ ಆರ್ಥಿಕ ಭಾಗವು ಬಲವಾಗಿರುತ್ತದೆ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರೀತಿಯ ಜೀವನ ಇಂದು ನಿಜವಾಗಿಯೂ ಸುಂದರವಾಗಿ ಅರಳುತ್ತದೆ. ನೀವು ಇಂದು ಕೆಲಸದಲ್ಲಿ ಓರ್ವ ಅದ್ಭುತ ವ್ಯಕ್ತಿಯನ್ನು ಭೇಟಿಯಾಗಬಹುದು. ದಿನದ ಪ್ರಾರಂಭವು ಸ್ವಲ್ಪ ದಣಿದಿರಬಹುದು ಆದರೆ ದಿನ ಮುಂದುವರೆದಂತೆ ನೀವು ಉತ್ತಮ ಫಲಿತಾಂಶಗಳನ್ನು ಪಡೆಯುವಿರಿ.

### ಕನ್ಯಾ ರಾಶಿ

ಸಂತೋಷದಿಂದಿರಲು ನಿಮ್ಮ ಆಕಾಂಕ್ಷೆಗಳನ್ನು ಪರಿಶೀಲಿಸಿ. ಯೋಗದ ಸಹಾಯ ತೆಗೆದುಕೊಳ್ಳಿ ಇದು ನಿಮಗೆ ದೈಹಿಕವಾಗಿ, ಮಾನಸಿಕವಾಗಿ ಮತ್ತು ಆಧ್ಯಾತ್ಮಿಕವಾಗಿ ನಿಮ್ಮ ಮನೋಧರ್ಮವನ್ನು ಸುಧಾರಿಸುವ ಆರೋಗ್ಯಕರ ಜೀವನ ಕಲೆ ಕಲಿಸುತ್ತದೆ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ.

### ತುಲಾ ರಾಶಿ

ನಿಮ್ಮ ಸಕಾರಾತ್ಮಕ ದೃಷ್ಟಿಕೋನ ನಿಮ್ಮ ಸುತ್ತಲಿನವರನ್ನು ಆಕರ್ಷಿಸಬಹುದು. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಸಂತೋಷವನ್ನು ನಿಮ್ಮ ಪೋಷಕರ ಜೊತೆ ಹಂಚಿಕೊಳ್ಳಿ.

### ವೃಶ್ಚಿಕ ರಾಶಿ

ನಿಮ್ಮ ಶೀಘ್ರ ಕ್ರಮ ನಿಮ್ಮ ಸುದೀರ್ಘವಾದ ಸಮಸ್ಯೆಯನ್ನು ಪರಿಹರಿಸುತ್ತದೆ. ಎಲ್ಲಾದರೂ ಹೂಡಿಕೆ ಮಾಡಿರುವ ಜನರು, ಇಂದಿನ ದಿನ ಅವರಿಗೆ ಆರ್ಥಿಕ ನಷ್ಟ ಸಂಭವಿಸಬಹುದು ಮಕ್ಕಳು ಮತ್ತು ಕುಟುಂಬ ಇಂದು ನಿಮ್ಮ ಕೇಂದ್ರಬಿಂದುವಾಗಿರುತ್ತದೆ. ಕೆಲವರಿಗೆ ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು ಹಾಗೂ ನಿಮ್ಮನ್ನು ಹರ್ಷಚಿತ್ತರಾಗಿರಿಸಬಹುದು.

### ಧನು ರಾಶಿ

ಸೃಜನಶೀಲ ಕೆಲಸ ನಿಮ್ಮನ್ನು ಶಾಂತವಾಗಿರಿಸುತ್ತವೆ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು. ನೀವು ಮಕ್ಕಳೊಡನೆ ಸ್ವಲ್ಪ ಸಮಯ ಕಳೆಯಬೇಕು ಮತ್ತು ಅವರಿಗೆ ಒಳ್ಳೆಯ ಮೌಲ್ಯಗಳನ್ನು ಕಲಿಸಬೇಕು ಮತ್ತು ತಮ್ಮ ಜವಾಬ್ದಾರಿಗಳನ್ನು ಅರ್ಥ ಮಾಡಿಕೊಳ್ಳಲು ಕಲಿಸಬೇಕು.

### ಮಕರ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು. ಇದು ನಿಮಗೆ ಆರ್ಥಿಕ ಲಾಭವನ್ನು ನೀಡುತ್ತದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

### ಕುಂಭ ರಾಶಿ

ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ.

### ಮೀನ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಪ್ರೀತಿಪಾತ್ರರ ಜೊತೆಗಿನ ನಿಮ್ಮ ಸಂಬಂಧದಲ್ಲಿ ಹುಳಿ ಹಿಂಡಬಹುದಾದ ಸಮಸ್ಯೆಗಳನ್ನು ಕೆದಕುವುದನ್ನು ತಪ್ಪಿಸುವುದು ಅತ್ಯುತ್ತಮ. ನೀವು ಕೆಲವು ಪ್ರವಾಸೀ ತಾಣಗಳಿಗೆ ಭೇಟಿ ನೀಡುವ ಮೂಲಕ ನಿಮ್ಮಪ್ರೇಮ ಜೀವನವನ್ನು ಉಜ್ವಲಗೊಳಿಸಬಹುದು.

# ದಾವಣಗೆರೆ ಗೌಡ ಸಾರಸ್ವತ ಸಮಾಜದ ಸುವರ್ಣ ಮಹೋತ್ಸವದ ಕಿರು ಇತಿಹಾಸ

**ದಾವಣಗೆರೆ:** ಗೌಡ ಸಾರಸ್ವತ ಬ್ರಾಹ್ಮಣ ಸಮಾಜ 1974ರಲ್ಲಿ ಒಗ್ಗೂಡುವಿಕೆಯೊಂದಿಗೆ ಸಮಾಜ ಬಾಂಧವರೆಲ್ಲರೂ ನಮ್ಮ ಸಂಸ್ಕೃತಿ, ಸಂಸ್ಕಾರ, ಧಾರ್ಮಿಕ, ಆಧ್ಯಾತ್ಮಿಕ ಪರಂಪರೆಯನ್ನು ಎಲ್ಲಾ ಹಬ್ಬ ಹರಿದಿನಗಳನ್ನು ನಿರಂತರವಾಗಿ ನಡೆಸಿಕೊಂಡು ಬಂದಿರುವುದು ಒಂದು ಅರ್ಧ ಶತಮಾನದ ಐತಿಹಾಸಿಕ ಪರಂಪರೆ.

ಕೀರ್ತಿಶೇಷರಾದ ಡಾ. ಆರ್.ಎನ್.ಶೆಣೈ, ಜಿ.ಪಿ. ಕಾಮತ್, ರಾಧಾಕೃಷ್ಣ ನಾಯಕ್, ಎಂ.ಜಿ.ಕಿಣಿ ಮುಂತಾದವರ ನೇತೃತ್ವದಲ್ಲಿ ಪ್ರಾರಂಭದಲ್ಲಿ ಶ್ರೀ ಗಣೇಶೋತ್ಸವವನ್ನು ಕೆನರಾ ಬ್ಯಾಂಕ್ ಸಭಾಂಗಣ, ಕಾಮತ್ ಹೋಟೆಲ್ ಸಭಾಂಗಣ, ಆರ್.ಹೆಚ್. ಚೌಟ್ರಿ ಸಭಾಂಗಣದಲ್ಲಿ ಅತೀ ವಿಜೃಂಭಣೆಯಿಂದ ಅಚ್ಚುಕಟ್ಟಾಗಿ, ಸಾಂಪ್ರದಾಯಕವಾಗಿ ಆಚರಿಸುತ್ತಿದ್ದು 1976ರಲ್ಲಿ ಈ ಸಮಾಜ ನೋಂದಣಿ (ರಿಜಿಸ್ಟ್ರೇಷನ್) ಆಯಿತು. ದಾವಣಗೆರೆಯ ಎಂ.ಸಿ.ಸಿ. 'ಎ' ಬ್ಲಾಕ್‌ನಲ್ಲಿ ವಿಶಾಲವಾದ ನಿವೇಶನದಲ್ಲಿ 1980 ರಲ್ಲಿ ಶ್ರೀ ಸುಕೃತೀಂದ್ರ ಕಲಾಮಂದಿರದ ಕಟ್ಟಡಕ್ಕೆ ನೆಲಗಟ್ಟು ಹಾಕಲಾಯಿತು.

1982 ರಲ್ಲಿ ಈ ಕಲಾಮಂದಿರವನ್ನು ಶ್ರೀ ಕಾಶೀ ಮಠದ ಶ್ರೀ ಸುಧೀಂದ್ರ ತೀರ್ಥ ಸ್ವಾಮೀಜಿಯವರು ಉದ್ಘಾಟಿಸಿದರು. ಅಂದಿನಿಂದ ಇಂದಿನವರೆಗೂ ಸಮಾಜದ ಮಹಿಳಾ ವಿಭಾಗವೂ ಸೇರಿದಂತೆ ಪ್ರತಿವರ್ಷ ನಿರಂತರವಾಗಿ ಶ್ರೀ ಗಣೇಶೋತ್ಸವ, ಚೂಡಿ ಪೂಜೆ, ಶ್ರೀ ದುರ್ಗಾ ನಮಸ್ಕಾರ, ದಸರಾ, ದೀಪಾವಳಿ, ಏಕಾದಶಿಗಳಲ್ಲಿ ಸಾಮೂಹಿಕ ಭಜನೆ, ಸಾಮೂಹಿಕ ಬ್ರಹ್ಮೋಪದೇಶ, ಸಾಮೂಹಿಕ ಯಜುರುಪಾಕರ್ಮ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಶೈಕ್ಷಣಿಕ ಕಾಳಜಿಯೊಂದಿಗೆ ವಿದ್ಯಾರ್ಥಿವೇತನ, ಕಾರ್ತಿಕ ಏಕಾದಶಿ, ಲಲಿತ ಸಹಸ್ರನಾಮ, ಅವಕಾಶ ವಂಚಿತ ಪ್ರತಿಭಾವಂತ ಪುರುಷರಿಗೆ, ಮಹಿಳೆಯರಿಗೆ, ಮಕ್ಕಳಿಗೆ ಅವರಲ್ಲಿ ಹುದುಗಿರುವ ವಿವಿಧ ಪ್ರತಿಭೆಗಳನ್ನು ಅನಾವರಣಗೊಳಿಸಿ, ಮುಕ್ತವಾದ ವೇದಿಕೆ ಕಲ್ಪಿಸುವ ಸಾಂಸ್ಕೃತಿಕ ಚಟುವಟಿಕೆಗಳು ನಿರಂತರ. 1996ರಲ್ಲಿ ಶ್ರೀ ವಿದ್ಯಾ ವಾದಿರಾಜ



ತೀರ್ಥ ಸಭಾಂಗಣ ಕಲಾಮಂದಿರದ ಮೇಲ್ಭಾಗದಲ್ಲಿ ಶ್ರೀ ವಿಷ್ಣು ಪೈ, ದಿ॥ ಎಂ.ಜಿ.ಕಿಣಿ ನೇತೃತ್ವದಲ್ಲಿ ಇನ್ನೊಂದು ಸಭಾಂಗಣ ಕಟ್ಟಿಸಿದರು. ಇತ್ತೀಚಿಗೆ ಶ್ರೀಮತಿ ಅಮಿತಾ ಡಾ॥ ವೇಣುಗೋಪಾಲ್ ಪೈ ಅವರ ಅಧ್ಯಕ್ಷತೆಯಲ್ಲಿ ಕಲಾಮಂದಿರದ ನವೀಕರಣ ಸುಸಜ್ಜಿತವಾಗಿ ಹೊಂದಿದ್ದು, ಯಾವುದೇ ಸರ್ಕಾರದ, ಇಲಾಖೆಗಳ ಅನುದಾನವಿಲ್ಲದೇ ಸಾರ್ವಜನಿಕ ದೇಣಿಗೆ ಪಡೆಯದೇ ನಮ್ಮ ಸಮಾಜ ಬಾಂಧವರ ತನು–ಮನ, ಧನ, ಸಹಕಾರ ಸಹಯೋಗದೊಂದಿಗೆ ಪೂರ್ಣ ಪ್ರಮಾಣದಲ್ಲಿ ಸುಸಜ್ಜಿತ ಸಭಾಂಗಣವಾಗಿದೆ. ಸುಮಾರು 40 ವರ್ಷಗಳ ಹಿಂದಿನ ಮೇಲಿನ ಸಭಾಂಗಣ ನವೀಕರಿಸಲು ಶತಪ್ರಯತ್ನದಿಂದ ಈಗಿನ ಸಮಿತಿ ಪ್ರಯತ್ನಿಸುತ್ತಿದೆ.

ಅರ್ಧ ಶತಮಾನದ ಈ ಸಮಾಜದ ಶ್ರೇಯೋಭಿವೃದ್ಧಿ ಈಗಿನ ನವ ಪೀಳಿಗೆಗಳು ಸಹಕಾರ, ಸಹಯೋಗ ನೀಡಿ, 50ನೇ ವರ್ಷದ ಸುವರ್ಣ ಸಂಭ್ರಮ ಆಚರಿಸೋಣ ಎಂದು ಶುಭ ಹಾರೈಕೆಗಳು.

ಎಲ್ಲರಿಗೂ ಸಮಾಜದ ಶ್ರೀ ಗಣೇಶೋತ್ಸವದ ಸುವರ್ಣ ಸಂಭ್ರಮದ ಶುಭಾಶಯಗಳು.

**ಕುಡುದರಹಾಳ್ ಗ್ರಾಮಕ್ಕೆ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಭೇಟಿ**

# ಜನರಿಗೆ ಆರೋಗ್ಯ ಸೌಲಭ್ಯ ತಲುಪಿಸಿ



**ಬಳ್ಳಾರಿ:** ಸಾರ್ವಜನಿಕರಿಗೆ ಎಲ್ಲಾ ವಿಧದ ಆರೋಗ್ಯ ಸೇವೆ–ಸೌಲಭ್ಯ ತಲುಪಿಸಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಹೇಳಿದರು.

ಮಂಗಳವಾರ ಸಿರುಗುಪ್ಪ ತಾಲ್ಲೂಕಿನ ಕುಡುದರಹಾಳ್ ಗ್ರಾಮದ ಆರೋಗ್ಯ ಕೇಂದ್ರಕ್ಕೆ ನೀಡಿ ಸಿಬ್ಬಂದಿಗಳೊಂದಿಗೆ ಚರ್ಚಿಸಿ ಮಾತನಾಡಿದ ಅವರು ಸೂಕ್ತ ಸಲಹೆ ಮತ್ತು ಮಾರ್ಗದರ್ಶನ ನೀಡಿದರು.

ಗ್ರಾಮದಲ್ಲಿ ತಾತ್ಕಾಲಿಕ ಆರೋಗ್ಯ ಕೇಂದ್ರದಲ್ಲಿ ಪ್ರತಿದಿನ ಮೂರು ಪಾಳಿ ವೇಳೆಯಲ್ಲಿ ಕೆಲಸ ನಿರ್ವಹಿಸಿಕೊಂಡು ಹೋಗಲು ನಮ್ಮ ಕ್ಲಿನಿಕ್ ಮತ್ತು ಆರ್.ಬಿ.ಎಸ್.ಕೆ ಅಡಿ ವೈದ್ಯರು, ಶುಶ್ರೂಷಕರು, ಗ್ರೂಪ್–ಡಿ ಮತ್ತು ವಾಹನ ಚಾಲಕರನ್ನು ನಿಯೋಜಿಸಲಾಗಿದೆ. ರೋಗಿಗಳ ಹಿತ ದೃಷ್ಟಿಯಿಂದ ತೀವ್ರತರ ಜ್ವರ ಪ್ರಕರಣಗಳಿಗೆ 108 ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಬಳಿಕ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಗ್ರಾಪಂ ವತಿಯಿಂದ ಚರಂಡಿಗಳ ಸ್ವಚ್ಛತೆ ಮತ್ತು ಬ್ಲಿಚಿಂಗ್ ಪೌಡರ್ ಸೇರಿದಂತೆ ಕಾಲಾನುಸಾರ ನಿರ್ವಹಣೆ ಕೈಗೊಳ್ಳಬೇಕು. ಗ್ರಾಮದಲ್ಲಿ ನಿಂತ ನೀರಿನ ತಗ್ಗು ಪ್ರದೇಶಗಳಲ್ಲಿ ಮಣ್ಣು ಹಾಕಿ ಮುಚ್ಚಬೇಕು. ಘನತಾಜ್ಯ ಮತ್ತು ಟೈರ್‌ಗಳ ಸೂಕ್ತ ವಿಲೇವಾರಿ ಮಾಡಲು ತಿಳಿಸಿದರು.

ಒಣ ದಿನ ಎಂದು ನಿಗದಿಪಡಿಸಿ ಒಂದು ದಿನ ಸಂಪೂರ್ಣವಾಗಿ ನೀರು ಸರಬರಾಜು ನಿಲ್ಲಿಸಿ ಸಂಜೆ ವೇಳೆ ಸರಬರಾಜು ಮಾಡಬೇಕು. ಫಾಗಿಂಗ್ ಕಾರ್ಯ ಕೈಗೊಳ್ಳಬೇಕು. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ನಿರೀಕ್ಷಣಾಧಿಕಾರಿಗಳು ಲಾರ್ವ ತಾಣಗಳ ಸಮೀಕ್ಷೆ ನಡೆಸಿ ಲಾರ್ವ ಕಂಡುಬಂದ ಕೂಡಲೇ ಸಂಪೂರ್ಣವಾಗಿ ನೀರು ಖಾಲಿ ಮಾಡುವಂತೆ ಸೂಚಿಸಬೇಕು ಎಂದರು.ಪ್ರತಿದಿನ ಶಾಲೆಯಲ್ಲಿ ಲಾರ್ವಗಳ ಪ್ರಾತ್ಯಕ್ಷಿತೆ ಹಾಗೂ ಡೆಂಗ್ಯು ಜ್ವರ ಕುರಿತು ಆರೋಗ್ಯ ಶಿಕ್ಷಣ ನೀಡಬೇಕು. ಆಶಾ ಕಾರ್ಯಕರ್ತೆಯರಿಂದ ಪ್ರತಿ ದಿನ ಜ್ವರ ಸಮೀಕ್ಷೆ ಮಾಡಬೇಕು. ಸಾಮಾನ್ಯ ಜ್ವರ ಪ್ರಕರಣ ಕಂಡುಬಂದಲ್ಲಿ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ಚಿಕಿತ್ಸಾ ಸೌಲಭ್ಯ ಪಡೆಯಲು ತಿಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಸಾಂಕ್ರಾಮಿಕ ರೋಗಶಾಸ್ತ್ರಜ್ಞೆ ಡಾ.ವಿಶಾಲಾಕ್ಷಿ, ಜಿಲ್ಲಾ ಕೀಟ ಶಾಸ್ತ್ರಜ್ಞೆ ನಂದಾ ಕಡಿ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದಮ್ಮೂರ್ ಬಸವರಾಜ್, ಕ್ಷೇತ್ರ ಕಾರ್ಯಕ್ರಮ ವ್ಯವಸ್ಥಾಪಕ ಪ್ರಹಲ್ಲಾದ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಭೀಮರಾಜ್ ರೆಡಿ,ಕ್ಷೇತ್ರ ಎಪಿಡಾಮ್ಲಾಜಿಸ್ಟ್ ರವಿಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿ ನವೀನ್ ಸೇರಿದಂತೆ ಪ್ರಾಥಮಿಕ ಸುರಕ್ಷತಾ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ಹಾಜರಿದ್ದರು.

**ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಜಿಲ್ಲಾಧ್ಯಕ್ಷ ಬಿ ಬಿ ಅಸೂಟಿ**

# ಜಿಲ್ಲೆಯಲ್ಲಿ 1758 ಕೋಟಿ ವೆಚ್ಚ: ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಉತ್ತಮ ಪ್ರಗತಿ

**ಗದಗ:** ಕರ್ನಾಟಕ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಜನರಲ್ಲಿ ಉತ್ತಮ ಪ್ರತಿಕ್ರಿಯೆ ಪಡೆದಿದ್ದು, ಗದಗ ಜಿಲ್ಲೆಯಾದ್ಯಂತ ಮಹತ್ತರ ಪ್ರಮಾಣದಲ್ಲಿ ಅನುಷ್ಠಾನಗೊಂಡಿರುವುದು ಅಂಕಿ ಅಂಶಗಳಿಂದ ಸ್ಪಷ್ಟವಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ ಹೇಳಿದರು.


ಗದಗ ನಗರದ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2025ರ ಜುಲೈ ಅಂತ್ಯದವರೆಗಿನ ಒಟ್ಟಾರೆ ಪ್ರಗತಿ ಉತ್ತಮವಾಗಿದೆ. ಇದಕ್ಕೆಲ್ಲ ಕಾರಣ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ್ ಅವರು ಮಾರ್ಗದರ್ಶನ ಮೂಲಕ ಪ್ರಗತಿ ಸಾಧನೆಯ ಸಾಧ್ಯವಾಗಿದೆ ಎಂದರು.

ಯೋಜನೆ ಆರಂಭದಿಂದ 'ಗೃಹಲಕ್ಷ್ಮಿ ಯೋಜನೆ'ಯಲ್ಲಿ 2.56 ಲಕ್ಷ ಫಲಾನುಭವಿಗಳಿಗೆ ನೆರವು ತಲುಪಿದ್ದು, ಇದರ ಅನುಷ್ಠಾನ ಪ್ರಮಾಣ 97.99% ಆಗಿದೆ. ಈ ಯೋಜನೆಯಡಿ ಜಿಲ್ಲೆಗೆ 935 ಕೋಟಿ ಸಹಾಯ ನೀಡಲಾಗಿದೆ. ಇದೊಂದು ಮಹತ್ತರ ಮೈಲುಗಲ್ಲಾಗಿದೆ ಎಂದರು.

ಅದೇ ರೀತಿ 'ಅನ್ನಭಾಗ್ಯ ಯೋಜನೆ' ಮೂಲಕ 2.34 ಲಕ್ಷ ಜನರಿಗೆ ಅಕ್ಕಿ ವಿತರಣೆ ಆಗಿದ್ದು, ಇದರ ಅನುಷ್ಠಾನ ಪ್ರಮಾಣ 93.27%. ಇದಕ್ಕೆ 216.82 ಕೋಟಿ ವೆಚ್ಚವಾಗಿದೆ. ಈ ಯೋಜನೆಯಿಂದ ಹಸಿವು ಮುಕ್ತ ಕರ್ನಾಟಕ ಸಾಧ್ಯವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹಸಿವು ಮುಕ್ತ ಕರ್ನಾಟಕ ನನಸಾಗಿದೆ ಎಂದು ತಿಳಿಸಿದರು.

'ಗೃಹಜ್ಯೋತಿ ಯೋಜನೆ' ಅಡಿಯಲ್ಲಿ




2.77 ಲಕ್ಷ ಮನೆಮನೆಗಳಿಗೆ ಉಚಿತ ವಿದ್ಯುತ್ ಪ್ರಯೋಜನ ತಲುಪಿದ್ದು, ಪ್ರಗತಿ ಪ್ರಮಾಣ 98.68%. ಈ ಯೋಜನೆಗೆ 226.25 ಕೋಟಿ ಜಿಲ್ಲೆಯ ಅರ್ಹ ಫಲಾನುಭವಿಗಳಿಗೆ ವೆಚ್ಚವಾಗಿದೆ.

'ಯುವ ನಿಧಿ ಯೋಜನೆ' ಮೂಲಕ 0.059 ಲಕ್ಷ ಯುವಕರಿಗೆ ಹಣಕಾಸು ನೆರವು ತಲುಪಿದ್ದು, ಶೇಕಡಾ 100% ಫಲಾನುಭವಿಗಳು ಪ್ರಯೋಜನ ಪಡೆದುಕೊಂಡಿದ್ದಾರೆ. ಇದರ ವೆಚ್ಚ 11.47 ಕೋಟಿಯಾಗಿದ್ದು, ನಿರುದ್ಯೋಗ ಯುವಕರಿಗೆ ಸಹಕಾರಿಯಾಗಿದೆ ಎಂದು ಹೇಳಿದರು.

ಅದೇ ರೀತಿ, 'ಶಕ್ತಿ ಯೋಜನೆ' ಅಡಿಯಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಒದಗಿಸಲಾಗಿದ್ದು, 1127.47 ಲಕ್ಷ ಪ್ರಯಾಣಗಳು ದಾಖಲಾಗಿವೆ. ಈ ಯೋಜನೆಯು ಕೂಡ 100% ಯಶಸ್ವಿಯಾಗಿ ಅನುಷ್ಠಾನಗೊಂಡಿದ್ದು, 369.29 ಕೋಟಿ ವೆಚ್ಚವಾಗಿದೆ.

ಒಟ್ಟಾರೆ, ಪಂಚ ಗ್ಯಾರಂಟಿ ಯೋಜನೆಗಳಡಿ ಗದಗ ಜಿಲ್ಲೆಯಲ್ಲಿ 1135.202 ಲಕ್ಷ ಫಲಾನುಭವಿಗಳು ಪ್ರಯೋಜನ ಪಡೆದಿದ್ದು, ಸರ್ಕಾರ ಇದಕ್ಕಾಗಿ 1758.83 ಕೋಟಿ ವೆಚ್ಚಮಾಡಿದೆ.

ಪಂಚ ಗ್ಯಾರಂಟಿ ಯೋಜನೆಗಳ ಸಕಾಲಿಕ ಜಾರಿಗೆ ಜನರಿಂದ ಉತ್ತಮ ಪ್ರತಿಕ್ರಿಯೆ ದೊರಕಿದ್ದು, ಸರ್ಕಾರದ ಕಲ್ಯಾಣಕಾರ್ಯಗಳು

**ಜಿಲ್ಲಾ ಸಮಿತಿಯ ಸದಸ್ಯರಾದ ಡಂಬಳದ ವಿರೂಪಾಕ್ಷಪ್ಪ ಯರಾಶಿ ಅವರು ಇತ್ತೀಚಿಗೆ ಅಕಾಲಿಕವಾಗಿ ಮರಣ ಹೊಂದಿದ ಕಾರಣ ಸಭೆಯಲ್ಲಿ ಸಭೆಯ ಆರಂಭಕ್ಕೂ ಮುನ್ನ ಸದರಿಯವರಿಗೆ ಎಲ್ಲರೂ ಮೌನಚರಣೆ ಸಲ್ಲಿಸುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.**

ತಲುಪುತ್ತಿರುವುದಕ್ಕೆ ಇದೊಂದು ಸಾಕ್ಷಿಯಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಯೋಜನೆಗಳ

ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರುಗಳು ತಾಲೂಕ ಅಧ್ಯಕ್ಷರುಗಳು ಜಿಲ್ಲಾ ಸಮಿತಿ ಸದಸ್ಯರುಗಳು ಪಾಲ್ಗೊಂಡು ಗ್ಯಾರಂಟಿ ಅನುಷ್ಠಾನಕ್ಕೆ ಹಾಗೂ ಅರ್ಹರಿಗೆ ಯೋಜನೆ ತಲುಪಿಸುವಲ್ಲಿ ಇರುವ ಸಮಸ್ಯೆ ಹಾಗೂ ಪರಿಹಾರ ಕುರಿತು ಚರ್ಚಿಸಿದರು.

ಸಭೆಯಲ್ಲಿ ಜಿಲ್ಲಾ ಸಮಿತಿಯ ಉಪಾಧ್ಯಕ್ಷರುಗಳಾದ ಹೇಮಂತಗೌಡ ಪಾಟೀಲ, ಪಿ ಬಿ ಅಳಗವಾಡಿ, ಸಮಿತಿ ಸದಸ್ಯರು ಹಾಗೂ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಸಿ ಆರ್ ಮುಂಡರಗಿ, ಜಿ ಪಂ ಯೋಜನಾ ನಿರ್ದೇಶಕ ಎಂ ವಿ ಚಳಗೇರಿ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ದೇವಿರಮ್ಮ ಗೆಳತಿಯರ ಬಳಗದ ಹದಿನೇಳನೆ ಸ್ಪಂದನೇ

**ಚಿಕ್ಕಮಗಳೂರು:** ನಗರದ ಟಿ.ಎಂ.ಎಸ್ ಶಾಲೆಗೆ ಗ್ರೀನ್ ಬೋರ್ಡ್ ಅವಶ್ಯಕತೆ ಇದೆ ಎಂದು ಸಂಸ್ಥೆಯ ಅಧ್ಯಕ್ಷರು ತಿಳಿಸಿದ ಕಾರಣ ಈ ತಿಂಗಳ ದೇವಿರಮ್ಮ ಗೆಳತಿಯರ ಬಳಗದ ವತಿಯಿಂದ ಸಂಸ್ಥೆಗೆ ಹಣ ನೀಡಲಾಯಿತು, ಇದಕ್ಕೆ ಸಹಕರಿಸಿದ ಬಳಗದ ಎಲ್ಲಾ ಗೆಳತಿಯರಿಗೂ ಅಧ್ಯಕ್ಷೆ ರೀನಾ ಸುಜೇಂದ್ರ ರವರು ಧನ್ಯವಾದಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಲೇಖಾ, ಮಾಲತಿ ಜಗದೀಶ್, ಶಶಿಕಲಾ ಸ್ವಾಮಿ, ಪ್ರಣೂಪ



ನಾಗರಾಜ್, ನೇತ್ರಾ ವೆಂಕಟೇಶ್, ಪ್ರಮೀಳಾ ಸೋಮೇಗೌಡ, ಚಂದ್ರಿಕಾ ಪುಟ್ಟಸ್ವಾಮಿ, ಚಿತ್ರಗೌಡ, ರತಿಪ್ರವೀಣ್, ಮಂಜುಳ ಹರೀಶ್, ಮಲ್ಲಿಕಾ ಯೋಗೇಶ್ ಉಪಸ್ಥಿತರಿದ್ದರು.

# ಕಳಸಾಪುರ ಶ್ರೀ ಲಕ್ಷ್ಮೀರಂಗನಾಥ ಸ್ವಾಮಿ ಭಕ್ತಿಗೀತೆ ಲೋಕಾರ್ಪಣೆ

**ಚಿಕ್ಕಮಗಳೂರು:** ಕಳಸಾಪುರದ ಇತಿಹಾಸದಲ್ಲೇ ಪ್ರಥಮ ಬಾರಿಗೆ ನಮ್ಮೂರಿನ ಶ್ರೀ ಲಕ್ಷ್ಮೀರಂಗನಾಥ ಸ್ವಾಮಿ ದೇವರ ಕುರಿತು ಭಕ್ತಿಗೀತೆಯೊಂದನ್ನು ಹೊರತರುತ್ತಿರುವುದು ಅತ್ಯಂತ ಸಂತಸದ ಸಂಗತಿ. ಈ ಹಾಡು ದೇವರ ಭಕ್ತರಾದ ನಮಗೆ ನಿಜಕ್ಕೂ ರೋಮಾಂಚನ ತಂದಿದೆ ಎಂದು ಕಳಸಾಪುರದ ಶ್ರೀ ಲಕ್ಷ್ಮೀರಂಗನಾಥ ಸ್ವಾಮಿ ಆಡಳಿತ ಮಂಡಳಿಯ ಹಿರಿಯ ಸದಸ್ಯ ಪೋಸ್ಟ್ ಕೆ.ಟಿ.ತಿಮ್ಮಪ್ಪ ತಿಳಿಸಿದರು. ಕಲ್ಕಟ್ಟೆ ಪುಸ್ತಕದ ಮನೆ, ಸೂರಂಕಣ, ದೀವಿಗೆ ಬಳಗದವರು ದೇವಾಲಯದಲ್ಲಿ ಇತ್ತೀಚಿಗೆ ಏರ್ಪಡಿಸಿದ್ದ ಭಕ್ತಿಗೀತೆ ಲೋಕಾರ್ಪಣೆ ಸಮಾರಂಭದಲ್ಲಿ ಅವರು ಮಾತನಾಡಿದರು.ಒಂದು ಹಾಡಿನಲ್ಲಿ ದೇವಾಲಯದ ಚಿತ್ರಣ, ದೇವರ ಮಹಿಮೆ, ದೇವಸ್ಥಾನದ ವಿವಿಧ ಆಚರಣೆಗಳನ್ನು ಸೇರಿಸಿ ಬರೆಯುವ ಕೆಲಸವನ್ನು ನಾಗರಾಜರಾವ್ ಕಲ್ಕಟ್ಟೆ ಮಾಡಿದ್ದಾರೆ. ಅವರು ಈ ದಿಸೆಯಲ್ಲಿ ಅಭಿನಂದನಾರ್ಹರು. ದೇವಾಲಯದ ದಾರಿಯಲ್ಲೇ ಭೂತಪ್ಪನ ಗುಡಿಯಿದೆ ಎಂದು ಬರೆದಿರುವುದು ಅವರ ಸೂಕ್ಷ್ಮ ಗ್ರಹಿಕೆಗೆ ಸಾಕ್ಷಿ ಎಂದರು. ಸಮಾಜ ಸೇವಕ ಚೇತನ್




ಕಳಸಾಪುರ ಮಾತನಾಡಿ, ಕಲ್ಕಟ್ಟೆ ಪುಸ್ತಕದ ಮನೆಯವರು ಹೆಚ್.ಎನ್.ಮಲ್ಲೇಶರಾವ್ ಅವರ ನೆನಪಿನಲ್ಲಿ ಹೊರತರುತ್ತಿರುವ ಕಲ್ಕಟ್ಟೆ ಗಾನದೀವಿಗೆ ಸರಣಿಯ ಮೂವತ್ತಾರನೇ ಗೀತೆಯಾಗಿ ನಮ್ಮೂರ ಭಕ್ತಿಗೀತೆ ಬಂದಿದೆ. ನಿಜಕ್ಕೂ ಈ ಹಾಡು ನಮ್ಮೆಲ್ಲರ ಪಾಲಿಗೆ ಹೆಮ್ಮೆಯ ಗೀತೆಯಾಗಿದೆ. ಕಳಸಾಪುರವನ್ನೇ ವೈಕುಂಠ ಮಾಡಿರುವೆ ಎಂಬ ಸಾಲು ನಿಜಕ್ಕೂ ದೈವಭಕ್ತರಿಗೆ ಹರ್ಷ ತಂದಿದೆ ಎಂದರು.

ಉಪನ್ಯಾಸಕ ಹೆಚ್.ಜಿ.ಶಾಂತಕುಮಾರ್ ಮಾತನಾಡಿ, ಭಕ್ತಿಗೀತೆಯನ್ನು ರಚಿಸುವುದು, ಸಂಗೀತ ಸಂಯೋಜಿಸುವುದು, ಹಾಡುವುದು ಹೀಗೆ ಮೂರೂ ಹಂತದ ಕೆಲಸವನ್ನು ನಾಗರಾಜರಾವ್ ಕಲ್ಕಟ್ಟೆಯವರು ಒಬ್ಬರೇ ಮಾಡುತ್ತಿದ್ದಾರೆ. ನಿಜಕ್ಕೂ ಶ್ರೀಯುತರದು ದೈತ್ಯ ಸಾಂಸ್ಕೃತಿಕ ಪ್ರತಿಭೆ.

ಹಿನ್ನೆಲೆ ಸಂಗೀತ ನೀಡಿದ ಕೆ.ಎನ್.ನಾಗಭೂಷಣ್ ಹಾಗೂ ನಿರ್ಮಾಪಕಿ ರೇಖಾನಾಗರಾಜರಾವ್ ಅವರಿಬ್ಬರೂ ಇವರಿಗೆ ಜೊತೆಯಾಗಿ ನಿಂತಿರುವುದರಿಂದ ಸರಣಿ ಸರಾಗವಾಗಿ ಸಾಗುತ್ತಿದೆ ಎಂದು ಶ್ಲಾಘಿಸಿದರು.

ಎಫ್‌ಡಿಎ ಸರಿತಾ ಮೊದಲಾದವರು ಉಪಸ್ಥಿತರಿದ್ದರು. ನಾಗರಾಜರಾವ್ ಕಲ್ಕಟ್ಟೆ ನಿರೂಪಿಸಿ, ವಂದಿಸಿದರು.

# ಸೂಡಾ ನಿವೇಶನ ಹಂಚಿಕೆಗೆ ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಶಿವಮೊಗ್ಗ:** ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರವು ತನ್ನ ವ್ಯಾಪ್ತಿಯಲ್ಲಿರುವ ಖಾಸಗಿ ಬಡಾವಣೆಗಳಲ್ಲಿ ಲಭ್ಯವಿರುವ ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡುವ ಕುರಿತಾದ ಅರ್ಜಿ ಸಲ್ಲಿಸುವ ಅವಧಿಯನ್ನು ಸೆ.06 ರವರೆಗೆ ವಿಸ್ತರಿಸಲಾಗಿದೆ.

ದಿ: 29–07–2025 ರಂದು ಪ್ರಕಟಣೆ ಹೊರಡಿಸಿ, ನಿವೇಶನಕ್ಕಾಗಿ ಅರ್ಜಿಗಳನ್ನು ಸಲ್ಲಿಸಲು 29–08–2025 ಕಡೆಯ ದಿನವೆಂದು ನಿಗದಿಪಡಿಸಲಾಗಿತ್ತು.

ಆದರೆ ಕಾರಣಾಂತರದಿಂದ ಇದೀಗ ಅರ್ಜಿ ಸಲ್ಲಿಸುವ ಕಡೆಯ ದಿನವನ್ನು ದಿ: 06–09–2025 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಪ್ರಾಧಿಕಾರದ ವೆಬ್‌ಸೈಟ್ ಹಾಗೂ ಮೊಬೈಲ್ ಸಂಖ್ಯೆ : 9980005678 ನ್ನು ಸಂಪರ್ಕಿಸಬಹುದೆಂದು ಶಿವಮೊಗ್ಗ–ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಹಾಗೂ ಪೌರ ಕಾರ್ಮಿಕರಿಗೆ ನಿವೇಶನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ:** ಜಗಳೂರು ಪಟ್ಟಣ ವ್ಯಾಪ್ತಿಯ ನಿವೇಶನ ರಹಿತ ಪರಿಶಿಷ್ಟ ಜಾತಿ, ಪರಿಶಿಷ್ಟ ಪಗಡದ ಅಲೆಮಾರಿ, ಅರೆ ಅಲೆಮಾರಿ ಸಮುದಾಯ, ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಹಾಗೂ ಪೌರ ಕಾರ್ಮಿಕರಿಗೆ ನಿವೇಶನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹರು ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಆಗಸ್ಟ್ 25 ರೊಳಗಾಗಿ ಜಗಳೂರು ಪಟ್ಟಣ ಪಂಚಾಯಿತಿಗೆ ಸಲ್ಲಿಸಬೇಕೆಂದು ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಸಿ.ಲೋಕ್ಯಾನಾಯ್ಕ ತಿಳಿಸಿದ್ದಾರೆ.

# ಆಧುನಿಕ ಹೈನುಗಾರಿಕೆ ತರಬೇತಿ

**ದಾವಣಗೆರೆ :** ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಗಸ್ಟ್ 21 ಮತ್ತು 22 ರಂದು ಆಧುನಿಕ ಹೈನುಗಾರಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೊತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

# ಪುಸ್ತಕಗಳ ಪ್ರದರ್ಶನ

**ದಾವಣಗೆರೆ** : 2022 ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಹಾಗೂ ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಪುಸ್ತಕಗಳ ಪ್ರದರ್ಶನವನ್ನು ಆಗಸ್ಟ್ 20 ರಿಂದ 22 ವರೆಗೆ ಬೆಳಿಗ್ಗೆ 10 ರಿಂದ ಸಂಜೆ 5.30ರ ವರೆಗೆ ಡಾ. ವಿಷ್ಣುವರ್ಧನ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರ, ಎಂ.ಸಿ.ಬಡಾವಣೆ, (ಡಾ. ಬಾಲಗಂಗಾಧರನಾಥ– 560040 ಸ್ವಾಮೀಜಿ ಮಲ್ಟಿ ಸ್ಪೆಶಾಲಿಟಿ ಆಸ್ಪತ್ರೆ ಹತ್ತಿರ) ವಿಜಯನಗರ, ಬೆಂಗಳೂರು ಇಲ್ಲಿ ಆಯೋಜಿಸಲಾಗಿದ್ದು, ಹಾಗೂ ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ಜಿಲ್ಲಾ, ನಗರಕೇಂದ್ರ ಗ್ರಂಥಾಲಯಗಳ ಕಚೇರಿಗಳಲ್ಲಿ ಪ್ರದರ್ಶಿಸಲು ಮತ್ತು ಇಲಾಖೆಯ ಅಧಿಕೃತ ವೆಬ್ ಸೈಟ್ : dpi.karnataka.gov.in ರಲ್ಲಿ ಪ್ರಕಟಿಸಲಾಗುವುದು.

ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು, ಲೇಖಕ ಪ್ರಕಾಶಕರು, ಪ್ರಕಾಶಕರು, ಮತ್ತು ಪುಸ್ತಕ ಮಾರಾಟಗಾರರು ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 30 ರೊಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ. ವಿಶ್ವೇಶ್ವರಯ್ಯ ಮುಖ್ಯಗೋಪುರ, 4ನೇ ಮಹಡಿ. ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು 560 001 ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸಬಹುದೆಂದು ಜಿಲ್ಲಾ ಕೇಂದ್ರ ಮುಖ್ಯ ಗ್ರಂಥಾಲಯಾಧಿಕಾರಿ ತಿಳಿಸಿದ್ದಾರೆ.

# ನಲವತ್ತು ಸಾವಿರ ಮೌಲ್ಯದ 400 ಮೀಟರ್ ಪೈಪ್ ಕಳವು : ಆರೋಪಿಗಳ ಬಂಧನ



**ಕಡೂರು:** ತಾಲ್ಲೂಕಿನ ಸಿಂಗಟಗೆರೆ ಸಮೀಪದ 9ನೇ ಮೈಲಿಕಲ್ಲು ಸಮೀಪದಲ್ಲಿ ಪೈಪ್‌ಲೈನ್ ಕಾಮಗಾರಿ ಜಾಗದಲ್ಲಿದ್ದ 40ಸಾವಿರ ಮೌಲ್ಯದ 400 ಮೀಟರ್ ಪೈಪ್ ಕಳವು ಮಾಡಿದ್ದ ಮೂವರು ಆರೋಪಿಗಳನ್ನು ಸಿಂಗಟಗೆರೆ ಪೊಲೀಸರು ಬಂಧಿಸಿ, ಪೈಪ್‌ಅನ್ನು ವಶಪಡಿಸಿಕೊಂಡಿದ್ದಾರೆ.

ತುಮಕೂರು ನಗರದ ಬೋವಿ ಕಾಲೊನಿಯ ವೆಂಕಟೇಶ್, ಗಿರೀಶ್ ಮತ್ತು ಮಂಜುನಾಥ್ ಬಂಧಿತ ಆರೋಪಿಗಳು. ಜುಲೈ 14ರಂದು ಪೈಪ್ ಕಳವು ಮಾಡಿದ್ದು, ಖಚಿತ ಮಾಹಿತಿ ಮೇರೆಗೆ ಆರೋಪಿಗಳನ್ನು ಸಿಂಗಟಗೆರೆ ಪೊಲೀಸರು ವಶಕ್ಕೆ ಪಡೆದು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಧರ್ಮಸ್ಥಳದ ತನಿಖೆ ಕುರಿತು ಪ್ರಚೋದನಾಕಾರಿ ಸುದ್ದಿ ಹರಡಿದರೆ ಕಠಿಣ ಕ್ರಮ

**ಬೆಂಗಳೂರು,ಆ.1:** ಧರ್ಮಸ್ಥಳದ ಅಸಹಜ ಸಾವಿನ ಪ್ರಕರಣಗಳ ಬಗ್ಗೆ ಯಾವುದೇ ರೀತಿಯ ಪ್ರಚೋದನಾಕಾರಿ, ಆಕ್ಷೇಪಾರ್ಹ ಮತ್ತು ಸುಳ್ಳು ಸುದ್ದಿ, ಮಾಹಿತಿಗಳನ್ನು ಹರಡದಂತೆ ರಾಜ್ಯ ಸರ್ಕಾರ ಎಚ್ಚರಿಕೆ ನೀಡಿದೆ.

ಈ ಕುರಿತಾಗಿ ಪ್ರಚೋದನಾಕಾರಿ ಆಕ್ಷೇಪಾರ್ಹ ಮತ್ತು ಸುಳ್ಳು ಸುದ್ದಿಗಳನ್ನು ಹರಡಿದರೆ ಅಥವಾ ಫಾರ್ವರ್ಡ್ ಮಾಡಿದರೆ ಅವುಗಳಿಗೆ ಪ್ರತಿಕ್ರಿಯೆಗಳನ್ನು ನೀಡಿದರೆ ಕಾನೂನು ಕ್ರಮ ಜರುಗಿಸಲು ತೀರ್ಮಾನಿಸಿದೆ.

ಧರ್ಮಸ್ಥಳದ ವಿದ್ಯಮಾನ ಕುರಿತಂತೆ ಗೃಹ ಮಂತ್ರಿ ಜಿ ಪರಮೇಶ್ವರ್ ಅವರು ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ, ಡಿಜಿಪಿ ಪ್ರಣಬ್ ಮೊಹಂತಿ, ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಹಿರಿಯ ಪೊಲೀಸ್ ಅಧಿಕಾರಿಗಳಾದ ಮುರುಗನ್, ಶರತ್ ಚಂದ್ರ ಅವರೊಂದಿಗೆ ಸಭೆ ನಡೆಸಿದರು.

ಈ ಸಭೆಯಲ್ಲಿ ಸುಳ್ಳು ಸುದ್ದಿ ಮತ್ತು ಪ್ರಚೋದನಕಾರಿ ಮಾಹಿತಿಗಳನ್ನು ಹಂಚಿಕೊಳ್ಳುತ್ತಿರುವುದರಿಂದ ಸಾಕಷ್ಟು ಗೊಂದಲ ಉಂಟಾಗುತ್ತಿದೆ ಇದಕ್ಕೆ ಕಡಿವಾಣ ಹಾಕಿ ಪ್ರಕರಣದ ಬಗ್ಗೆ ವಿಶೇಷ ತನಿಖಾ ತಂಡ ಸೂಕ್ತ ರೀತಿಯಲ್ಲಿ ತನಿಖೆ ನಡೆಸಲು ತೀರ್ಮಾನ ಕೈಗೊಳ್ಳಲಾಗಿದೆ.

ಸುಳ್ಳು ಸುದ್ದಿಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುತ್ತಿರುವ ಪ್ರಚೋದನಕಾರಿ ಹೇಳಿಕೆ ಮತ್ತು ಫಾರ್ವರ್ಡ್ ಗಳಿಂದಾಗಿ ತನಿಖಾ ತಂಡದ ಮೇಲೆ ಸಾಕಷ್ಟು ಒತ್ತಡ ಉಂಟಾಗುತ್ತಿದೆ ಇದನ್ನು ತಪ್ಪಿಸುವ ದೃಷ್ಟಿಯಿಂದ ಸುಳ್ಳು ಸುದ್ದಿ ಮತ್ತು ಪ್ರಚೋದನಕಾರಿ ಹೇಳಿಕೆಗಳಿಗೆ ತಡೆವಾಡ ಹಾಕಲು ತೀರ್ಮಾನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

**ಮೊಹಾಂತಿ ಭೇಟಿ:** ಇದಕ್ಕೂ ಮುನ್ನ ವಿಶೇಷ ತನಿಕ ತಂಡದ ಮುಖ್ಯಸ್ಥ ಪ್ರಣಾಬ್ ಮೊಹಾಂತಿ ಅವರು ಪರಮೇಶ್ವರ್ ಅವರನ್ನು ಭೇಟಿ ಮಾಡಿ ತನಿಖೆಯ ಕುರಿತು ಸಂಪೂರ್ಣ ವಿವರವನ್ನು ನೀಡಿದರು.

ಉತ್ಖನನ ನಡೆಯುತ್ತಿರುವ ನಡೆಯುತ್ತಿರುವ ಸ್ಥಳದಲ್ಲಿ ದೊರಕಿರುವ ಅಸ್ಥಿಪಂಜರದ ಮೂಳೆಗಳನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ರವಾನಿಸಲಾಗಿದೆ ಅದರ ವರದಿ ಬಂದ ನಂತರ ಮೃತ ದೇಹ ಮಹಿಳೆ ಅಥವಾ ಪುರುಷರದ್ದು ಎಂಬ ಬಗ್ಗೆ ಮಾಹಿತಿ ಲಭ್ಯವಾಗಲಿದೆ ಸದ್ಯ ಲಭ್ಯವಿರುವ ಮಾಹಿತಿ ಆಧರಿಸಿ ಮೃತದೇಹ ಯಾರಿಗೆ ಸೇರಿದ್ದು ಎಂಬ ಬಗ್ಗೆ ತನಿಖೆ ಮುಂದುವರೆದಿದೆ ತಿಳಿಸಿರುವುದಾಗಿ ಗೊತ್ತಾಗಿದೆ.

ಮಾಹಿತಿ ಇಲ್ಲ:

ಈ ಬೇಟಿಯ ಬಗ್ಗೆ ಪ್ರತಿಕ್ರಿಯೆ ನೀಡಿದ ಗೃಹಮಂತ್ರಿ ಪರಮೇಶ್ವರ ಅವರು ವಿಶೇಷ ತನಿಖಾ ತಂಡ ತನ್ನ ತನಿಕೆಯನ್ನು ಪೂರ್ಣಗೊಳಿಸಿ ಸರ್ಕಾರಕ್ಕೆ ವರದಿ ನೀಡುವವರೆಗೆ ತನಿಖೆಯ ಕುರಿತು ಯಾವುದೇ ಮಾಹಿತಿಯನ್ನು ಹಂಚಿಕೊಳ್ಳುವುದಿಲ್ಲ ಎಂದು ತಿಳಿಸಿದರು.

ಇದೊಂದು ಸೂಕ್ಷ್ಮ ಪ್ರಕರಣವಾಗಿದೆ ವಿಶೇಷ ತನಿಖಾ ತಂಡ ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸುತ್ತಿದೆ ಇದರ ಪ್ರಗತಿಯ ಬಗ್ಗೆ ಪ್ರತಿನಿತ್ಯ ಮಾಹಿತಿ ನೀಡುವುದರಿಂದ ತನಿಖೆಯ ಸ್ವರೂಪ ಬದಲಾಗುವ ಸಾಧ್ಯತೆ ಇದೆ ಹೀಗಾಗಿ ವರದಿ ತಮ್ಮ ಕೈ ಸೇರುವವರಿಗೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ತನಿಕಾಉ ತಂಡದ ಮುಖ್ಯಸ್ಥರಾಗಿರುವ ಪ್ರಣಬ್ ಮೊಹಾಂತಿ ಅವರು ರಾಜ್ಯದಿಂದ ಕೇಂದ್ರ ಸೇವೆಗೆ ಹೋಗಲಿರುವ ಐಪಿಎಸ್ ಅಧಿಕಾರಿಗಳ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿ ಇದ್ದಾರೆ ಆದರೆ ಸದ್ಯಕ್ಕೆ ಅವರನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸುವ ಯಾವುದೇ ಪ್ರಸ್ತಾಪ ತಮ್ಮ ಮುಂದೆ ಇಲ್ಲ ಎಂದು ತಿಳಿಸಿದರು.

**ಶೋಧ ಕಾರ್ಯ:** ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ನೇತ್ರಾವತಿ ನದಿ ಪಕ್ಕದ ಕಾಡಿನಲ್ಲಿ ಮೃತದೇಹಗಳ ಅವಶೇಷ ಪತ್ತೆಗಾಗಿ ಶೋಧ ಕಾರ್ಯ ಶುಕ್ರವಾರವೂ ಮುಂದುವರಿದಿದೆ.

# ಆ.27 ರಿಂದ ಸೆ.15ರವರೆಗೆ ಕಲರ್ ಪೇಪರ್ ಬ್ಲಾಸ್ಟಿಂಗ್ ಸಿಡಿಮದ್ದು ನಿಷೇಧ

**ಶಿವಮೊಗ್ಗ :** ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಹಬ್ಬಗಳ ಸಂದರ್ಭದಲ್ಲಿ ಮುಂಜಾಗ್ರತ ಕ್ರಮವಾಗಿ ಜಿಲ್ಲೆಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಶಿವಮೊಗ್ಗ ನಗರ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ದಿನಾಂಕ:27–08–2025 ರಿಂದ 15–09–2025 ರವರೆಗೆ ಜಿಲ್ಲೆಯಾದ್ಯಂತ ಕಲರ್ ಪೇಪರ್ ಬ್ಲಾಸ್ಟಿಂಗ್. ಸಿಡಿಮದ್ದು ಸಿಡಿಸುವುದನ್ನು ನಿಷೇಧಗೊಳಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆಯವರು ಆದೇಶಿಸಿದ್ದಾರೆ.

# ರೈತರು ಬೆಳೆಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಿ

## ಯೂರಿಯಾ ಗೊಬ್ಬರಕ್ಕೆ ಆತಂಕ ಬೇಡ : ಜಂಟಿ ಕೃಷಿ ನಿರ್ದೇಶಕರು

**ಬಳ್ಳಾರಿ :** ಜಿಲ್ಲೆಯ ರೈತರು ತಾವು ಬೆಳೆಯುವ ಬೆಳಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಬೇಕು. ಯೂರಿಯಾ ರಸಗೊಬ್ಬರಕ್ಕೆ ಆತಂಕಪಡುವ ಅಗತ್ಯವಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಜುಲೈ ಮಾಹೆಯವರೆಗೆ ಒಟ್ಟು 27025 ಮೆ.ಟನ್‌ಗಳ ಬೇಡಿಕೆ ಇದ್ದು, ಇಲ್ಲಿಯವರೆಗೆ ಪ್ರಾರಂಭಿಕ ಶಿಲ್ಕು ಸೇರಿ 34,163 ಮೆ.ಟನ್ ದಾಸ್ತಾನು ಮಾಡಲು, ಈ ಪೈಕಿ 25,887 ಮೆ.ಟನ್ ವಿತರಣೆಯಾಗಿ 8,286 ಮೆ.ಟನ್‌ಗಳಷ್ಟು ದಾಸ್ತಾನು ಉಳಿದಿದೆ.

ಜಿಲ್ಲೆಯಲ್ಲಿ ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಬಿತ್ತನೆ ಮಾಡಲು ಲಭ್ಯವಿದ್ದ ಒಟ್ಟು 2,81,522 ಹೆಕ್ಟೇರ್ ಸಾಗುವಳಿ ಪ್ರದೇಶಕ್ಕೆ ಅನುಗುಣವಾಗಿ ಯೂರಿಯಾ ರಸಗೊಬ್ಬರಗಳ ಬೇಡಿಕೆ ಅಂದಾಜಿಸಲಾಗಿ ಮಾಹೆವಾರು ಕಾರ್ಯಕ್ರಮವನ್ನು ಸರಬರಾಜುದಾರರುವಾರು ರೂಪಿಸಿಕೊಳ್ಳಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಪೂರ್ವ ಮುಂಗಾರು ಮಳೆಯು ಉತ್ತಮವಾಗಿ ಬಂದ ಕಾರಣ ಹೆಚ್ಚಿನ ಪ್ರದೇಶದಲ್ಲಿ ಬೆಳೆಗಳನ್ನು ಬಿತ್ತನೆ ಮಾಡಲು ರೈತರು ಉತ್ಸುಕತೆ ತೋರಿದ ಪರಿಣಾಮವಾಗಿ ಎರಡು, ಮೂರು ವರ್ಷಗಳಿಂದ ಮೆಣಸಿನಕಾಯಿ ಬೆಳೆಯ ಬೆಲೆಯಲ್ಲಿ ಕುಸಿತವಾದ ಪರಿಣಾಮ ಜಿಲ್ಲೆಯಲ್ಲಿ ಮೆಕ್ಕೆಜೋಳ ಮತ್ತು ಹತ್ತಿ ಬೆಳೆಯ ಬಿತ್ತನೆ ಪ್ರದೇಶ ಕ್ರಮವಾಗಿ



24,000 ಹೆಕ್ಟೇರ್‌ನಿಂದ 30,000 ಹೆಕ್ಟೇರ್‌ಗೆ ಹಾಗೂ 20,000 ಹೆಕ್ಟೇರ್‌ನಿಂದ 25,000 ಹೆಕ್ಟೇರ್‌ಗೆ ಏರಿ–ಕೆಯಾಗಿದೆ.

ಮುಖ್ಯವಾಗಿ ತುಂಗಭದ್ರ ನದಿಯ ನೀರನ್ನು ಕಾಲುವೆಗಳಿಗೆ ಮುಂಚಿತವಾಗಿ ಹರಿಸಿರುವುದರಿಂದ ಸಂಯುಕ್ತ ಗೊಬ್ಬರಗಳಿಗೆ ಹೋಲಿಕೆ ಮಾಡಿದಲ್ಲಿ ಯೂರಿಯಾ ರಸಗೊಬ್ಬರದ ಬೆಲೆ ಕಡಿಮೆಯಿರುವುದರಿಂದ ಸಮತೋಲನವಾಗಿ ರಸಗೊಬ್ಬರಗಳನ್ನು ಬಳಸದೇ ಕೇವಲ ಯೂರಿಯಾ ರಸಗೊಬ್ಬರವನ್ನು ಹೆಚ್ಚಾಗಿ ಬಳಸುತ್ತಿರುವುದು ಕಂಡುಬಂದಿದೆ ಮತ್ತು ವಿಜ್ಞಾನಿಗಳು ಹಾಗೂ ಇಲಾಖೆಯಿಂದ ಶಿಫಾರಸ್ಸು ಮಾಡಲಾದ ಪ್ರಮಾಣಕ್ಕಿಂತ ರೈತರು ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡುತ್ತಿರುವುದು ಹಾಗೂ ಕೆಲವು ರೈತರು ಬೆಳೆಯ ವಿವಿಧ ಹಂತಗಳಲ್ಲಿ ಬಳಕೆಗೆ ಬೇಕಾದ ರಸಗೊಬ್ಬರಗಳನ್ನು ಮುಂಗಡವಾಗಿ ಖರೀದಿಸಿ ದಾಸ್ತಾನು ಮಾಡಿಕೊಂಡಿದ್ದಾರೆ.

ಈ ಮೇಲಿನ ಕಾರಣಗಳಿಂದಾಗಿ ಮಾಹೆವಾರು ಯೂರಿಯಾ ರಸಗೊಬ್ಬರದ ಬೇಡಿಕೆ, ಸರಬರಾಜು, ವಿತರಣೆ ಮತ್ತು ದಾಸ್ತಾನು ಇಲಾಖೆಯು ರೂಪಿಸಿದ ಯೋಜನೆಯನುಸಾರ ಇದ್ದಾಗ್ಯೂ ಸಹ ಜಿಲ್ಲೆಯ ರೈತರಿಂದ ಯೂರಿಯಾ ರಸಗೊಬ್ಬರಕ್ಕೆ ಹೆಚ್ಚಿನ ಬೇಡಿಕೆ ಪದೇ ಪದೇ ಬರುತ್ತಿರುವುದನ್ನು ಕೃಷಿ ಇಲಾಖೆಯು ಗಂಭೀರವಾಗಿ ಪರಿಗಣಿಸಿ ಮುಂಗಾರು ಪೂರ್ವ ಮತ್ತು ಪ್ರಸಕ್ತ ಮುಂಗಾರಿನಲ್ಲಿ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಜಿಲ್ಲೆಯ ಸಗಟು ಮತ್ತು ಚಿಲ್ಲರೆ ರಸಗೊಬ್ಬರ ಪರಿವೀಕ್ಷಕರು ಅನಿರೀಕ್ಷಿತ ಭೇಟಿ ನೀಡಿ ರಸಗೊಬ್ಬರದ ದಾಸ್ತಾನಿನ ಜೊತೆಗೆ ರಸಗೊಬ್ಬರ ನಿಯಂತ್ರಣ ಆದೇಶ 1985ರಡಿಯ ಎಲ್ಲಾ ಅಂಶಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ. ಅಭಿಯಾನ ರೂಪದಲ್ಲಿ ಜಿಲ್ಲೆಯ 450ಕ್ಕೂ ಹೆಚ್ಚು ಮಳಿಗೆಗಳನ್ನು ಸಮಗ್ರವಾಗಿ ತಪಾಸಣೆ ಕೈಗೊಂಡು ಗುಣ ನಿಯಂತ್ರಣದಡಿ ಸುಮಾರು 200ಕ್ಕೂ ಮೇಲ್ಪಟ್ಟು ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ರಸಗೊಬ್ಬರಗಳ ಗುಣಮಟ್ಟವನ್ನು ಖಾತ್ರಿಪಡಿಸಿಕೊಳ್ಳಲು ಹಾಗೂ ದಾಸ್ತಾನು ಮತ್ತು ವಿತರಣೆಯಲ್ಲಿ ರಸಗೊಬ್ಬರ ವಿತರಕರು ಪಾಲಿಸಬೇಕಾದ ಅಗತ್ಯ ಕ್ರಮಗಳ ಕುರಿತು ಪರವಾನಿಗೆ ಹೊಂದಿರುವುದು, ಬಿಲ್ಲುಗಳನ್ನು ಕಡ್ಡಾಯವಾಗಿ ನೀಡುವ ಬಗ್ಗೆ, ಹೆಚ್ಚಿನ ದರಕ್ಕೆ ಮಾರಾಟ ಮಾಡದಿರುವ ಬಗ್ಗೆ ಹೋಬಳಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ವಿವಿಧ ಸಭೆಗಳಲ್ಲಿ ಅಗತ್ಯ ಎಚ್ಚರಿಕೆ ಮತ್ತು ಸೂಚನೆಗಳನ್ನು ಸಹ ನೀಡಲಾಗಿದೆ. ಜೊತೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನಗಳನ್ವಯ ಯೂರಿಯಾ ಗೊಬ್ಬರದ ಅವೈಜ್ಞಾನಿಕ ಬಳಕೆಯ ದುಷ್ಪರಿಣಾಮಗಳು ಮತ್ತು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ನ್ಯಾನೋ ರಸಗೊಬ್ಬರಗಳನ್ನು (ವಿಶೇಷವಾಗಿ ನ್ಯಾನೋ ಯೂರಿಯಾ ಮತ್ತು ಡಿ.ಎ.ಪಿ) ಪರ್ಯಾಯವಾಗಿ ಬಳಸುವ ಕುರಿತು ಅರಿವು ಮೂಡಿಸಲಾಗುತ್ತಿದೆ.

ಬೆಳೆಗಳ ಪದ್ಧತಿಯಲ್ಲಿ ಆದ ಹೆಚ್ಚಿನ ಬದಲಾವಣೆ, ಯೂರಿಯಾ ರಸಗೊಬ್ಬರದ ಕಡಿಮೆ ಬೆಲೆ ಮತ್ತು ಸಂಯುಕ್ತ ಗೊಬ್ಬರಗಳ ಹೆಚ್ಚಿನ ಬೆಲೆ ಮುಂಚಿತವಾಗಿ ಆಗಮಿಸಿದ ಮುಂಗಾರು ಹಾಗೂ ತುಂಗಭದ್ರ ನದಿ ನೀರು ಮತ್ತು ರೈತರ ಅವೈಜ್ಞಾನಿಕವಾಗಿ ಬಳಸುತ್ತಿರುವ ಪ್ರಮಾಣದ ಕಾರಣ ಜಿಲ್ಲೆಯಲ್ಲಿನ ಯೂರಿಯಾ ಗೊಬ್ಬರದ ಬೇಡಿಕೆ ಹೆಚ್ಚುತ್ತಿರುತ್ತದೆ. ಜಿಲ್ಲೆಯಲ್ಲಿ ಹೆಚ್ಚಿನ ಕೊರತೆ ಇಲ್ಲದಿದ್ದರೂ ಮಾಹೆವಾರು ರೂಪಿಸಿರುವ ರಸಗೊಬ್ಬರಗಳ ಕಾರ್ಯಕ್ರಮದ ಅನುಸಾರ ಸರಬರಾಜು, ವಿತರಣೆ ಮತ್ತು ದಾಸ್ತಾನನ್ನು ಸರಿದೂಗಿಸಿ ರೈತರಿಗೆ ಅವಶ್ಯವಿರುವ ಯೂರಿಯಾ ಗೊಬ್ಬರದ ಜೊತೆಗೆ ಇತರೆ ಅವಶ್ಯಕತೆ ಗೊಬ್ಬರಗಳನ್ನು ಒದಗಿಸಲು ಇಲಾಖೆಯು ನಿರಂತರ ಕ್ರಮವಹಿಸಲಾಗಿದೆ.

ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಬೇಡಿಕೆಯನ್ನು ಸಹ ಈಗಾಗಲೇ ಮಾಹೆ ಹಾಗು ಸರಬರಾಜುದಾರರವಾರು ರೂಪಿಸಿಕೊಂಡಿರುವ ಗುರಿಗಳನ್ವಯ ದಾಸ್ತಾನು ಮಾಡಿ ಸೂಕ್ತ ರೀತಿಯಲ್ಲಿ ವಿತರಿಸಲಾಗುತ್ತದೆ ಹಾಗೂ ಈ ಸಮಯದಲ್ಲಿ ಯಾವುದೇ ಕೃಷಿ ಪರಿಕರ ಮಾರಾಟಗಾರರು ಸಂಬಂಧಿಸಿದ ಕಾನೂನುಗಳನ್ನು ಉಲ್ಲಂಘಿಸಿದ್ದಲ್ಲಿ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

# ದೇಗುಲ ಕಟ್ಟುವ ಒಗ್ಗಟ್ಟಿನಂತೆ ಸುಸಜ್ಜಿತ ಶಾಲೆಗಳ ನಿರ್ಮಾಣಕ್ಕೆ ಹೆಚ್ಚಿನ ಒತ್ತು ಅಗತ್ಯ: ಜಿ. ಬಿ. ವಿನಯ್ ಕುಮಾರ್ ಪ್ರತಿಪಾದನೆ

**ದಾವಣಗೆರೆ:** ದೇವಸ್ಥಾನ ಕಟ್ಟಲು ತೋರುವ ಒಗ್ಗಟ್ಟು ಸುಸಜ್ಜಿತ ಶಾಲೆ ನಿರ್ಮಾಣ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ನೀಡಿ–ದರೆ ರಾಜ್ಯದಲ್ಲಿ ಮಾದರಿ ಶಾಲೆಯನ್ನಾಗಿಸಲು ಸಾಧ್ಯ ಎಂದು ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅಭಿಮತ ವ್ಯಕ್ತಪಡಿಸಿದರು.

ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ಗಡಿಮಾಕುಂಟೆ ಗ್ರಾಮದಲ್ಲಿ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀಶ್ರೀಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದ ಮಹಾಸ್ವಾಮಿಗಳವರ ದಿವ್ಯ ಸಾನಿಧ್ಯದಲ್ಲಿ ನಡೆದ ಶ್ರೀ ಬಸವೇಶ್ವರಸ್ವಾಮಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಹಾಗೂ ಅಡ್ಡಪಲ್ಲಕ್ಕಿ ಮಹೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.



ರಾಜ್ಯ ಪ್ರತಿಯೊಂದು ಗ್ರಾಮಗಳಲ್ಲಿಯೂ ದೇವಸ್ಥಾನ ಕಟ್ಟಲು ವಿಶೇಷ ಆಸಕ್ತಿ, ಒಗ್ಗಟ್ಟು, ಶಕ್ತಿ, ಶ್ರಮ ವಹಿಸುತ್ತಾರೆ. ಜಾತಿ ಬೇಧ ಮರೆತು ಎಲ್ಲರೂ ಒಂದಾಗಿ ದೇವಸ್ಥಾನ ಕಟ್ಟಬೇಕು ಎಂಬ ಅಪೇಕ್ಷೆ ಒಳ್ಳೆಯದು. ದೇವಸ್ಥಾನ ಕಟ್ಟಿದ ಮೇಲೆ ಮುಂದಿನ ದಿನಗಳಲ್ಲಿಯೂ ಗ್ರಾಮದ ಜನರಲ್ಲಿ ಅದೇ ಉತ್ಸಾಹ, ಪ್ರೀತಿ, ಒಗ್ಗಟ್ಟು, ಶಕ್ತಿ ಇರಬೇಕು. ಅದೇ ರೀತಿಯಲ್ಲಿ ದೇಗುಲನ ನಿರ್ಮಾಣಕ್ಕೆ ತೋರುವ ಒಗ್ಗಟ್ಟು, ಪರಿಶ್ರಮ, ಆಸಕ್ತಿ ಸುಸಸ್ಜಿತ ಶಾಲೆ ಹಾಗೂ ಸರ್ಕಾರಿ ಶಾಲೆಗಳ ಗುಣಮಟ್ಟದತ್ತ ಯೋಚಿಸಬೇಕಾದ ಅಗತ್ಯತೆ ಇದೆ ಎಂದು ಪ್ರತಿಪಾದಿಸಿದರು.

ಸರ್ಕಾರಿ ಶಾಲೆಗಳಲ್ಲಿ ಓದಿ ಬರುವ ವಿದ್ಯಾರ್ಥಿಗಳಿಗೆ ಐಎಎಸ್, ಐಪಿಎಸ್ ಕಷ್ಟವಾಗುತ್ತಿದೆ. ಇದಕ್ಕೆ ಕಾರಣ ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ಸಿಗದಿರುವುದು ಹಾಗೂ ಅಸಮಾನತೆ ಇರುವುದೇ ಕಾರಣವಾಗಿದೆ. ಹಾಗಾಗಿ, ದೇವಸ್ಥಾನ ಕಟ್ಟುವಷ್ಟೇ ಆಸಕ್ತಿ ಉತ್ಸಾಹ ಶಾಲೆಗಳ ಅಭಿವೃದ್ಧಿಗೂ ಬೇಕು. ನಮ್ಮ ಸಂಸ್ಥೆಯಲ್ಲಿ ಓದಿದ ಬಡ ಮತ್ತು ಶ್ರೀಮಂತ ಮಕ್ಕಳು ಐಎಎಸ್, ಐಪಿಎಸ್ ಅಧಿಕಾರಿಗಳಾಗಿದ್ದಾರೆ. ಸರ್ಕಾರಿ ಶಾಲೆಗಳ ಮಕ್ಕಳಿಗೆ ನಗರ ಪ್ರದೇಶದ ಮಕ್ಕಳಂತೆ ಶಿಕ್ಷಣ ಸಿಕ್ಕರೆ ಸಾಧನೆ ಕಷ್ಟವಾಗದು. ದೇವಸ್ಥಾನ ನಿರ್ಮಾಣದಂತೆ ಶಾಲೆಗಳ ನಿರ್ಮಾಣವೂ ಆಗಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಯೋಚಿಸಬೇಕಿದೆ. ಆದ್ರೆ, ಗಟ್ಟಿ ಮನಸ್ಸು ಮಾಡುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಧರ್ಮ ಮತ್ತು ಸಂಸ್ಕೃತಿ ಉಳಿಯಬೇಕು. ಜೊತೆಗೆ ಶಿಕ್ಷಣಕ್ಕೂ ಹೆಚ್ಚಿನ ಮಹತ್ವ ನೀಡಬೇಕಿದೆ. ಶಿಕ್ಷಣದ ಮೂಲಕ ಧರ್ಮ ಮತ್ತು ಸಂಸ್ಕೃತಿ ಅರಿವು ಮಕ್ಕಳಲ್ಲಿ ಮೂಡಿಸಬೇಕಾದ ಅಗತ್ಯತೆ ಇದೆ. ಧರ್ಮದಂತೆ ನಡೆದರೆ ಸಂಸ್ಕೃತಿ ಬೆಳೆಸಿಕೊಂಡರೆ ಸಹಬಾಳ್ವೆ ಸಾಧ್ಯವಾಗುತ್ತದೆ. ಈ ಗ್ರಾಮದಲ್ಲಿನ ಮಕ್ಕಳು ಐಎಎಸ್, ಐಪಿಎಸ್ ಆಗುವಂತೆ ಭಗವಂತ ಶಕ್ತಿ ನೀಡಲಿ ಎಂದು ಹಾರೈಸಿದರು.

ಕೊಟ್ಟೂರು ಚಾನೂಕೋಟಿ ಮಠದ ಷ.ಬ್ರ. ಶ್ರೀ ಡಾ. ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಜಗಳೂರು ಶಾಸಕ ಬಿ. ದೇವೇಂದ್ರಪ್ಪ ರವರು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಕೇಂದ್ರದ ಮಾಜಿ ಸಚಿವ ಹಾಗೂ ಮಾಜಿ ಸಂಸದ ಡಾ. ಜಿ. ಎಂ. ಸಿದ್ದೇಶ್ವರ, ಮಾಜಿ ಶಾಸಕರಾದ ಎಸ್. ವಿ. ರಾಮಚಂದ್ರಪ್ಪ, ಹೆಚ್. ಪಿ. ರಾಜೇಶ್, ಕೆ. ತಿಪ್ಪೇಸ್ವಾಮಿ. ಹೊಸಪೇಟೆ ಅಜ್ಜಯ್ಯ ನಾಡಗೇರ, ಹೆಚ್. ನಾಗರಾಜ, ಬಿಸ್ತುವಳ್ಳಿ ಬಾಬಣ್ಣ, ಗ್ರಾ. ಸದಸ್ಯರಾದ ಬೋರಮ್ಮ, ಜಿ. ಎಂ. ತಿಪ್ಪೇಸ್ವಾಮಿ, ಕೆ. ಪಿ. ಪಾಲಯ್ಯ, ಎಸ್.ಕೆ. ಮಂಜುನಾಥ, ಬಿಜೆಪಿ ಮಂಡಲದ ಮಾಜಿ ಅಧ್ಯಕ್ಷ ಪಲ್ಲಗಟ್ಟೆ ಮಹೇಶ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸೊಕ್ಕೆ ನಾಗರಾಜ್ ಹಲವರು ಮುಖಂಡರು ಉಪಸ್ಥಿತರಿದ್ದರು.

# ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ : ಶಾಸಕ ಟಿ.ರಘುಮೂರ್ತಿ ಭರವಸೆ



**ಚಿತ್ರದುರ್ಗ:** ಸರಕಾರಿ ಶಾಲೆಗಳ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲು ಶಾಸಕನಾಗಿ ನಾನು ಸದಾ ಬದ್ಧನಿದ್ದೇನೆ, ಇಂದು ಸುಮಾರು 11 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಕಾರಿಗಳು ಭೂಮಿ ಪೂಜೆ ಮಾಡಲಾಗಿದೆ ಎಂದು ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯ ಬುಧವಾರದಂದು ಕೂನಬೇವು ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಭೂಮಿ ಪೂಜೆ, ಚಿಕ್ಕಪ್ಪನಹಳ್ಳಿ, ಹಿರೇಕಬ್ಬಿಗೆರೆ, ಚಿಕ್ಕಗೊಂಡನಹಳ್ಳಿ ಗ್ರಾಮಗಳ ಸಿ.ಸಿ.ರಸ್ತೆ ಕಾಮಗಾರಿಯ ಭೂಮಿ ಪೂಜೆ ನೇರವೇರಿಸಿ ಮಾತನಾಡಿದರು.

ಸಮಾಜದಲ್ಲಿ ಶೈಕ್ಷಣಿಕ ಪ್ರಗತಿಯಾದ–ರೆ ಅದು ಸಾಮಾಜಿಕ ಪರಿವರ್ತನೆಯ ಹೊಸ ಹೊಳಪು ಮೂಡಿದಂತೆ. ಶೈಕ್ಷಣಿಕ ಪ್ರಗತಿಯ ಆಧಾರದ ಮೇಲೆ ಆ ಸಮಾಜ ಭವಿಷ್ಯ ನಿಂತಿದೆ. ಶಾಲೆ ಒಂದು ಸಾಮಾಜಿಕ ಪರಿವರ್ತನೆಯ ಕೇಂದ್ರ ಆಗಬೇಕು. ಸಮಾಜದಲ್ಲಿ ಏನೇನು ಕೊರತೆಗಳಿವೆಯೋ ಅವು ಶಾಲೆಯಿಂದ ನೀಗುವಂತಾಗಬೇಕು. ಆದ್ದರಿಂದ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಪೂರಕ ವಾತಾವರಣ ಸೃಷ್ಟಿಸುವ ದೊಡ್ಡ ಜವಾಬ್ದಾರಿ ಪೋಷಕರು ಮತ್ತು ಶಿಕ್ಷಕರ ಮೇಲಿದೆ ಎಂದರು.

ನನ್ನ ಕ್ಷೇತ್ರದಲ್ಲಿ ಶಾಲೆಗಳ ಸುಧಾರಣೆಗೆಯನ್ನು ನಿರಂತರವಾಗಿ ಮಾಡಿಕೊಡು ಬಂದಿದ್ದು ಚಳ್ಳಕೆರೆ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸುಮಾರು 380 ಕ್ಕೂ ಹೆಚ್ಚು ನೂತನ ಶಾಲಾ ಕಾಲೇಜು ಕೊಠಡಿಗಳ ನಿರ್ಮಾಣ ಮಾಡಲಾಗಿದ್ದು. ಇಂದು ಸಹ ಕೂನಬೇವು ಗ್ರಾಮದಲ್ಲಿ 72 ಲಕ್ಷ ವೆಚ್ಚದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 4 ನೂತನ ಕೊಠಡಿಗಳ ನಿರ್ಮಾಣಕ್ಕೆ ಭೂಮಿ ಪೂಜೆ ನೇರವೇರಿಸಿದ್ದೇನೆ ಎಂದರು.

ಚಿಕ್ಕಗೊಂಡನಹಳ್ಳಿ ಗ್ರಾಮದಲ್ಲಿ ಚಿಕ್ಕಗೊಂಡನಹಳ್ಳಿ ಗ್ರಾಮದಿಂದ ಚಿಕ್ಕಪ್ಪನಹಳ್ಳಿ ಗ್ರಾಮದವರೆಗೆ 4.50 ಕೋಟಿ ವೆಚ್ಚದಲ್ಲಿ 7 ಕಿಲೋ ಮೀಟರ್ ರಸ್ತೆ ಕಾಮಗಾರಿ ಮತ್ತು ಮಾಳೇನಹಳ್ಳಿಯಿಂದ ಹಿರೇಕಬ್ಬಿಗೆರೆ, ಶಿವನಕೆರೆ ದೇವಸ್ಥಾನವರಗೆ 4 ಕೋಟಿ ವೆಚ್ಚದ ರಸ್ತೆ, ಚಿಕ್ಕಗೊಂಡನಳ್ಳಿ ಗ್ರಾಮದಲ್ಲಿ 1 ಕೋಟಿ ವೆಚ್ಚದ ಸಿ.ಸಿ.ರಸ್ತೆ ಮತ್ತು ಹಿರೇಕಬ್ಬಿಗೆರೆ ಗ್ರಾಮದಲ್ಲಿ 20 ಲಕ್ಷದ ವೆಚ್ಚದ ಸಿ ಸಿ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ಮಾಡಲಾಗಿದ್ದು ಎಲ್ಲಾ ರಸ್ತೆಗಳನ್ನು ಅಚ್ಚುಕಟ್ಟಾಗಿ ಮತ್ತು ವಿಶಾಲವಾಗಿ ನಿರ್ಮಾಣ ಮಾಡಲು ಸೂಚಿಸಿದ್ದು ಸಾರ್ವಜನಿಕರು ಸಹ ಅಧಿಕಾರಿಗಳಿಗೆ ಸಹಕಾರ ನೀಡಿ ಗುಣಮಟ್ಟದ ಕೆಲಸ ಮಾಡಿಸಿಕೊಳ್ಳುವ ಮೂಲಕ ಗ್ರಾಮವನ್ನು ಸುಂದರವಾಗಿಟ್ಟುಕೊಳ್ಳಿ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಇಓ ರವಿಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್, ಉಪ ತಹಶೀಲ್ದಾರ್ ಪ್ರಕಾಶ್, ಮಾಜಿ ಜಿ.ಪಂ ಸದಸ್ಯ ಬಾಬುರೆಡ್ಡಿ, ಕೂನಬೇವು ಗ್ರಾಮ ಪಂಚಾಯತಿ ಅಧ್ಯಕ್ಷೆ ಪದ್ಮಕ್ಕ, ಮಾಡನಾಯಕನಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ರಾಜೇಶ್ ಮತ್ತು ಗ್ರಾಮ ಪಂಚಾಯತಿ ಸದಸ್ಯರು ಮತ್ತು ಸಾರ್ವಜನಿಕರು ಇದ್ದರು.

# ಡಿ.ಕೆ. ಸುರೇಶ ಕೆಎಂಎಫ್ ಅಧ್ಯಕ್ಷಗಾದಿ ಕನಸಿಗೆ ನಾನಾ ವಿಘ್ನ

**ಬೆಂಗಳೂರು :** ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ಉಮೇದಿನಲ್ಲಿರುವ ಮಾಜಿ



ಸಂಸದ ಡಿ.ಕೆ.ಸುರೇಶ್ ಅವರಿಗೆ ನಾನಾ ರೀತಿಯ ವಿಘ್ನಗಳು ಎದುರಾಗಲಾರಂಭಿಸಿವೆ. ಹಾಲಿ ಶಾಸಕ ಭೀಮಾನಾಯಕ್, ಮಾಲೂರು ಶಾಸಕ ಕೆ. ವೈ.ನಂಜೇಗೌಡ ಅವರ ಪ್ರಬಲ ಪೈಪೋಟಿ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಆಪ್ತಬಣಗಳಲ್ಲಿ ಗುರುತಿಸಿಕೊಂಡಿರುವ ಮತ್ತೊಬ್ಬ ಶಾಸಕರು ಕೆಎಂಎಫ್ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟು ಸದ್ದಿಲ್ಲದೆ ಲಾಬಿ ನಡೆಸಲಾರಂಭಿಸಿರುವುದು ಡಿ.ಕೆ.ಶಿವಕುಮಾರ್ ಬಣಕ್ಕೆ ತಲೆಬಿಸಿ ತಂದಿಟ್ಟಿದೆ.

ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್ ಈಗಾಗಲೇ ಕೊಪ್ಪಳ ಜಿಲ್ಲೆಯಿಂದ ಕೆಎಂಎಫ್ ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ತಾವೂ ಆಕಾಂಕ್ಷಿಯಾಗಿದ್ದು, ಬೆಂಬಲ ನೀಡುವಂತೆ ಹಲವು ಸಚಿವರನ್ನು ಭೇಟಿ ಮಾಡಲಾರಂಭಿಸಿದ್ದಾರೆ.

ಈಗಾಗಲೇ ಮುಖ್ಯಮಂತ್ರಿ ಬಣದ ಸಚಿವರಾಗಿರುವ ಎಚ್.ಸಿ.ಮಹದೇವಪ್ಪ ಹಾಗೂ ಸತೀಶ್ ಜಾರಕಿಹೊಳಿ ಅವರನ್ನು ಭೇಟಿ ಮಾಡಿರುವ ರಾಘವೇಂದ್ರ ಹಿಟ್ನಾಳ್ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೆ ತಾವು ಸ್ಪರ್ಧಿಸಲಿದ್ದು, ಬೆಂಬಲ ನೀಡುವಂತೆ ಮನವಿ ಮಾಡಿದ್ದಾರೆ.

ಎಚ್.ಸಿ.ಮಹದೇವಪ್ಪ ಚಾಮರಾಜನಗರ, ಮೈಸೂರು ಜಿಲ್ಲೆಯ ನಿರ್ದೇಶಕರ ವಿಶ್ವಾಸದಲ್ಲಿದ್ದಾರೆ. ಸತೀಶ್ ಜಾರಕಿಹೊಳಿ ಬೆಳಗಾವಿ, ಹುಬ್ಬಳ್ಳಿ–ಧಾರವಾಡ, ರಾಯಚೂರು ಸೇರಿದಂತೆ ಉತ್ತರ ಕರ್ನಾಟಕ ಭಾಗದ ಹಲವು ಜಿಲ್ಲೆಗಳ ಕೆಎಂಎಫ್ ನಿರ್ದೇಶಕರ ಜೊತೆ ವಿಶ್ವಾಸದಲ್ಲಿರುವುದರಿಂದ ರಾಘವೇಂದ್ರ ಹಿಟ್ನಾಳ್ ಅವರ ಭೇಟಿ ಮಹತ್ವ ಪಡೆದುಕೊಂಡಿದೆ.

ಕೆಎಂಎಫ್ ಸಹಕಾರಿ ಸಂಸ್ಥೆಯಾಗಿದ್ದು, ಪ್ರಜಾಪ್ರಭುತ್ವದ ಧ್ಯೇಯೋದ್ದೇಶದ ಅನುಸಾರ ಚುನಾವಣೆ ಮೂಲಕ ಅಧ್ಯಕ್ಷರ ಆಯ್ಕೆಯಾಗುತ್ತದೆ. ಈ ಮಾದರಿಯ ಮೂಲಕವೇ ಅಧ್ಯಕ್ಷರ ಆಯ್ಕೆ ನಡೆಯುವುದಾದರೆ ಡಿ.ಕೆ.ಸುರೇಶ್ ಅವರ ಗೆಲುವು ಕಷ್ಟಸಾಧ್ಯ.ಹೈಕಮಾಂಡ್ ಸೂಚನೆ ಮೇರೆಗೆ ಸರ್ವಾನುಮತದ ಅಭ್ಯರ್ಥಿ ಆಯ್ಕೆಯಾಗುವ ಸಂದರ್ಭ ಬಂದರೆ ಡಿ.ಕೆ.ಶಿವಕುಮಾರ್ ಬಣ ಮೇಲುಗೈ ಸಾಧಿಸಲಿದೆ.

ತಮ ಸಹೋದರ ಡಿ.ಕೆ.ಸುರೇಶ್ ಅವರನ್ನು ಕೆಎಂಎಫ್ ಅಧ್ಯಕ್ಷರನ್ನಾಗಿ ಮಾಡಬೇಕು ಎಂಬ ಕಾರಣಕ್ಕೆ ಡಿ.ಕೆ.ಶಿವಕುಮಾರ್ ಎಲ್ಲಾ ರೀತಿಯ ಅಪಮಾನ, ಹಿನ್ನಡೆಗಳನ್ನು ಅವಡುಗಚ್ಚಿ ಸಹಿಸಿಕೊಳ್ಳುತ್ತಿದ್ದಾರೆ ಎನ್ನಲಾಗಿದೆ.ಒಂದು ವೇಳೆ ತಮ ಸಹೋದರನಿಗೆ ಪ್ರತಿಸ್ಪರ್ಧಿಯಾಗಿ ಮುಖ್ಯಮಂತ್ರಿ ಬಣದ ನಾಯಕರು ಬಂದರೆ ಆ ವೇಳೆ ಡಿ.ಕೆ.ಶಿವಕುಮಾರ್ ಸಹನೆಕಟ್ಟೆ ಒಡೆಯಲಿದ್ದು, ರಾಜ್ಯ ರಾಜಕೀಯದಲ್ಲಿ ಭಾರೀ ಪ್ರಮಾಣದ ಬೆಳವಣಿಗೆಗಳಾಗಬಹುದು ಎಂದು ಅಂದಾಜಿಸಲಾಗುತ್ತಿದೆ.

ಈಗಾಗಲೇ ಬೆಂಗಳೂರು ಹಾಲು ಒಕ್ಕೂಟದ ಅಧ್ಯಕ್ಷರಾಗಿ ಡಿ.ಕೆ.ಸುರೇಶ್ ಕೆಲಸ ನಿರ್ವಹಿಸುತ್ತಿದ್ದಾರೆ. ಕೆಎಂಎಫ್ ಅಧ್ಯಕ್ಷರಾಗುವ ಮೂಲಕ ಸಹಕಾರಿ ಕ್ಷೇತ್ರದಲ್ಲಿ ಪ್ರಮುಖ ಜವಾಬ್ದಾರಿಯನ್ನು ನಿಭಾಯಿಸುವ ಉಮೇದಿನಲ್ಲಿದ್ದಾರೆ.ದಿನ ಕಳೆದಂತೆ ಒಬ್ಬೊಬ್ಬರಾಗಿ ಪ್ರತಿಸ್ಪರ್ಧಿಗಳು ಹುಟ್ಟಿಕೊಳ್ಳುತ್ತಿರುವುದು ಡಿ.ಕೆ.ಶಿವಕುಮಾರ್ ಬಣಕ್ಕೆ ನುಂಗಲಾರದ ಬಿಸಿತುಪ್ಪವಾಗಿದೆ.

# ಪಂಚಾಯತಿ ನೌಕರರ ಕನಿಷ್ಠ ಕೂಲಿ ಆದೇಶ ಜಾರಿಗೆ ಒತ್ತಾಯಿಸಿ ಸಿಐಟಿಯು ಪ್ರತಿಭಟನೆ

**ದಾವಣಗೆರೆ:** ಗ್ರಾಮ ಪಂಚಾಯತಿಯಲ್ಲಿ ದುಡಿಯುವ ನೌಕರರಿಗೆ ವೈಜ್ಞಾನಿಕವಾಗಿ ಕನಿಷ್ಠ ಕೂಲಿ ಆದೇಶ ವನ್ನು ತಕ್ಷಣ ಜಾರಿಗೊಳಿಸುವಂತೆ ಒತ್ತಾಯಿಸಿ ಸಿಐಟಿಯು ಸಂಘಟನೆಯ ರಾಜ್ಯ ಗ್ರಾಮ ಪಂಚಾಯತ್ ನೌಕರರ ಸಂಘದ ಜಿಲ್ಲಾ ಸಮಿತಿಯಿಂದ ನಿನ್ನೆ ಪ್ರತಿಭಟನೆ ನಡೆಸಿ ಕಾರ್ಮಿಕ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಸರ್ಕಾರವು ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುವ ನೌಕರರಿಗೆ ಕನಿಷ್ಠ ವೇತನವನ್ನು ಅವೈಜ್ಞಾನಿಕವಾಗಿ 29.11.2021 ರಂದು ಜಾರಿಗೊಳಿಸಿತ್ತು. ಇದನ್ನು ಸಂಘವು ನ್ಯಾಯಾಲಯದಲ್ಲಿ ರಿಟ್ ಮೂಲಕ ಪ್ರಶ್ನಿಸಿತ್ತು. ಹೈಕೋರ್ಟ್‌ನ ಏಕ ಸದಸ್ಯ ಪೀಠವು ಸುಪ್ರೀಂ ಕೋರ್ಟ್ ಮಾರ್ಗದರ್ಶನದಂತೆ ಕನಿಷ್ಠ 10 ವಾರಗಳ ಗಡುವು ನೀಡಿದ ನಂತರ,




ಮೂರು ವರ್ಷ ನಾಲ್ಕು ತಿಂಗಳ ಬಳಿಕ 11.4.2025ರಂದು ಕನಿಷ್ಠ ವೇತನ ಅಧಿಸೂಚನೆ ಹೊರಡಿಸಿ ಆಕ್ಷೇಪಣೆ ಸಲ್ಲಿಸಲು ತಿಳಿಸಿತು.

ಸಂಘವು ಕರ ವಸೂಲಿಗಾರ, ಗುಮಾಸ್ತ, ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳನ್ನು ಅತಿ ಕುಶಲರಾಗಿ ಪರಿಗಣಿಸಿ ಮೂಲ ವೇತನ 38,021–86 ನಿಗದಿಪಡಿಸಲು ಒತ್ತಾಯಿಸಿತು. ಅದೇ ರೀತಿ ನೀರು ಗಂಟಿ, ಪಂಪ್ ಆಪರೇಟರ್, ಜವಾನರು, ಕಸಗುಡಿಸು ವವರಿಗೂ ಮೂಲ ವೇತನ ನಿಗದಿಪಡಿ ಸಬೇಕೆಂದು ಕೋರಿತು. 1.4.2025 ರಿಂದ ಕನಿಷ್ಠ ವೇತನ ಜಾರಿಗೊಳಿಸಬೇಕು, ಸೇವಾ ಹಿರಿತನವನ್ನು ಮಾನ್ಯತೆ ಮಾಡಿ ಪ್ರತಿ ವರ್ಷ ಶೇಕಡಾವಾರು ಹೆಚ್ಚಳದೊಂದಿಗೆ ಹೆಚ್ಚುವರಿ ಭತ್ಯೆ ನೀಡಬೇಕೆಂದು ಜಿಲ್ಲಾ ಸಮಿತಿ ಅಧ್ಯಕ್ಷ ಶ್ರೀನಿವಾಸಚಾರ್ ಎಸ್. ಸಿ. ಮತ್ತು ಕಾರ್ಯದರ್ಶಿ ಜಿ. ಎಸ್. ಬಸವರಾಜ್ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕೆ. ಎಚ್. ಆನಂದರಾಜ್, ಚನ್ನಗಿರಿ ತಾಲ್ಲೂಕಿನ ಪಿ. ಚಂದ್ರಪ್ಪ, ಪ್ರಸಾದ್, ರಾಕೇಶ್ ಜಿ. ಎಸ್., ಓಂಕಾರ ಕೃಷ್ಣಮೂರ್ತಿ ಕೆ.ಟಿ., ಕುಮಾರ್, ಹಾಲಸ್ವಾಮಿ, ಮಲ್ಲೇಶನಾಯ್ಕ, ಕೆಂಚಪ್ಪ, ದಾವಣಗೆರೆಯ ತಿಪ್ಪೇಸ್ವಾಮಿ, ಕರಿಬಸಪ್ಪ, ಹಾಲೇಶ್, ಅಜ್ಜಯ್ಯ, ನೀಲಪ್ಪ, ಹೊನ್ನಾಳಿಯ ಚಂದ್ರಪ್ಪ, ಹಾಜರಿದ್ದರು.

# ಉಚಿತ ಕುರಿ ಮತ್ತು ಮೇಕೆ ಸಾಕಣೆ ತರಬೇತಿ

**ಚಿಕ್ಕಮಗಳೂರು, ಜು.31:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಆಗಸ್ಟ್ 11 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಏರ್ಪಡಿಸಿದೆ.ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 35 ವರ್ಷ ವಯಸ್ಸಿನ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು.

# ದಾಖಲೆಗಳಿದ್ದರೆ ಕೋರ್ಟಿಗೆ ಹೋಗಲಿ:ರಾಗಾಗೆ ಶೆಟ್ಟರ್ ತಿರುಗೇಟು

**ನವದೆಹಲಿ,ಅ.8–**ಲೋಕಸಭಾ ಚುನಾವಣೆಯ



ಸಮಯದಲ್ಲಿ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ರಾಹುಲ್ ಗಾಂಧಿಯವರ ಆರೋಪಗಳಿಗೆ ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ತಿರುಗೇಟು ನೀಡಿದ್ದಾರೆ, ಅವುಗಳಿಗೆ ಯಾವುದೇ ಆಧಾರವಿಲ್ಲ ಎಂದು ಹೇಳಿದ್ದಾರೆ.

ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿಯವರ ಮತಗಟ್ಟೆಗಳಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ್ದಾರೆ.ರಾಹುಲ್ ಗಾಂಧಿಯವರ ಆರೋಪಗಳಿಗೆ ಯಾವುದೇ ಆಧಾರವಿಲ್ಲ. ಅವರು ಈಗ ಆರೋಪ ಮಾಡುತ್ತಿದ್ದಾರೆ, ಒಂದು ವರ್ಷದ ಹಿಂದೆ ಅವರು ಅದನ್ನು ಏಕೆ ಮಾಡಲಿಲ್ಲ? ಬೆಂಗಳೂರು ಕೇಂದ್ರದ ನಿಮ್ಮ ಕಾಂಗ್ರೆಸ್ ಅಭ್ಯರ್ಥಿ ಅದರ ಬಗ್ಗೆ ಏಕೆ ಕೇಳಲಿಲ್ಲ? ಇಲ್ಲಿಯವರೆಗೆ ಅವರು ಏಕೆ ದೂರು ನೀಡಲಿಲ್ಲ? ಎಂದು ಪ್ರಶ್ನೆಗಳ ಸುರಿಮಳೆಗೈದರು.

ರಾಹುಲ್ ಗಾಂಧಿ, ನಿಮ್ಮ ಬಳಿ ದಾಖಲೆಗಳಿದ್ದರೆ, ನ್ಯಾಯಾಲಯಕ್ಕೆ ಹೋಗಿ, ಚುನಾವಣಾ ಆಯೋಗಕ್ಕೆ ದಾಖಲೆಗಳನ್ನು ಸಲ್ಲಿಸಿ ಮತ್ತು ದೂರು ನೀಡಿ. ಅಲ್ಲದೆ, ಚುನಾವಣಾ ಆಯೋಗವನ್ನು ಆರೋಪಿಸುವುದು ಸರಿಯಲ್ಲ ಎಂದಿದ್ದಾರೆ.ಅವರು ಎನ್.ಡಿ.ಎಮೈತ್ರಿಕೂಟದ ಅಡಿಯಲ್ಲಿ ಪ್ರಧಾನಿಯಾದರು. ಸರ್ಕಾರ ಬಂದಿದೆ, ಅವರು ಈಗ ಹೇಗೆ ಆರೋಪಗಳನ್ನು ಮಾಡಬಾರದು ಪ್ರಧಾನಿ ಮೋದಿಯನ್ನು ಟೀಕಿಸುವುದು ಮತ್ತು ಯಾವಾಗಲೂ ಅಮೆರಿಕ, ಟ್ರಂಪ್ ಮತ್ತು ಚೀನಾ ಪರವಾಗಿ ಮಾತನಾಡುವುದು ರಾಹುಲ್ ಗಾಂಧಿಯವರ ಕೆಲಸವಾಗಿ ಮಾರ್ಪಟ್ಟಿದೆ.

ಚುನಾವಣೆ ಅಕ್ರಮವಾಗಿದ್ದರೆ, ಮೊದಲು ನ್ಯಾಯಾಲಯಕ್ಕೆ ಹೋಗಿ ಅಥವಾ ಚುನಾವಣಾ ಆಯೋಗಕ್ಕೆ ದೂರು ನೀಡಿ. ದೇಶದ ಸ್ವಾಯತ್ತ ಸಂಸ್ಥೆಯ ಮೇಲೆ ಆರೋಪ ಮಾಡುವುದು ತಪ್ಪು ಎಂದು ಅವರು ಹೇಳಿದ್ದಾರೆ. ಧರ್ಮಸ್ಥಳ ವಿಷಯದ ಕುರಿತು ಮಾತನಾಡಿದ ಅವರು, ಸರ್ಕಾರದ ಎಸ್ಐಟಿ ಧರ್ಮಸ್ಥಳ ವಿಷಯದ ಬಗ್ಗೆ ತನಿಖೆ ನಡೆಸುತ್ತಿದೆ ಎಂದು ಹೇಳಿದರು. ಹಾಗೆ ಮಾಡುವುದರಲ್ಲಿ ಯಾವುದೇ ಆಕ್ಷೇಪವಿಲ್ಲ.

ಅವರು ಅನಾಮಧೇಯ ದೂರು ದಾಖಲಿಸಿದ್ದಾರೆ, ಯಾವುದೇ ಸಾಕ್ಷಿ ಇದೆಯೋ ಇಲ್ಲವೋ ನನಗೆ ತಿಳಿದಿಲ್ಲ. ಆದಾಗ್ಯೂ, ಸರ್ಕಾರ ಎಸ್ಐಟಿ ತನಿಖೆಗೆ ಆದೇಶಿಸಿದೆ. ಅವರು ತನಿಖೆ ನಡೆಸಲಿ, ಆದರೆ ಹಿಂದೂಗಳ ಪವಿತ್ರ ದೇವಾಲಯವಾದ ಮಂಜುನಾಥ ಸ್ವಾಮಿಗೆ ಯಾವುದೇ ರೀತಿಯಲ್ಲಿ ಹಾನಿಯಾಗಬಾರದು. ಕ್ಷೇತ್ರಕ್ಕೆ ಅಪಚಾರ ಮಾಡಬಾರದು ಮತ್ತು ಧರ್ಮಸ್ಥಳದ ಹೆಸರಿಗೆ ಕಳಂಕ ತರಬಾರದು ಎಂದು ಅವರು ಹೇಳಿದ್ದಾರೆ.

# ಮಗುವಿನ ಉತ್ತಮ ಆರೋಗ್ಯಕ್ಕೆ ಎದೆಹಾಲು ಸಹಕಾರಿ

## ವಿಶ್ವ ಸ್ತನ್ಯಪಾನ ಸಪ್ತಾಹದಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್

**ಚಿತ್ರದುರ್ಗ:** ತಾಯಿಯ ಎದೆಹಾಲು ಅಮೃತಕ್ಕೆ ಸಮ. ಮಗುವಿನ ಉತ್ತಮ ಆರೋಗ್ಯಕ್ಕೆ ಎದೆಹಾಲು ಸಹಕಾರಿ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ. ಅಭಿನವ್ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಬುದ್ದನಗರ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಗುರುವಾರ ಆಯೋಜಿಸಲಾದ ವಿಶ್ವ ಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

"ತಾಯಿಯ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ, ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ" ಎಂಬುದು ಈ ಬಾರಿಯ ವಿಶ್ವ ಸ್ತನ್ಯಪಾನ ಸಪ್ತಾಹದ ಘೋಷ ವಾಕ್ಯವಾಗಿದೆ. ಮಗುವಿನ ಉತ್ತಮ ಆರೋಗ್ಯಕ್ಕೆ ತಾಯಿಯ ಎದೆಹಾಲು ಮೊದಲ ಆರು ತಿಂಗಳು ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಸಾಮಾನ್ಯವಾಗಿ ಭಾರತ ದೇಶದಲ್ಲಿ




ಒಂದು ಕುಟುಂಬ ಮಕ್ಕಳ ಆರೋಗ್ಯ–ಕ್ಕೆ ವಾರ್ಷಿಕವಾಗಿ ರೂ.15 ಸಾವಿರದಿಂದ ರೂ.25 ಸಾವಿರದವರೆಗೂ ಖರ್ಚು ಮಾಡುತ್ತಿದ್ದಾರೆ. ಈ ಖರ್ಚನ್ನು ತಪ್ಪಿಸಲು ಮಗು ಜನಿಸಿದ ಒಂದು ಘಂಟೆಯ ಒಳಗೆ ತಾಯಿ ಎದೆ ಹಾಲನ್ನು ಕುಡಿಸುವುದು ಪ್ರಮುಖ ಮತ್ತು ಆರು ತಿಂಗಳ ತನಕ ಮಗುವಿಗೆ ಏನನ್ನು ನೀಡದೆ ತಾಯಿ ಎದೆ ಹಾಲನ್ನು ನೀಡುವುದು ಸೂಕ್ತ. ತಾಯಿ ಎದೆ ಹಾಲಿನಲ್ಲಿ ಮಗುವಿನ ಬೆಳವಣಿಗೆಗೆ ಬೇಕಾದ ಎಲ್ಲಾ ಅಂಶಗಳು ಇರುತ್ತದೆ ಎಂದು ಹೇಳಿದರು. ಆರು ತಿಂಗಳ ತನಕ ತಾಯಿ ಎದೆಹಾಲನ್ನು ನೀಡುತ್ತಾ, ಇದನ್ನು ಎರಡು ವರ್ಷಗಳವರೆಗೂ ವಿಸ್ತರಿಸಿ ಮಗುವಿಗೆ ಹಾಲನ್ನು ನೀಡಬೇಕು. ಎರಡು ವರ್ಷಗಳ ನಂತರ ಎದೆಹಾಲಿನ ಜತೆಗೆ ಪೂರಕ ಆಹಾರವಾದ ಕಿಚಡಿ, ರಾಗಿಸರಿ, ಹಣ್ಣು ಮುಂತಾದವುಗಳನ್ನು ಹಂತ–ಹಂತವಾಗಿ ನೀಡುತ್ತಾ ಸಾಗಬೇಕು ಎಂದು ಹೇಳಿದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಮಾತನಾಡಿ, ಮಗುವಿಗೆ ತಾಯಿ ಎದೆ ಹಾಲು ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದ ಅವರು, ತಾಯಂದಿರು ಮಕ್ಕಳಿಗೆ ಎದೆ ಹಾಲು ನಿಗದಿತ ಅವಧಿವರೆಗೆ ನೀಡುವುದರಿಂದ ಹಲವು ಸೋಂಕುಗಳಿಂದ ರಕ್ಷಿಸಬಹುದು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ.ಗಿರೀಶ್ ಮಾತನಾಡಿ, ತಾಯಿ ಎದೆಹಾಲು ಅಮೃತ, ಇದರಲ್ಲಿ ಎಲ್ಲಾ ಪೋಷಕಾಂಶ ಆಹಾರ ಅಡಗಿರುತ್ತವೆ. ಹಾಗಾಗಿ ತಪ್ಪದೆ ತಮ್ಮ ಮಕ್ಕಳಿಗೆ 6 ತಿಂಗಳವರೆಗೂ ಬೇರೆ ಆಹಾರ ನೀಡದೇ ಬರೀ ತಾಯಿ ಎದೆಹಾಲನ್ನು ಮಾತ್ರ ನೀಡುವುದು ಸೂಕ್ತ ಎಂದು ಹೇಳಿದರು. ಮಗು ಜನಿಸಿದ 48 ಗಂಟೆಗಳ ತನಕ ಸ್ನಾನ ಮಾಡಿಸಬಾರದು. ಮಗುವಿನ ಹೊಕ್ಕಳ ಬಳ್ಳಿಗೆ ಯಾವುದೇ ತರಹ ಔಷಧಿಗಳನ್ನು ಹಚ್ಚುವುದು ತಪ್ಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಟಿ. ಕೃಷ್ಣನಾಯ್ಕ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ, ಜಿಲ್ಲಾ ಆರೋಗ್ಯ ಉಪ ಶಿಕ್ಷಣಾಧಿಕಾರಿ ಗೌರಮ್ಮ, ಬುದ್ಧ ನಗರದ ವೈದ್ಯಾಧಿಕಾರಿ ಡಾ. ಸುರೇಂದ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಕಾರ್ಯಕ್ರಮ ನಿರೂಪಣಾಧಿಕಾರಿ ಮಂಜುನಾಥ ಸೇರಿದಂತೆ ಮತ್ತಿತರರು ಇದ್ದರು.

# ಬಿಹಾರ ಎಸ್‌ಐಆರ್ ವಿರುದ್ಧ ಸಂಸತ್ತಿನ ಹೊರಗೆ ಇಂಡಿಯಾ ಬ್ಲಾಕ್ ಸದಸ್ಯರ ಪ್ರತಿಭಟನೆ




**ನವದೆಹಲಿ:** ವಾರಾಂತ್ಯವಾದ ಇಂದು ಸಂಸತ್ತಿನ ಉಭಯ ಸದನಗಳಲ್ಲಿ ಕಲಾಪ ನಡೆಯುವ ಬದಲು ವಿರೋಧ ಪಕ್ಷಗಳ ಮೈತ್ರಿಕೂಟ ಇಂಡಿಯಾ ಬ್ಲಾಕ್ ಸದಸ್ಯರು ಬಿಹಾರ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ವಿರುದ್ಧ ಪ್ರತಿಭಟನೆ ಮುಂದುವರಿಸಿದ್ದಾರೆ.

ಬಿಹಾರದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ವಿರುದ್ಧ ಭಾರತೀಯ ರಾಷ್ಟ್ರೀಯ ಅಭಿವೃದ್ಧಿ ಅಂತರ್ಗತ ಒಕ್ಕೂಟದ (ಖಓಆಖಂ) ನಾಯಕರು ಸಂಸತ್ತಿನ ಸಂಕೀರ್ಣದ ಒಳಗೆ ಮಕರ ದ್ವಾರದ ಮುಂದೆ ಪ್ರತಿಭಟನೆ ನಡೆಸುತ್ತಿದ್ದಾರೆ.

ಮನ್ಸುಖ್ ಮಾಂಡವಿಯಾ ಅವರಿಂದ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ, 2025

ಲೋಕಸಭೆಯ ಕಾರ್ಯಸೂಚಿಯ ಪ್ರಕಾರ, ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವರು ಇಂದು ಲೋಕಸಭೆಯಲ್ಲಿ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆ, 2025 ನ್ನು ಮಂಡಿಸಲಿದ್ದಾರೆ.

ಕೇಂದ್ರ ಸರ್ಕಾರವು ಮುಂಗಾರು ಅಧಿವೇಶನದಲ್ಲಿ ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆಯನ್ನು ಅಂಗೀಕರಿಸಲು ಉತ್ಸುಕವಾಗಿರುವುದರಿಂದ, ಆಡಳಿತ ಪೀಠದ ಸದಸ್ಯರು ನಿನ್ನೆ ಅದನ್ನು ಮುಂದಿನ ವಾರದ ಆರಂಭದಲ್ಲಿ ಚರ್ಚೆಗೆ ತೆಗೆದು–ಕೊಂಡು ಅಂಗೀಕಾರ ಪಡೆಯಬಹುದು ಎಂದು ಸೂಚಿಸಿದರು.

ವಿವರವಾದ ಅಧ್ಯಯನಕ್ಕಾಗಿ ಮಸೂದೆಯನ್ನು ಸಂಸದೀಯ ಸಮಿತಿಗೆ ಉಲ್ಲೇಖಿಸಬೇಕೆಂದು ಬಯಸಿದ ವಿರೋಧ ಪಕ್ಷವು, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ಕುರಿತ ಚರ್ಚೆಯಲ್ಲಿನ ಅಸ್ತವ್ಯಸ್ತತೆಯನ್ನು ಕೊನೆಗೊಳಿಸಲು ಚರ್ಚೆ ನಡೆಸಬೇಕೆಂದು ಒತ್ತಾಯಿಸಿದೆ.

ಸಂಸತ್ತಿನಲ್ಲಿ ಚುನಾವಣಾ ಪ್ರಕ್ರಿಯೆಯ ಕುರಿತು ಯಾವುದೇ ಚರ್ಚೆ ಇರುವುದಿಲ್ಲ ಎಂದು ಸರ್ಕಾರ ಸ್ಪಷ್ಟವಾಗಿ ಹೇಳಿರುವುದರಿಂದ, ನಾವು ಮಧ್ಯಮ ಮಾರ್ಗವನ್ನು ಕಂಡುಕೊಳ್ಳಬೇಕಾಗಿದೆ ಎಂದು ವಿರೋಧ ಪಕ್ಷದ ನಾಯಕರೊಬ್ಬರು ಹೇಳಿದರು.

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಲೋಕಸಭೆಗೆ ಮಾಹಿತಿ ನೀಡಿ, ಎಸ್‌ಐಆರ್ ಕುರಿತು ಚರ್ಚೆ ನಡೆಸಲು ಸಾಧ್ಯವಿಲ್ಲ. ಈ ವಿಷಯವು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇದೆ ಮತ್ತು ನಿಯಮಗಳು ತೀರ್ಪಿನ ಅಡಿಯಲ್ಲಿರುವ ವಿಷಯಗಳ ಕುರಿತು ಚರ್ಚೆಗೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ.


ಕ್ರೀಡಾ ಮಸೂದೆಯಂತಹ ಮಸೂದೆ ಮತ್ತು ಸುಂಕಗಳಂತಹ ಸಮಸ್ಯೆಗಳು ದೂರಗಾಮಿ ಪರಿಣಾಮ ಬೀರುತ್ತವೆ. ಖಖಖ ಕುರಿತು ಪ್ರತಿಭಟನೆಯನ್ನು ಮುಂದುವರಿಸುವಾಗಲೂ ಅವುಗಳನ್ನು ಚರ್ಚಿಸುವುದು ಯೋಗ್ಯವಾಗಿರುತ್ತದೆ ಎಂಬ ಭಾವನೆ ಅನೇಕ ಪಕ್ಷಗಳಲ್ಲಿದೆ ಎಂದು ಇಂಡಿಯಾ ಮೈತ್ರಿಕೂಟದ ಪ್ರಮುಖ ನಾಯಕರೊಬ್ಬರು ಹೇಳಿದರು.

ಆಗಸ್ಟ್ 25 ರಂದು ವ್ಯಾಪಾರ ಮಾತುಕತೆಗಾಗಿ ಅಮೆರಿಕದ ಸಮಾಲೋಚಕರು ಆಗಮಿಸುವ ಮೊದಲು ಸರ್ಕಾರವು ಭಾರತ–ಅಮೆರಿಕ ಸುಂಕ ಸಮರ ಕುರಿತು ಚರ್ಚೆಗೆ ಒಲವು ತೋರಬಹುದು ಎನ್ನಲಾಗುತ್ತಿದೆ.

ಈ ಮಧ್ಯೆ, ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ, ಕ್ರೀಡಾ ಮಸೂದೆಯು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯನ್ನು (BCCI) ಆರ್ ಟಿಐ ಕಾಯ್ದೆಯಿಂದ ವಿನಾಯಿತಿ ನೀಡುವುದಿಲ್ಲ ಎಂದರು, ಆದರೆ ಕ್ರೀಡಾ ಒಕ್ಕೂಟವು ಸರ್ಕಾರದಿಂದ ನಿಧಿ ಅಥವಾ ಅನುದಾನವನ್ನು ಬಳಸಿದರೆ ಮಾತ್ರ ಈ ಕಾಯ್ದೆ ಅನ್ವಯಿಸುತ್ತದೆ ಎಂದರು.

ಬಿಸಿಸಿಐ, ಇತರ ಕ್ರೀಡಾ ಆಡಳಿತ ಸಂಸ್ಥೆಗಳಂತೆ ಇದು ಸರ್ಕಾರಿ ನಿಧಿಯ ಮೇಲೆ ಅವಲಂಬಿತವಾಗಿಲ್ಲ ಎಂದು ವಾದಿಸುತ್ತಾ ಕಾಯ್ದೆಯ ವ್ಯಾಪ್ತಿಗೆ ಬರುವುದನ್ನು ಯಾವಾಗಲೂ ವಿರೋಧಿಸಿದೆ.

# ವಿದ್ಯುತ್ ಗಾಗಿ ಬೇಡಿಕೆ ಇಡುವ ಬುಡಕಟ್ಟು ಜನಾಂಗವನ್ನು ಅರಣ್ಯದಿಂದ ಸ್ಥಳಾಂತರಿಸಿ ವನ್ಯಜೀವಿ ಮಂಡಳಿ ಸೂಚನೆ



**ಬೆಂಗಳೂರು:** ಕುದುರೆಮುಖ ವನ್ಯಜೀವಿ ಅಭಯಾರಣ್ಯದ ಬುಡಕಟ್ಟು ಜನಾಂಗದವರಿಗೆ ಅರಣ್ಯ ಪ್ರದೇಶದೊಳಗೆ ವಿದ್ಯುತ್ ಒದಗಿಸುವ ಬದಲು ಅವರನ್ನು ಸ್ಥಳಾಂತರಿಸುವಂತೆ ರಾಜ್ಯ ವನ್ಯಜೀವಿ ಮಂಡಳಿಯ ಸದಸ್ಯರು ಸೂಚಿಸಿದ್ದಾರೆ.

ಕರ್ನಾಟಕ ಅರಣ್ಯ, ಪರಿಸರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ಅಧ್ಯಕ್ಷತೆಯಲ್ಲಿ ನಡೆದ ಮೂರನೇ ಸ್ಥಾಯಿ ಸಮಿತಿ ಸಭೆಯಲ್ಲಿ ಪುನರ್ವಸತಿ ಉತ್ತಮ ಆಯ್ಕೆಯಾಗಿದೆ ಎಂದು ಸೂಚಿಸಲಾಯಿತು. ಹಲವು ಹಳ್ಳಿಗಳಲ್ಲಿ ಕೆಲವೇ ಜನರು ವಿದ್ಯುತ್ ಬೇಡಿಕೆ ಇಡುತ್ತಿರುವುದರಿಂದ, ಅವರನ್ನು ಅರಣ್ಯದಿಂದ ಹೊರಗೆ ಸ್ಥಳಾಂತರಿಸುವುದು ಉತ್ತಮ ಮತ್ತು ಕಾರ್ಯಸಾಧ್ಯವಾದ ಆಯ್ಕೆಯಾಗಿದೆ ಎಂದು ಮೂಲಗಳು ಟಿಎನ್‌ಐಇಗೆ ತಿಳಿಸಿವೆ.

ಶೆಟ್ಟಿಹಳ್ಳಿ ಅರಣ್ಯ ಪ್ರದೇಶದ ಮರು ಸಮೀಕ್ಷೆ ನಡೆಸಿ, ಹೊರಗಿಡಲಾದ ಪ್ರದೇಶಗಳನ್ನು ಸೇರಿಸಲು ಸಹ ನಿರ್ಧರಿಸಲಾಯಿತು. ಕ್ಯಾಸಲ್‌ರಾಕ್‌ನಿಂದ ಹೊಸಪೇಟೆವರೆಗಿನ ಹಳಿ ದ್ವಿಗುಣಗೊಳಿಸುವ ಪ್ರಸ್ತಾವನೆಯ ಬಗ್ಗೆಯೂ ಸಚಿವರಿಗೆ ತಿಳಿಸಲಾಯಿತು, ಇದಕ್ಕಾಗಿ ಯೋಜನೆಯ ವನ್ಯಜೀವಿ ಮತ್ತು ಪರಿಸರ ಪ್ರಭಾವದ ಕುರಿತು ನಿರ್ಣಯಿಸಲು ಹಾಗೂ ವರದಿಯನ್ನು ಸಲ್ಲಿಸಲು ಸಮಿತಿ ರಚಿಸಲಾಗುವುದು. ಮುಂದಿನ ಸಭೆಯಲ್ಲಿ ವರದಿಯನ್ನು ಮಂಡಿಸಲು ನಿರ್ಧರಿಸಲಾಯಿತು.

# ಬಿಜೆಪಿ ಕೈಗೊಂಬೆಯಾಗಿದೆ ಭಾರತದ ಚುನಾವಣಾ ಆಯೋಗ

## ನಮ್ಮ ಮೌನದ ಸಮಯ ಮುಗಿದಿದೆ: ಸುರ್ಜೇವಾಲಾ

**ಬೆಂಗಳೂರು:** ಭಾರತೀಯ ಚುನಾವಣಾ ಆಯೋಗ ನಿಷ್ಪಕ್ಷಪಾತ ಸಾಂವಿಧಾನಿಕ ಸಂಸ್ಥೆಯಾಗಿ ಉಳಿದಿಲ್ಲ. ಚುನಾವಣೆಗಳನ್ನು ತಿರುಚುವ ಬಿಜೆಪಿಯ ಯಂತ್ರದಂತೆ ಕಾರ್ಯನಿರ್ವಹಿಸುತ್ತಿದೆ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಹೇಳಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಸಿಐ ತಟಸ್ಥ ಸಂಸ್ಥೆಯಾಗಿ ಕಾರ್ಯನಿರ್ವಹಿಸುವುದನ್ನು ನಿಲ್ಲಿಸಿದೆ. ಬಿಜೆಪಿ ಚುನಾವಣಾ ಆಯೋಗವನ್ನೇ ತನ್ನ ಹೊಸ ಅಸ್ತ್ರವನ್ನಾಗಿಸಿಕೊಂಡಿದೆ. ಮತದಾರರ ಹೆಸರುಗಳನ್ನು ಅಳಿಸಿ ಹಾಕಲು, ವಿರೋಧಿ ಧ್ವನಿಗಳನ್ನು ದಮನ ಮಾಡಲು ಮತ್ತು ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳ ಅಡಿಪಾಯವನ್ನೇ ಅಲುಗಾಡಿಸಲು ಸಾಧನವಾಗಿ ಬಳಸಿಕೊಳ್ಳುತ್ತಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ನಾವು ನೋಡಿದ್ದು, ಕೇವಲ ಆರಂಭವಷ್ಟೇ. ಅದು ಕೇವಲ ದುರುಪಯೋಗವಲ್ಲ, ಇದು ಪೂರ್ವ ನಿಯೋಜಿತ ವಂಚನೆ.

ಬಿಜೆಪಿ ಕೇವಲ ಚುನಾವಣೆಗಳನ್ನು ತಿರುಚುತ್ತಿಲ್ಲ. ಅದು ಒಬ್ಬೊಬ್ಬರ ಹೆಸರನ್ನು ಅಳಿಸುವ ಮೂಲಕ ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದೆ. ಇದು ಚುನಾವಣಾ ಪ್ರಚಾರವಲ್ಲ ಇದು ಫಲಿತಾಂಶಗಳನ್ನೇ ಬದಲಿಸುವ ತಂತ್ರ. ಮುಕ್ತ ಮತ್ತು ನ್ಯಾಯಸಮ್ಮತ



ಚುನಾವಣೆಗಳ ರಕ್ಷಕನಾಗಬೇಕಿದ್ದ ಚುನಾವಣಾ ಆಯೋಗ, ಇಂದು ಭಾರತೀಯ ಪ್ರಜಾಪ್ರಭುತ್ವದ ಸಮಾಧಿ ಮಾಡುವ ಪ್ರಕ್ರಿಯೆಯ ನಿರ್ದೇಶಕನಾಗಿ ಮಾರ್ಪಟ್ಟಿದೆ.

ಬಿಹಾರ ರಾಜ್ಯ ಒಂದರಲ್ಲೇ ಸುಮಾರು 65 ಲಕ್ಷ ಮತದಾರರ ಹೆಸರುಗಳನ್ನು ಮತಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದು ಕೇವಲ ತಾಂತ್ರಿಕ ದೋಷವಲ್ಲ, ಇದು ಪ್ರಜಾಪ್ರಭುತ್ವದ ಮೇಲಿನ ಕ್ರೂರ ಪ್ರಹಾರ. ಮತಪಟ್ಟಿಯಿಂದ ಕೈ ಬಿಡಲಾದ ಮತದಾರರಲ್ಲಿ ಹೆಚ್ಚಿನವರು ಬಡವರು, ದಲಿತರು, ಹಿಂದುಳಿದ ವರ್ಗದವರು ಮತ್ತು ಅಲ್ಪಸಂಖ್ಯಾತರು. ಇವರೆಲ್ಲರೂ ವಿರೋಧ ಪಕ್ಷಗಳ ನಿಷ್ಠರು ಹಾಗೂ ಬೆಂಬಲಿಗರಾಗಿದ್ದಾರೆ.

ಮಹಾರಾಷ್ಟ್ರದಲ್ಲಿ ಕೇವಲ 30 ನಿಮಿಷಗಳಲ್ಲಿ 70 ಲಕ್ಷ ಮತಗಳು ಚಲಾವಣೆಯಾದವು. ಇದು ಮತದಾನವಲ್ಲ ಇದು ಡಿಜಿಟಲ್ ಹ್ಯಾಕಿಂಗ್. ಈ ವಿಷಯವನ್ನು ರಾಹುಲ್ ಗಾಂಧಿಯವರು ನೇರವಾಗಿ ಚುನಾವಣಾ ಆಯೋಗದ ಗಮನಕ್ಕೆ ತಂದರೂ, ಅಲ್ಲಿಂದ ಸಿಕ್ಕಿದ್ದು ಮೌನದ ಪ್ರತ್ಯುತ್ತರ. ತನಿಖೆಯೂ ಇಲ್ಲ, ಉತ್ತರವೂ ಇಲ್ಲ. ಹೊಣೆಗಾರಿಕೆಯೂ ಇಲ್ಲ. ಆಯೋಗವು ಸಾಂವಿಧಾನಿಕ ಸಂಸ್ಥೆಯಂತೆ ವರ್ತಿಸದೆ, ಬಿಜೆಪಿಯ ಆದೇಶಕ್ಕೆ ತಲೆಬಾಗುವ ಹೇಡಿಯಂತೆ ವರ್ತಿಸುತ್ತಿದೆ.

ಲೋಕಸಭಾ ಚುನಾವಣೆ ವೇಳೆ ಬೆಂಗಳೂರು ಸೆಂಟ್ರಲ್ ಕ್ಷೇತ್ರದಲ್ಲಿ ಕೇವಲ 10 ನಿಮಿಷಗಳಲ್ಲಿ 65,000 ಮತಗಳು ಚಲಾವಣೆಯಾಗಿವೆ.

# ಮನೆ ವಸ್ತುಗಳ ಸಾಗಣೆ ವೇಳೆ ಗೃಹೋಪಯೋಗಿ ವಸ್ತುಗಳಿಗೆ ಧಕ್ಕೆ, ಶ್ರೀರಾಮ್ ಪ್ಯಾಕರ್ಸ್ ಮತ್ತು ಮೂವರ್ ಸಂಸ್ಥೆಗೆ ಮಾಲಿಕರಿಗೆ ದಂಡದ ಜೊತೆಗೆ ಪರಿಹಾರ ನೀಡಲು ಆದೇಶ

**ದಾವಣಗೆರೆ :** ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಕೆ.ಮನೋಹರ್ ಕುಮಾರ್ ರವರ ಮನೆಯ ಗೃಹೋಪಯೋಗಿ ವಸ್ತುಗಳನ್ನು ಚಿತ್ರದುರ್ಗದಿಂದ ದಾವಣಗೆರೆಯ ನಿವಾಸದ ಮನೆಗೆ 2024 ರ ಅಕ್ಟೋಬರ್ 20 ರಂದು ಸಾಗಾಣಿಕೆ ಮಾಡುವಾಗ ಶ್ರೀರಾಮ್ ಪ್ಯಾಕರ್ಸ್ & ಮೂವರ್ಸ್‌ನ ಮಾಲೀಕರಾದ ರಮೇಶ್ ಇವರಿಗೆ ಸಾಗಾಣಿಕೆ ವೆಚ್ಚವೆಂದು ರೂ.14,000/–ಗಳ ಮೊತ್ತವನ್ನು ನೀಡಿ, ಗೃಹೋಪಯೋಗಿ ವಸ್ತುಗಳನ್ನು ರಸ್ತೆಯ ಮುಖಾಂತರ ಚಿತ್ರದುರ್ಗದಿಂದ ದಾವಣಗೆರೆಯ ನಿವಾಸದ ಮನೆಗೆ ಸಾಗಾಣಿಕೆ ಮಾಡಲಾಗಿರುತ್ತದೆ.

ಆದರೆ ಶ್ರೀರಾಮ್ ಪ್ಯಾಕರ್ಸ್ & ಮೂವರ್ಸ್, ದಾವಣಗೆರೆ ಇವರು ಮನೆಯ ಗೃಹೋಪಯೋಗಿ ವಸ್ತುಗಳಿಗೆ, ಪೀಠೋಪಕರಣಗಳಿಗೆ ಸರಿಯಾಗಿ ಪ್ಯಾಕಿಂಗ್ ಮಾಡದೆ ಸಾಗಾಣಿಕೆ ಮಾಡಿದ್ದರಿಂದ 'ಡಬಲ್ ವುಡನ್ ಕಾಟ್, ವುಡನ್ ಟೀಪಾಯ್, ಫ್ರಿಡ್ಜ್, ಹೊಸದಾಗಿ ಖರೀದಿ ಮಾಡಲಾದ ಮರದ ಸೋಫಾ ಸೆಟ್ ಹ್ಯಾಂಡಲ್‌ಗಳಲ್ಲಿ 4–5 ಕಡೆಗಳಲ್ಲಿ ಡ್ಯಾಮೇಜ್, ಕ್ರ್ಯಾಚಸ್ ಆಗಿದ್ದು, ಈ ಬಗ್ಗೆ ದೂರುದಾರರಾದ ಕೆ.ಮನೋಹರ್ ಪ್ಯಾಕರ್ಸ್ ಅಂಡ್ ಮೂವರ್ಸ್ ಅವರಿಗೆ ಮೂರು ತಿಂಗಳಿನಿಂದಲೂ ಹಲವಾರು ಬಾರಿ ದೂರವಾಣಿ ಮೂಲಕ ಕೇಳಿಕೊಂಡರೂ ಪೀಠೋಪಕರಣಗಳನ್ನು ಸರಿಪಡಿಸಿಕೊಡದೆ ಕಾಲ ದೂಡುತ್ತಾ ಬಂದಿರುತ್ತಾರೆ.

# ರಾಷ್ಟ್ರೀಯ ಅಂಕಿ ಅಂಶ ಕಚೇರಿಯ 75ನೇ ವರ್ಷಾಚರಣೆ ಅಂಗವಾಗಿ ದಮ್ಮೂರು ಬೈಕ್ ರ್ಯಾಲಿ, ಜಾಗೃತಿ ಕಾರ್ಯಕ್ರಮ

**ಬಳ್ಳಾರಿ :** ಕೇಂದ್ರ ಸರ್ಕಾರದ ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಮಂತ್ರಾಲಯದ ಅಡಿ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರೀಯ ಮಾದರಿ ಸಮೀಕ್ಷಾ ಕಚೇರಿ (ಕ್ಷೇತ್ರ ಕಾರ್ಯ ವಿಭಾಗ), ಉಪಪ್ರಾದೇಶಿಕ ಕಚೇರಿ ಬಳ್ಳಾರಿ ಇವರ ಸಹಯೋಗದಲ್ಲಿ ರಾಷ್ಟ್ರೀಯ ಮಾದರಿ ಸಮೀಕ್ಷೆಯ (ಎನ್‌ಎಸ್‌ಓ) ರಾಷ್ಟ್ರೀಯ ಅಂಕಿ ಅಂಶ ಕಚೇರಿಯ 75ನೇ ವರ್ಷಾಚರಣೆಯ ಅಂಗವಾಗಿ ಶುಕ್ರವಾರ ದಮ್ಮೂರು ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮ ನಡೆಯಿತು.

ರಾಷ್ಟ್ರೀಯ ಅಂಕಿ ಅಂಶ ಕಚೇರಿಯ ಸಮೀಕ್ಷೆಗಳ ಮಹತ್ವ ಮತ್ತು ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಬಳ್ಳಾರಿ ಉಪಪ್ರಾದೇಶಿಕ ಕಚೇರಿಯಿಂದ ದಮ್ಮೂರು ಗ್ರಾಮದವರೆಗೆ ಬೈಕ್ ರ್ಯಾಲಿ ಆಯೋಜಿಸಲಾಗಿತ್ತು.

ಬಳಿಕ ಜಾಗೃತಿ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಅಂಕಿ ಅಂಶ ಕಚೇರಿ ಅಧಿಕಾರಿಗಳು ಸಮೀಕ್ಷೆಗಳ ಮೂಲಕ ರಾಷ್ಟ್ರದ ಯೋಜನೆ ಮತ್ತು ನೀತಿ ರೂಪಣೆಗೆ ಅಗತ್ಯವಾದ ವಿಶ್ವಾಸಾರ್ಹ ಸಾಮಾಜಿಕ–ಆರ್ಥಿಕ ಮಾಹಿತಿಯನ್ನು ಸಂಗ್ರಹಿಸುವಲ್ಲಿ ರಾಷ್ಟ್ರೀಯ ಅಂಕಿ ಅಂಶ ಕಚೇರಿ ಪಾತ್ರವನ್ನು ದೃಶ್ಯ ಪ್ರದರ್ಶನದ ಮೂಲಕ ಗ್ರಾಮಸ್ಥರಿಗೆ ವಿವರಿಸಿದರು.

ದಮ್ಮೂರು ಗ್ರಾಮದ ದುರ್ಗಮ್ಮ ದೇವಾಲಯದ ಆವರಣ, ಗ್ರಾಮ ಪಂಚಾಯತಿ ಕಚೇರಿ ಮತ್ತು ದಮ್ಮೂರು ವೆಂಕಪ್ಪ ತಾತ ಮಠದ ಆವರಣದಲ್ಲಿ ವೃಕ್ಷಾರೋಪಣಾ ಅಭಿಯಾನ ನಡೆಸಿ ಪರಿಸರ ಸಂರಕ್ಷಣೆ ಉಪಕ್ರಮದ ಅಂಗವಾಗಿ ದಮ್ಮೂರು ಗ್ರಾಮದ ನಿವಾಸಿಗಳಿಗೆ 200 ಸಸಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಅಂಕಿ ಅಂಶ ಕಚೇರಿ (ಕ್ಷೇತ್ರ ಕಾರ್ಯ ವಿಭಾಗ) ಅಧಿಕಾರಿಗಳು, ಹುಬ್ಬಳ್ಳಿ ಪ್ರಾದೇಶಿಕ ಕಚೇರಿಯ ನಿರ್ದೇಶಕ ಹರೀಶ್ವರನ್, ಜಿಲ್ಲಾ ಅಂಕಿಅಂಶಾಧಿಕಾರಿ ಪತ್ರಿಬಸಪ್ಪ

## ಶಾಂತಿನಿಕೇತನದಲ್ಲಿ ಹಿರಿಯ ನಾಗರೀಕರಿಗೆ ಗಾಂಧಿ ತತ್ವಗಳು

# ಹಿರಿಯ ನಾಗರಿಕರಿಗೂ ಸಹ ಚರಕದ ಮಹತ್ವ ತಿಳಿಸಿಕೊಡಬೇಕು : ಡಾ. ಎಚ್.ಕೆ.ಎಸ್. ಸ್ವಾಮಿ

**ಚಿತ್ರದುರ್ಗ :** ಹಿರಿಯ ನಾಗರಿಕರು ಸಹ ಹಳೆ ನೆನಪುಗಳನ್ನ ಮರುಕಳಿಸುವಂತೆ, ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಡಿದ ಅನುಭವಗಳನ್ನ ಆಧಾರವಾಗಿಟ್ಟುಕೊಂಡು, ಅವರಿಗೆ ಚರಕವನ್ನು ತೋರಿಸಿ, ಅದರ ಮುಖಾಂತರ ಅವರ ಕುಟುಂಬದಲ್ಲಿರುವ ಸದಸ್ಯರಿಗೆ ಮನವೊಲಿಸಿ, ಕೈಯಿಂದ ಮಾಡಿದಂತಹ ಉಡುಪುಗಳನ್ನ ಧರಿಸುವಂತೆ ಜಾಗೃತಿ ಮೂಡಿಸಿದರೆ, ಭಾರತದಲ್ಲಿರುವ ನಿರುದ್ಯೋಗ ಸಮಸ್ಯೆ, ಬಡತನ, ಅಸಮಾನತೆ, ಶೋಷಣೆ, ಪರಿಸರ ಮಾಲಿನ್ಯವನ್ನು ತಡೆಯಲು ಅನುಕೂಲಕರವಾಗುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ವಾಸವಿ ವಿದ್ಯಾ ಸಂಸ್ಥೆಯಲ್ಲಿ ಪ್ರತಿ ಭಾನುವಾರ ಶಾಂತಿನಿಕೇತನ ಹಿರಿಯ ನಾಗರಿಕರ ಸಂಘಟನೆ ಆಯೋಜಿಸಿದ್ದ ಸ್ನೇಹಿತರ ದಿನಾಚರಣೆಯಲ್ಲಿ ಗಾಂಧಿ ತತ್ವಗಳು ಮತ್ತು ಸಿದ್ಧಾಂತಗಳ ಬಗ್ಗೆ ಪ್ರಾತ್ಯಕ್ಷಿಕೆ ಮುಖಾಂತರ ಮಾತನಾಡುತ್ತಿದ್ದರು..

ಹಿರಿಯ ನಾಗರಿಕರಿಗೆ ವಾರಕ್ಕೊಮ್ಮೆ ಸಭೆ ಸೇರಿಸಿ, ಅವರಲ್ಲಿ ಮನೋ ಉಲ್ಲಾಸವನ್ನು ಉಂಟುಮಾಡುವಂತಹ ಶಾಂತಿನಿಕೇತನ ಸಂಘಟನೆ ವಯಸ್ಸಿನ ಅನುಭವವನ್ನು, ಯುವಜನಾಂಗಕ್ಕೆ ತಿಳಿಸಿ, ಅವರನ್ನ ಉತ್ತಮ




ನಾಗರಿಕರನ್ನಾಗಿ ಮಾಡಿ, ಸಮಾಜ ಸೇವೆಗೆ ಸಿದ್ದಗೊಳಿಸಲು ತಯಾರು ಮಾಡುತ್ತಿರುವ ಇಂತಹ ಸಂಸ್ಥೆಗಳು ಇನ್ನೂ ಹೆಚ್ಚಾಗಿ ಬೆಳವಣಿಗೆಯಾಗಲಿ ಎಂದು ಆಶಿಸಿದರು.

ಗುಡಿ ಕೈಗಾರಿಕೆ ನಾಶವಾಗಿರುವುದರಿಂದ ಬಹಳಷ್ಟು ಹಿರಿಯರಿಗೆ ಹಳೆ ಉದ್ಯೋಗಗಳನ್ನ ಮತ್ತೆ ಮರುಸ್ಥಾಪಿಸುವುದರ ಬಗ್ಗೆ ಯೋಚನೆಗಳು ಹೊಳೆದಿರುವುದರಿಂದ, ಅವರು ಸಹ ಚರಕದ ಮಹತ್ವವನ್ನ ಅರಿತುಕೊಂಡು, ಮನೆಯಲ್ಲಿ ಒಂದು ಚರಕ ಇಟ್ಟುಕೊಂಡು, ಬಿಡುವಿನ ಸಮಯದಲ್ಲಿ ದಾರಾ ತೆಗೆದು, ಬತ್ತಿ ಮಾಡಿ, ಹಾರ ಮಾಡಿ, ಸ್ವಲ್ಪ ಮಟ್ಟಿಗಾದರೂ ಹಣ ಸಂಪಾದನೆ ಮಾಡಿಕೊಂಡು ಮತ್ತು ದೇಹದ ಆರೋಗ್ಯವನ್ನು ಕಾಪಾಡಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಬಹಳಷ್ಟು ಹಿರಿಯ ನಾಗರಿಕರುಗಳು ವಯಸ್ಸಿನ ಚಿಂತನೆಯನ್ನು ಮರೆತು, ಯುವಕರಿಗಿಂತ ಹೆಚ್ಚಾಗಿ ಉತ್ಸಾಹದಿಂದ, ಸ್ವಾತಂತ್ರ್ಯ ಸಂಗ್ರಾಮದ ಚಳುವಳಿಗಳನ್ನ ಅರ್ಥ ಮಾಡಿಕೊಂಡು, ಮಹಾತ್ಮ ಗಾಂಧೀಜಿ ಅವರ ಸಿದ್ಧಾಂತಗಳನ್ನ ಅಳವಡಿಸಿಕೊಂಡು, ಜೀವನದಲ್ಲಿ ಸರಳತೆ, ಸದ್ಭಾವನೆ, ಅಹಿಂಸೆ, ಸಹಕಾರ ಮುಂತಾದವುಗಳನ್ನ ತಮ್ಮ ಕುಟುಂಬದಲ್ಲಿ ಅಳವಡಿಸಿಕೊಳ್ಳುತ್ತಾ, ಮುಂದಿನ ಜನಾಂಗವನ್ನು ಸಿದ್ಧಗೊಳಿಸುತ್ತಿರುವುದು ಶ್ಲಾಘನೀಯ ಎಂದರು.

ಕೈಯಿಂದ ಮಾಡಿದ ಖಾದಿಯನ್ನು ಹಿರಿಯರಿಗೆ ಪರಿಚಯಿಸಿ, ಅವರ ಮುಖಾಂತರ ಕುಟುಂಬದ ಸದಸ್ಯರಿಗೆ ಪರಿಚಯಿಸಿ, ದೇಶದಲ್ಲಿ ಒಂದಿಷ್ಟು ಸ್ವದೇಶಿ ತತ್ವವನ್ನು ಅನುಷ್ಠಾನಗೊಳಿಸಲು, ಇಂತಹ ಸಂಘಟನೆಗಳು ಸಹಾಯ ಮಾಡಬೇಕೆಂದು ವಿನಂತಿಕೊಂಡರು.

ಇನ್ನರ್ ವೀಲ್ ಕ್ಲಬ್ ನ ಶ್ರೀಮತಿ ಜ್ಯೋತಿ ಲಕ್ಷ್ಮಣ್ ರವರು ಮಾತನಾಡುತ್ತಾ ಹಿರಿಯರು ನಗುನಗುತ್ತಾ, ಜೀವನವನ್ನು ಅನುಭವಿಸುತ್ತಾ, ಇತರರಿಗೆ ಮಾದರಿಯಾಗಬೇಕು, ವಯಸ್ಸಿನ ಚಿಂತನೆಯನ್ನು ತೊರೆದು, ಮನಸ್ಸಿನ ಉಲ್ಲಾಸವನ್ನು ಹೆಚ್ಚಿಸಿಕೊಂಡು, ಆರೋಗ್ಯಪೂರ್ಣವಾದಂತಹ ಜೀವನವನ್ನು ನಿರ್ವಹಿಸಿ, ಕಿರಿಯರಿಗೆ ಮಾರ್ಗದರ್ಶನ ನೀಡುವ ಪ್ರಯತ್ನದಲ್ಲಿ ಶಾಂತಿನಿಕೇತನ ಕೆಲಸ ಮಾಡುತ್ತಿದೆ ಎಂದರು.


ರೋಟರಿ ಕ್ಲಬ್ ನ ಶ್ರೀ ಲಕ್ಷ್ಮಣ್ ರವರು ಮಾತನಾಡುತ್ತಾ ಮನುಷ್ಯನಿಗೆ ಸಾಧನೆ ಮಾಡಲು ಯಾವ ವಯಸ್ಸಿನ ಭೇದಭಾವವಿಲ್ಲ, ಎಲ್ಲಾ ವಯಸ್ಸಿನಲ್ಲೂ ಮನುಷ್ಯ ಸಾಧನೆ ಮಾಡಿ, ಸಮಾಜ ಸೇವೆ ಮಾಡಿ, ಇತರರಿಗೆ ಮಾದರಿಯಾಗಬಹುದು. ಈ ನಿಟ್ಟಿನಲ್ಲಿ ಎಲ್ಲ ಸಂಘ–ಸಂಸ್ಥೆಗಳು ಸಹ ಹಿರಿಯ ನಾಗರಿಕರಿಗೆ ಒಂದಿಷ್ಟು ಸಮಯವನ್ನು ನೀಡಿ, ಅವರನ್ನು ಉಲ್ಲಾಸದಿಂದ ನೋಡಿಕೊಳ್ಳುವಂಥ ವ್ಯವಸ್ಥೆಯಾಗಬೇಕು ಎಂದರು.

ಇನ್ನರ್ ವೀಲ್ ಕ್ಲಬ್ ನ ಅಧ್ಯಕ್ಷರು, ಕಾರ್ಯದರ್ಶಿಗಳು, ಸದಸ್ಯರುಗಳು, ಭಾಗವಹಿಸಿ ಹಿರಿಯ ನಾಗರಿಕರುಗಳಿಗೆ ಸ್ನೇಹದ ಹಸ್ತ ಚಾಚಿ, ಸ್ನೇಹಿತರ ದಿನಾಚರಣೆಯ ಶುಭಾಶಯಗಳು ಕೋರಿದರು. ಹಾಗೂ ಭಾಗವಹಿಸಿದವರಿಗೆಲ್ಲ ಸಿಹಿ ಹಂಚಿ ಸಂಭ್ರಮಿಸಿದರು. ಕೆಲವೊಂದಿಷ್ಟು ಹಿರಿಯ ನಾಗರಿಕರುಗಳು ಕವಿತೆಗಳನ್ನು ಓದಿ, ಕಥೆಗಳನ್ನ ಹೇಳಿ, ಹಾಸ್ಯ ಚಟಾಕಿಗಳನ್ನ ಹಾರಿಸಿ, ಬಂದ ಸಭಿಕರನ್ನ ಮನರಂಜಿಸಿದರು.

ಗಾಂಧೀಜಿಯವರ ಚರಕವನ್ನು ಮತ್ತು ಇತರ ಸಿದ್ಧಾಂತಗಳನ್ನು ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಲಾಯಿತು.

# ಮಿಡಲ್ ಕ್ಲಾಸ್ ರಾಮಾಯಣ'

## ಚಿತ್ರದ ಮೂಲಕ ಬೆಳ್ಳಿತೆರೆಗೆ ಮೋಕ್ಷಿತಾ ಪೈ ಪದಾರ್ಪಣೆ!



ಕಿರುತೆರೆ ಮತ್ತು ಬಿಗ್ ಬಾಸ್ ರಿಯಾಲಿಟಿ ಶೋ ಮೂಲಕ ಮನೆಮಾತಾಗಿದ್ದ ಮೋಕ್ಷಿತಾ ಪೈ, ಈಗ ಮಿಡಲ್ ಕ್ಲಾಸ್ ರಾಮಾಯಣದೊಂದಿಗೆ ಮೊದಲ ಬಾರಿಗೆ ಬೆಳ್ಳಿತೆರೆಗೆ ಎಂಟ್ರಿ ಕೊಡುತ್ತಿದ್ದಾರೆ. ಈ ಚಿತ್ರವು ಈಗಾಗಲೇ ಶೀರ್ಷಿಕೆಯಿಂದಲೇ ಕುತೂಹಲವನ್ನು ಕೆರಳಿಸಿದ. ಅದರ ಹೆಸರಿಗೆ ತಕ್ಕಂತೆ, ಇದು ಮಧ್ಯಮ ವರ್ಗದ ಜೀವನದ ಸಂತೋಷ ಮತ್ತು ಹೋರಾಟಗಳ ಕಥೆಯಾಗಿದೆ.

ನಾಯಕನ ಕಪ್ಪು ಬಣ್ಣದ ಹುಡುಗಿಯೊಂದಿಗಿನ ಪ್ರೀತಿ ಮತ್ತು ಮದುವೆ ಹಾಗೂ ಸಂಬಂಧದ ಸುತ್ತ ಕತೆಯಿದ್ದು ಸವಾಲುಗಳ ಸುತ್ತ ಸುತ್ತುತ್ತದೆ. ಈಗಾಗಲೇ ಎರಡು ಹಾಡುಗಳು ಬಿಡುಗಡೆಯಾಗಿ ಅದ್ಭುತ ಪ್ರತಿಕ್ರಿಯೆ ಪಡೆದಿದೆ.ಅಂಜನಾದ್ರಿ ಪ್ರೊಡಕ್ಷನ್ಸ್ ಮತ್ತು ವಾವ್ ಸ್ಟುಡಿಯೋಸ್ ಬ್ಯಾನರ್‌ಗಳ ಅಡಿಯಲ್ಲಿ ಜಯರಾಮ್ ಗಂಗಪ್ಪನಹಳ್ಳಿ ನಿರ್ಮಿಸಿರುವ ಈ ಚಿತ್ರವನ್ನು ಧನುಷ್ ಗೌಡ ವಿ ನಿರ್ದೇಶಿಸಿದ್ದಾರೆ. ಮೋಕ್ಷಿತಾ ಪೈ ವಿನು ಗೌಡ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ತಮ್ಮ ಚೊಚ್ಚಲ ಸಿನಿಮಾದ ಬಗ್ಗೆ ಮಾತನಾಡಿದ ಮೋಕ್ಷಿತಾ ಪೈ, "ಇದು ನನ್ನ ಮೊದಲ ಸಿನಿಮಾ. ಧಾರಾವಾಹಿಗಳು ಮತ್ತು ರಿಯಾಲಿಟಿ ಶೋ ಬೇರೆ ಬೇರೆ, ಆದರೆ ಸಿನಿಮಾ ಬಿಡುಗಡೆಯಾಗುವುದನ್ನು ನೋಡುವುದು ವಿಶೇಷ. ಮಿಡಲ್ ಕ್ಲಾಸ್ ರಾಮಾಯಣ ಕೆಲಸದಲ್ಲಿ ಯಾವುದೇ ರಾಜಿ ಮಾಡಿಕೊಂಡಿಲ್ಲ ಎಂದು ಹೇಳಿದ್ದಾರೆ.

ಇದು ಚಿಕ್ಕಬಳ್ಳಾಪುರದ ನಂದಿಯ ಹಿನ್ನೆಲೆ ಹೊಂದಿದೆ. ಯಾವುದೇ ಸೂತ್ರಬದ್ಧ ಹಾಡುಗಳು ಅಥವಾ ಹೋರಾಟಗಳಿಲ್ಲ, ಆದರೆ ಇದು ಶುದ್ಧ ಮನರಂಜನೆಯೂ ಆಗಿರುತ್ತದೆ ಎಂದು ನಿರ್ದೇಶಕ ಧನುಷ್ ಗೌಡ ವಿವರಿಸಿದ್ದಾರೆ.ಎಸ್ ನಾರಾಯಣ್, ವೀಣಾ ಸುಂದರ್, ಮಜಾಭಾರತ್ ಜಗಪ್ಪ, ಯುಕ್ತ ಪೆರ್ವಿ ಮತ್ತಿತರರು ನಟಿಸಿದ್ದಾರೆ. ಮಿಡಲ್ ಕ್ಲಾಸ್ ರಾಮಾಯಣವು ಆರೋಗ್ಯಕರ ಕುಟುಂಬ ಮನರಂಜನಾ ಸಿನಿಮಾವಾಗಿದೆ.

# 'ಏಳುಮಲೆ' ಚಿತ್ರ ಬಿಡುಗಡೆ

**ಹಾಡು, ಟೈಟಲ್ ಹಾಗೂ ಟೀಸರ್ ಮೂಲಕ ಈಗಾಗಲೇ ಪ್ರೇಕ್ಷಕರ ಗಮನ ಸೆಳೆದಿರುವ ತರುಣ್ ಸುಧೀರ್ ನಿರ್ಮಾಣದ 'ಏಳುಮಲೆ' ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ.**

**ಪುನೀತ್ ರಂಗಸ್ವಾಮಿ ಆ್ಯಕ್ಷನ್ ಕಟ್ ಹೇಳಿರುವ ಏಳುಮಲೆ ಸಿನಿಮಾ ಸೆಪ್ಟೆಂಬರ್ 5ರಂದು ತೆರೆಗೆ ಬರುತ್ತಿದೆ. ಕನ್ನಡ, ತಮಿಳು ಹಾಗೂ ತೆಲುಗು ಭಾಷೆಯಲ್ಲಿ ಚಿತ್ರ ಬಿಡುಗಡೆಯಾಗಲಿದೆ.**



ಚಿತ್ರ ತಂಡ ಟೀಸರ್'ನ್ನು ಬಿಡುಗಡೆ ಮಾಡಿದ್ದು, ಎರಡು ಹಾಡುಗಳನ್ನೂ ಬಿಡುಗಡೆ ಮಾಡಿದೆ. ಕರ್ನಾಟಕ–ತಮಿಳುನಾಡು ನಡುವಿನ ಗಡಿಭಾಗದ ಪ್ರೇಮಕಥೆಯಾಗಿರುವ 'ಏಳುಮಲೆ' ಸಿನಿಮಾದಲ್ಲಿ ನಟಿ ರಕ್ಷಿತಾ ಸಹೋದರ ರಾಣಾ ಕನ್ನಡದ ಹುಡುಗ ಹರೀಶ್ ಆಗಿ ನಟಿಸುತ್ತಿದ್ದಾರೆ.

ರಿಯಾಲಿಟಿ ಶೋ ಮೂಲಕ ಮನೆ ಮಾತಾಗಿರುವ ಮೈಸೂರಿನ ಹುಡುಗಿ ಪ್ರಿಯಾ ಆಚಾರ್ ತಮಿಳು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ.

ಈ ಸಿನಿಮಾದಲ್ಲಿ ರಾಣಾ, ಪ್ರಿಯಾಂಕಾ ಆಚಾರ್ ಜೊತೆಗೆ ಜಗಪತಿ ಬಾಬು, ನಾಗಾಭರಣ, ಕಿಶೋರ್ ಕುಮಾರ್, ಸರ್ದಾರ್ ಸತ್ಯ, ಜಗಪ್ಪ ತಾರಾಬಳಗದಲ್ಲಿದ್ದಾರೆ.

ಚೌಕ ಮತ್ತು ಕಾಟೇರ ಚಿತ್ರಗಳ ನಿರ್ದೇಶಕ ತರುಣ್ ಕಿಶೋರ್ ಸುಧೀರ್ ಅವರು ಈ ಸಿನಿಮಾ ನಿರ್ಮಾಣ ಮಾಡುತ್ತಿದ್ದಾರೆ. ಅಟ್ಲಾಂಟಾ ನಾಗೇಂದ್ರ ಅವರು ಚಿತ್ರಕ್ಕೆ ಸಹ ನಿರ್ಮಾಪಕರಾಗಿದ್ದಾರೆ. ಈ ಚಿತ್ರವು ನೈಜ ಘಟನೆಯನ್ನು ಆಧರಿಸಿದೆ. ಭಾವನಾತ್ಮಕವಾದ ಕಥೆಯನ್ನು ಒಳಗೊಂಡಿರಲಿದೆ. ಚಾಮರಾಜನಗರ, ಸೇಲಂ, ಈರೋಡ್ ಸೇರಿದಂತೆ ಕರ್ನಾಟಕ–ತಮಿಳುನಾಡು ಗಡಿ ಭಾಗದ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ.

ಡಿ.ಇಮ್ಮನ್ ಸಂಗೀತ, ಅದ್ವೈತ್ ಗುರುಮೂರ್ತಿ ಛಾಯಾಚಿತ್ರಗ್ರಹಣ, ಕೆ.ಎಂ.ಪ್ರಕಾಶ್ ಸಂಕಲನ, ನಾಗಾರ್ಜುನ್ ಶರ್ಮಾ ಹಾಗೂ ಪುನೀತ್ ರಂಗಸ್ವಾಮಿ ಸಂಭಾಷಣೆ ಚಿತ್ರಕ್ಕಿದೆ.

# ನಟ ಅಜಯ್ ರಾವ್ ದಾಂಪತ್ಯದಲ್ಲಿ ಬಿರುಕು: ಮತ್ತೆ ಒಂದಾಗಲು ಬಯಸಿದ ಪತ್ನಿ ಸಪ್ನ,

**ಬೆಂಗಳೂರು:** ಸ್ಯಾಂಡಲ್ ವುಡ್ ನಟ ಅಜಯ್ ರಾವ್ ಹಾಗೂ ಪತ್ನಿ ಸ್ವಪ್ನಾ ರಾವ್ ನಡುವೆ ಎಲ್ಲವೂ ಸರಿಯಿಲ್ಲ. ಇಬ್ಬರ ದಾಂಪತ್ಯದಲ್ಲಿ ಬಿರುಕು ಮೂಡಿದೆ, ಪರಸ್ಪರ ವಿಚ್ಛೇದನ ಕೋರಿ ನ್ಯಾಯಾಲಯದ ಮೆಟ್ಟಲೇರಿದ್ದಾರೆಂಬುದು ಸುದ್ದಿಗೆ ಗ್ರಾಸವಾಗಿತ್ತು. ಈ ನಡುವೆ ಸಪ್ನ ಅವರು ಪತಿಯೊಂದಿಗೆ ಕೂಡಿ ಬಾಳುವ ಮನಸ್ಸು ಮಾಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಸಪ್ನ ಅವರು, ಹೊಂದಾಣಿಕೆ ಜೀವನ ನಡೆಸಲು ನಿರ್ಧರಿಸಿರುವುದಾಗಿ ತಿಳಿಸಿದ್ದಾರೆ.

ತಾಯಿಯಾಗಿ ನನ್ನ ಮೊದಲ ಜವಾಬ್ದಾರಿ ನನ್ನ ಮಗಳ ಸುರಕ್ಷತೆ, ಗೌರವ ಮತ್ತು ಅವಳ ಭವಿಷ್ಯಕ್ಕಾಗಿ ನಾನು ಪ್ರತಿದಿನ ಧೈರ್ಯವನ್ನು ಕೂಡಿಸಿ, ನನಗೆ ತೀವ್ರವಾಗಿ ಪರೀಕ್ಷಿಸುವ ಸವಾಲುಗಳನ್ನು ಎದುರಿಸುತ್ತಿದ್ದೇನೆ. ಪ್ರಿಯ ಸ್ನೇಹಿತರೇ ಮತ್ತು ಸಹೋದರರೇ. ಈ ಹಂತದಲ್ಲಿ ನಾನು ಮತ್ತು ನನ್ನ ಮಗಳು ನಮ್ಮ ಬದುಕನ್ನು ಪುನರ್‌ನಿರ್ಮಿಸಿಕೊಳ್ಳಲು ನಿಮ್ಮ ಹಾರೈಕೆಗಳು ಮತ್ತು ಪ್ರಾರ್ಥನೆಗಳನ್ನು ನಿಮ್ಮಲಿ ಕೇಳಿಕೊಳ್ಳುತ್ತಿದೇನೆಂದು ಹೇಳಿದ್ದಾರೆ.

ನಾನು ಅತ್ಯಂತ ಗೌರವದಿಂದ ತಿಳಿಸಲು ಬಯಸುವುದೇನೆಂದರೆ, ಈ ವಿಷಯವು ನಮ್ಮ ವೈಯಕ್ತಿಕ, ಆಳವಾದ ಭಾವನಾತ್ಮಕ ಮತ್ತು ದಾಂಪತ್ಯ ಜೀವನಕ್ಕೆ ಮಾತ್ರ ಸಂಬಂಧಿಸಿದ್ದು ಹೊರತು ಬೇರೆ ಯಾವುದೇ ರೀತಿಯಲ್ಲಿ ಸಂಬಂಧಿಸಿಲ್ಲ ಎಂದು ತಿಳಿಸಲು ಬಯಸುತ್ತೇನೆ ಎಂದು ಬರೆದುಕೊಂಡಿದ್ದಾರೆ.

ಇದಕ್ಕೂ ಮೊದಲು ಸೋಶಿಯಲ್ ಮೀಡಿಯಾದಲ್ಲಿ ಪ್ರತಿಕ್ರಿಯೆ ನೀಡಿದ್ದ ನಟ ಅಜಯ್ ರಾವ್ ಅವರು, ಈ ಸೂಕ್ಷ್ಮ ಸಮಯದಲ್ಲಿ ನಮ್ಮ ಕುಟುಂಬದ ಖಾಸಗಿತನವನ್ನು ಗೌರವಿಸುವಂತೆ ಹಾಗೂ ವೈಯಕ್ತಿಕ ವಿಷಯಗಳಿಗೆ ಸಂಬಂಧಿಸಿದ ಯಾವುದೇ ಸುದ್ದಿಯನ್ನು ಹಂಚಿಕೊಳ್ಳುವುದನ್ನ ಅಥವಾ ಹರಡುವುದನ್ನ ದೂರವಿಡುವಂತೆ ತಮ್ಮನ್ನು ವಿನಮ್ರವಾಗಿ ವಿನಂತಿಸುತ್ತೇನೆ.

## 2018ರ ನೈಜ ಘಟನೆ ಆಧರಿತ ಸಿನಿಮಾ

# 'ನೋಡಿದ್ದು ಸುಳ್ಳಾಗಬಹುದು

## ಕನ್ನಡ ಮತ್ತು ತೆಲುಗಿನಲ್ಲಿ ನಿರ್ಮಾಣ

ಬಹುತೇಕ ಹೊಸಬರೇ ನಿರ್ಮಿಸಿರುವ ಚಿತ್ರ 'ನೋಡಿದ್ದು ಸುಳ್ಳಾಗಬಹುದು' ಮೂಲಕ ಅನಿಲ್ ಕುಮಾರ್ ಕೆಆರ್ ಇದೀಗ ಸಿನಿಮಾ ರಂಗಕ್ಕೆ ಕಾಲಿಡುತ್ತಿದ್ದಾರೆ. ಈ ಚಿತ್ರಕ್ಕೆ ಬಂಡವಾಳ ಹೂಡಿರುವ ಅವರೇ ನಾಯಕನಾಗಿಯೂ ನಟಿಸಿದ್ದಾರೆ. ಚಿತ್ರದಲ್ಲಿ ಅನಿಲ್ ಪೊಲೀಸ್ ಅಧಿಕಾರಿಯ ಪಾತ್ರವನ್ನು ನಿರ್ವಹಿಸಿದ್ದಾರೆ. ಚಿತ್ರಕ್ಕೆ ವಿಜಯ್ ಚಲಪತಿ ಆಕ್ಷನ್ ಕಟ್ ಹೇಳಿದ್ದಾರೆ. ಈ ಚಿತ್ರವು ಆಳವಾದ ಭಾವನಾತ್ಮಕ ಮೌಲ್ಯವನ್ನು ಹೊಂದಿದೆ ಮತ್ತು ಅದರ ಶೀರ್ಷಿಕೆಯು ಶಕ್ತಿಯುತ ಮತ್ತು ಅರ್ಥಪೂರ್ಣವಾಗಿದೆ ಎಂದು ಅನಿಲ್ ಭಾವಿಸುತ್ತಾರೆ.



'ನಾನು ಚಿಕ್ಕಬಳ್ಳಾಪುರದವನು ಮತ್ತು ನಟನೆಯ ಬಗ್ಗೆ ಯಾವಾಗಲೂ ಉತ್ಸಾಹ ಹೊಂದಿದ್ದೇನೆ. ನಾನು ಉಷಾ ಭಂಡಾರಿ ಅವರ ನಟನಾ ಶಾಲೆಯಲ್ಲಿ ತರಬೇತಿ ಪಡೆದಿದ್ದೇನೆ ಮತ್ತು ನನ್ನ ಸ್ನೇಹಿತ ಅಕ್ಷಯ್ ಮೂಲಕ ನಿರ್ದೇಶಕ ವಿಜಯ್ ಸರ್ ಅವರನ್ನು ಭೇಟಿಯಾದೆ. ಕಥೆ ಮತ್ತು ಶೀರ್ಷಿಕೆ ಎರಡರಿಂದಲೂ ನಾನು ಆಕರ್ಷಿತನಾದೆ. ಪ್ರಮುಖ ಪಾತ್ರದಲ್ಲಿ ನಟಿಸುವುದರ ಜೊತೆಗೆ, ನಾನು ಚಿತ್ರವನ್ನು ನಿರ್ಮಿಸಿದ್ದೇನೆ. ಕ್ಲೈಮ್ಯಾಕ್ಸ್ ಒಂದು ಪ್ರಮುಖ ಹೈಲೈಟ್ ಆಗಿರುತ್ತದೆ. ಚಿತ್ರವು ತನ್ನದೇ ಆದ ಕಮರ್ಷಿಯಲ್ ಅಂಶಗಳನ್ನು ಹೊಂದಿದೆ. ಆದರೆ, ಪೋಷಕರು ಮತ್ತು ಮಕ್ಕಳ ನಡುವಿನ ಬಾಂಧವ್ಯದ ಮೇಲೆ ಕೇಂದ್ರೀಕರಿಸುತ್ತದೆ' ಎಂದು ಅನಿಲ್ ಹೇಳುತ್ತಾರೆ.

ಚಿತ್ರದ ಮೊದಲ ಹಾಡು 'ಕನಸುಗಳ ಮೆರವಣಿಗೆ' ಇತ್ತೀಚೆಗಷ್ಟೇ ಬಿಡುಗಡೆಗೊಂಡಿದೆ. ಅನಿರುದ್ಧ್ ಶಾಸ್ತ್ರಿ ಅವರು ಬರೆದಿರುವ ಈ ಹಾಡಿಗೆ ಗುಮ್ಮಿನೇನಿ ವಿಜಯ್ ಸಂಗೀತ ಸಂಯೋಜಿಸಿದ್ದಾರೆ. ಅನಿರುದ್ಧ್ ಶಾಸ್ತ್ರಿ ಮತ್ತು ಪೃಥ್ವಿ ಭಟ್ ಧ್ವನಿ ನೀಡಿದ್ದಾರೆ. 'ನೋಡಿದ್ದು ಸುಳ್ಳಾಗಬಹುದು' 2018ರ ನೈಜ ಘಟನೆಯನ್ನು ಆಧರಿಸಿದೆ ಮತ್ತು ಕನ್ನಡ ಮತ್ತು ತೆಲುಗು ಎರಡರಲ್ಲೂ ನಿರ್ಮಿಸಲಾಗಿದೆ.

'ನನಗೆ ಚಿತ್ರರಂಗದೊಂದಿಗೆ 10 ವರ್ಷಗಳಿಂದ ನಂಟಿದೆ. ಪೊಗರು ಸೇರಿದಂತೆ ಹಲವು ಚಿತ್ರಗಳಲ್ಲಿ ನಿರ್ದೇಶನದ ವಿಭಾಗದಲ್ಲಿ ಕೆಲಸ ಮಾಡಿದ್ದು, ಸ್ವತಂತ್ರ ನಿರ್ದೇಶಕನಾಗಿ ಇದು ನನ್ನ ಮೊದಲ ಚಿತ್ರ. ನನ್ನ ಮೇಲೆ ನಂಬಿಕೆ ಇಟ್ಟಿದ್ದಕ್ಕಾಗಿ ಅನಿಲ್ ಕುಮಾರ್ ಅವರಿಗೆ ನಾನು ಧನ್ಯವಾದ ಹೇಳುತ್ತೇನೆ. ನೀವು ಚಿತ್ರವನ್ನು ನೋಡಿದಾಗ ನಾವು ಈ ಶೀರ್ಷಿಕೆಯನ್ನು ಏಕೆ ಆರಿಸಿಕೊಂಡಿದ್ದೇವೆಂದು ನಿಮಗೆ ತಿಳಿಯುತ್ತದೆ. ಚಿತ್ರೀಕರಣ ಪೂರ್ಣಗೊಂಡಿದೆ ಮತ್ತು ನಾವು ಈಗ ಪೋಸ್ಟ್–ಪ್ರೊಡಕ್ಷನ್ ಹಂತದಲ್ಲಿದ್ದೇವೆ' ಎನ್ನುತ್ತಾರೆ ನಿರ್ದೇಶಕರು.

# 'ಸು ಫ್ರಮ್ ಸೋ' ಗೆ ಶ್ಲಾಘನೆ

**ಅತಿ ಕಡಿಮೆ ಬಜೆಟ್‌ನಲ್ಲಿ ನಿರ್ಮಾಣಗೊಂಡು ಸದ್ಯ ಬಾಕ್ಸ್ ಆಫೀಸ್‌ನಲ್ಲಿ ಕೋಟಿ ಕೋಟಿ ಕಲೆಕ್ಷನ್ ಮಾಡುವ ಮೂಲಕ 'ಸು ಫ್ರಮ್ ಸೋ' ಕನ್ನಡ ಚಿತ್ರರಂಗದ ಕೀರ್ತಿಯನ್ನು ಹೆಚ್ಚಿಸಿದೆ. ರಾಜ್ ಬಿ ಶೆಟ್ಟಿ ಅತಿಥಿ ಪಾತ್ರದಲ್ಲಿ ಅಭಿನಯಿಸಿ ನಿರ್ಮಾಣ ಮಾಡಿರೋ 'ಸು ಫ್ರಮ್ ಸೋ' ಕನ್ನಡ ಮಾತ್ರವಲ್ಲದೇ ಮಲಯಾಳಂ, ತೆಲುಗು ಆವೃತ್ತಿಗಳಲ್ಲಿಯೂ ಬಿಡುಗಡೆ ಆಗಿ ಕಮಾಲ್ ಮಾಡುತ್ತಿದೆ. ಇದೀಗ ಬಾಲಿವುಡ್ ಸೂಪರ್ ಸ್ಟಾರ್ ಅಜಯ್ ದೇವ್‌ಗನ್ ಅವರ ಮೆಚ್ಚುಗೆಗೂ ಪಾತ್ರವಾಗಿದೆ.**



ಈ ಕುರಿತು ನಿರ್ದೇಶಕ ಜೆ.ಪಿ.ತೂಮಿನಾಡು ಅವರು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಅಜಯ್ ದೇವಗನ್ ಅವರಿಗೆ ನಮ್ಮ 'ಸು ಫ್ರಮ್ ಸೋ' ಚಿತ್ರ ತುಂಬಾ ಇಷ್ಟವಾಗಿತ್ತು, ಹೀಗಾಗಿ ಅದರ ಬಗ್ಗೆ ಮಾತನಾಡಲು ನಮ್ಮನ್ನು ಆಹ್ವಾನಿಸಿದ್ದರು. ಮಾತುಕತೆ ವೇಳೆ ಅವರ ಅದ್ಭುತ ವ್ಯಕ್ತಿತ್ವದ ಪರಿಚಯವಾಯಿತು.

ಅವರದ್ದು ನಿಜವಾಗಿಯೂ ಅದ್ಭುತ ವ್ಯಕ್ತಿತ್ವ. ದಿ ಗ್ರೇಟ್ ಅಜಯ್ ಸರ್ ಅವರಿಗೆ ನನ್ನ ಹೃತ್ಪೂರ್ವಕ ಗೌರವ" ಎಂದು ಬರೆದುಕೊಂಡಿದ್ದಾರೆ. ಚಿತ್ರದ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡಿದ್ದಾರೆ ಎಂದು ಬರೆದುಕೊಂಡಿದ್ದು, ಅವರ ಜತೆಗಿನ ಫೋಟೊವನ್ನು ಹಂಚಿಕೊಂಡಿದ್ದಾರೆ.

ಅಜಯ್ ದೇವಗನ್ ಈ ಚಿತ್ರವನ್ನು ಅದರ ಮೂಲ ಭಾಷೆಯಲ್ಲಿ ವೀಕ್ಷಿಸಿದ್ದಾರೆ ಎಂದು ರಾಜ್ ಬಿ ಶೆಟ್ಟಿ ತಿಳಿಸಿದ್ದಾರೆ. ಯಾವುದೇ ಚಲನಚಿತ್ರ ನಿರ್ಮಾಪಕರು ಈ ಸಿನಿಮಾವನ್ನು ಇಷ್ಟಪಡುತ್ತಾರೆ ಎಂದು ರಾಜ್ ಹೇಳಿದರು.

ಅಜಯ್ ದೇವಗನ್ ಅದನ್ನು ಕನ್ನಡದಲ್ಲಿ ಉಪಶೀರ್ಷಿಕೆಗಳೊಂದಿಗೆ ನೋಡಿದರು. ಕಥಾಹಂದರ,

ಕಚಗುಳಿ ಇಡುವ ಡೈಲಾಗ್ಸ್ , ಮನರಂಜನೆಗೆ ಹಾಗೂ ಭಾವನಾತ್ಮಕ ಸನ್ನಿವೇಶಗಳ ಬಗ್ಗೆ ಹೊಗಳಿದರು ಎಂದು ಹೇಳಿದ್ದಾರೆ. ಸಿನಿಮಾ ಕ್ಲೈಮ್ಯಾಕ್ಸ್ ಅಜಯ್ ದೇವಗನ್ ಸರ್ ಗೆ ಇಷ್ಟವಾಗಿದೆ. ಭಾವನಾತ್ಮಕ ಸನ್ನಿವೇಶ ನನ್ನ ಮನಕಲಕಿತು ಎಂದು ಹೇಳಿದ್ದಾಗಿ ರಾಜ್ ಬಿ ಶೆಟ್ಟಿ ತಿಳಿಸಿದ್ದಾರೆ.

ನಿಮ್ಮಲ್ಲಿ ಆಸಕ್ತಿದಾಯಕವಾದ ಕಥೆ ಏನಾದರೂ ಇದ್ದರೆ, ನೀವು ನನ್ನನ್ನು ಸಂಪರ್ಕ ಸಾಧಿಸಬಹುದು ಹಾಗೂ ನಾವು ಒಟ್ಟಿಗೆ ಕೆಲಸ ಮಾಡಬಹುದು ಎಂದು ಅವರು ನನಗೆ ಹೇಳಿದರು ಎಂದು ರಾಜ್ ಬಿ ಶೆಟ್ಟಿ ಬಹಿರಂಗಪಡಿಸಿದರು.

ಬಾಲಿವುಡ್ ಹೊರತುಪಡಿಸಿ, ದೊಡ್ಡ ನಿರ್ಮಾಣ ಸಂಸ್ಥೆಗಳು ಸೇರಿದಂತೆ ಇತರ ಭಾಷೆಗಳ ಬಹಳಷ್ಟು ಜನರು ಸು ಪ್ರಂ ಸೋ ವೀಕ್ಷಿಸಿದ್ದಾರೆ.

ಕರ್ನಾಟಕವನ್ನು ಮೀರಿ ಸಿನಿಮಾ ಜನಪ್ರಿಯತೆ ಗಳಿಸುತ್ತಿದೆ ಎಂದಿದ್ದಾರೆ.

ಜೆ ಪಿ ಥುಮಿನಾಡ್ ನಿರ್ದೇಶನದ 'ಸು ಫ್ರಮ್ ಸೋ' ಚಿತ್ರವು ಚಿತ್ರಮಂದಿರಗಳಲ್ಲಿ ಮೂರನೇ ವಾರಕ್ಕೆ ಕಾಲಿಡುತ್ತಿದೆ, ವಿಶ್ವದಾದ್ಯಂತ 87 ಕೋಟಿಗೂ ಹೆಚ್ಚು ಗಳಿಸಿದೆ. ರಾಜ್ ಬಿ ಶೆಟ್ಟಿ ತಮ್ಮ ಲೈಟರ್ ಬುದ್ಧ ಫಿಲ್ಮ್ಸ್ ಬ್ಯಾನರ್ ಅಡಿ ಈ ಸಿನಿಮಾ ನಿರ್ಮಾಣ ಮಾಡಿದ್ದು, ಜೆಪಿ ತುಮಿನಾಡ್ ನಿರ್ದೇಶನದ ಜೊತೆಗೆ ಅಭಿನಯಿಸಿದ್ದಾರೆ.

ಶನೀಲ್ ಗೌತಮ್, ಸಂಧ್ಯಾ ಅರಕೆರೆ, ಪ್ರಕಾಶ್ ತುಮಿನಾಡ್, ದೀಪಕ್ ರೈ ಪಣಾಜೆ, ಮೈಮ್ ರಾಮ್‌ದಾಸ್ ತಾರಾಗಣದಲ್ಲಿದ್ದಾರೆ. ಜುಲೈ 25, 2025ರಂದು ಕನ್ನಡದಲ್ಲಿ ಚಿತ್ರಮಂದಿರ ಪ್ರವೇಶಿಸಿದ 'ಸು ಫ್ರಮ್ ಸೋ' ಆಗಸ್ಟ್ 1ರಂದು ಮಲಯಾಳಂನಲ್ಲಿ,

# ನನ್ನ 'ಬಾಷಾ' ಚಿತ್ರಕ್ಕಿಂತ 'ಓಂ' 10 ಪಟ್ಟು ದೊಡ್ಡದು; ಭಾರತದ ಬುದ್ಧಿವಂತ ನಿರ್ದೇಶಕರಿಗೆಲ್ಲಾ ಉಪೇಂದ್ರ ದೊಡ್ಡ ಸ್ಫೂರ್ತಿ!



ಉಪೇಂದ್ರ ಅವರ ನಿರ್ದೇಶನಕ್ಕೆ ಫಿದಾ ಆಗದವರೇ ಇಲ್ಲ. ಅಂತಹ ಸಿನಿಮಾಗಳನ್ನು ಅವರು ತಮ್ಮ ವೃತ್ತಿ ಜೀವನದಲ್ಲಿ ನೀಡಿದ್ದಾರೆ. ಅವರ ಸ್ಟೈಲ್ ಅನೇಕ ನಿರ್ದೇಶಕರಿಗೆ ಸ್ಫೂರ್ತಿ ಎಂದರೂ ತಪ್ಪಾಗಲಾರದು.ನಿರ್ದೇಶಕ ಲೋಕೇಶ್ ಕನಗರಾಜ್ ಸೇರಿದಂತೆ ಅನೇಕ ನಿರ್ದೇಶಕರು ತಮ್ಮ ಸಿನಿಮಾ ಮೇಕಿಂಗ್ ನಲ್ಲಿ ಉಪೇಂದ್ರ ಪ್ರಭಾವ ಇದೆ ಎಂದು ಒಪ್ಪಿಕೊಂಡಿದ್ದು ಇದೆ. ಈಗ ತಮಿಳಿನ ಸೂಪರ್‌ಸ್ಟಾರ್ ರಜನಿಕಾಂತ್ ಅವರು ಉಪೇಂದ್ರ ಅವರನ್ನು ಹಾಡಿ ಹೊಗಳಿದ್ದಾರೆ.

ಲೋಕೇಶ್ ಕನಕರಾಜ್ ನಿರ್ದೇಶನದ 'ಕೂಲಿ' ಸಿನಿಮಾದಲ್ಲಿ 'ಸೂಪರ್ ಸ್ಟಾರ್' ರಜನಿಕಾಂತ್ ಜೊತೆಗೆ ಉಪೇಂದ್ರ ನಟಿಸುತ್ತಿದ್ದಾರೆ. ಈ ಸಿನಿಮಾದ ಆಡಿಯೋ ಈಚೆಗೆ ಚೆನ್ನೈನಲ್ಲಿ ನಡೆದಿತ್ತು. ಈ ವೇಳೆ ರಜನಿಕಾಂತ್ ಅವರು ಉಪೇಂದ್ರ ಅವರನ್ನ ಮನಸಾರೆ ಹೊಗಳಿದ್ದಾರೆ. ಜೊತೆಗೆ 'ಓಂ' ಚಿತ್ರವನ್ನು ಕೂಡ ನೆನಪು ಮಾಡಿಕೊಂಡಿದ್ದಾರೆ. ಕೂಲಿ' ಚಿತ್ರದಲ್ಲಿ ಉಪೇಂದ್ರ ಅವರು ಕಲೀಶ ಎಂಬ ಪಾತ್ರವನ್ನು ಮಾಡಿದ್ದಾರೆ. ಆ ಬಗ್ಗೆ ಮಾತನಾಡುತ್ತಾ ರಜನಿಕಾಂತ್, "ನಮ್ಮ ಸಿನಿಮಾದಲ್ಲಿ ಉಪೇಂದ್ರ ಅವರು ಒಂದು ಪಾತ್ರ ಮಾಡಿದ್ದಾರೆ. ಭಾರತದ ಅತ್ಯಂತ ಬುದ್ಧಿವಂತ ನಿರ್ದೇಶಕರಿಗೆಲ್ಲಾ ಉಪೇಂದ್ರ ಅವರೇ ದೊಡ್ಡ ಸ್ಫೂರ್ತಿ. ಮಲಯಾಳಂ, ಹಿಂದಿ, ತೆಲುಗು, ತಮಿಳು ಎಲ್ಲಾ ಭಾಷೆಯವರಿಗೂ ಉಪೇಂದ್ರ ಸ್ಫೂರ್ತಿ. ಅಂತಹ ದೊಡ್ಡ ಡೈರೆಕ್ಟರ್. ಅವರಿಗೆ ನಟನಾಗಬೇಕು ಎಂದು ಇಷ್ಟವಿರಲಿಲ್ಲ. ಅವರು ಮೂಲತಃ ನಿರ್ದೇಶಕರು" ಎಂದು ಹೇಳಿದ್ದಾರೆ.ಅವರು 'ಓಂ' ಎಂಬ ಒಂದು ಸಿನಿಮಾವನ್ನು ಶಿವರಾಜ್‌ಕುಮಾರ್‌ಗೆ ಮಾಡಿದ್ದಾರೆ. ನನಗೆ ಇಲ್ಲಿ 'ಬಾಷಾ' ಸಿನಿಮಾ ಹೇಗೋ, ಅಲ್ಲಿ (ಕರ್ನಾಟಕದಲ್ಲಿ) ಅದಕ್ಕಿಂತಲೂ 10 ಪಟ್ಟು ದೊಡ್ಡ ಸಿನಿಮಾ 'ಓಂ'. ಆದಾದ ಮೇಲೆ ಅವರು ಮಾಡಿರುವ ಒಂದೊಂದು ಪಾತ್ರಗಳು ಡಿಫರೆಂಟ್. ಈಗ ಲೋಕೇಶ್ ಕನಕರಾಜ್ ನಾನ್ ಲೀನಿಯರ್ ಅಂತೇನೋ ಟೆಕ್ನಿಕ್ ಬಳಸುತ್ತಾರಲ್ವಾ? ಅದನ್ನು ಉಪೇಂದ್ರ ಅಂದೇ ಮಾಡಿದ್ದಾರೆ" ಎಂದು ರಜನಿಕಾಂತ್ ಹೇಳಿದ್ದಾರೆ.

# ಬಾಕ್ಸ್ ಆಫೀಸ್‌ನಲ್ಲಿ ಕೂಲಿ ಅಬ್ಬರ

## ರಜನಿಕಾಂತ್ ನಟನೆಯ ಚಿತ್ರ ಬಿಡುಗಡೆಯಾದ ಮೊದಲ ದಿನವೇ ಭರ್ಜರಿ ಕಲೆಕ್ಷನ್!

**ನವದೆಹಲಿ: ರಜನಿಕಾಂತ್ ನಟನೆಯ 'ಕೂಲಿ' ಚಿತ್ರ ಬಾಕ್ಸ್ ಆಫೀಸ್‌ನಲ್ಲಿ ಅದ್ಭುತ ಗಳಿಕೆ ಕಂಡಿದೆ. ಈ ಚಿತ್ರವನ್ನು ಲೋಕೇಶ್ ಕನಕರಾಜ್ ನಿರ್ದೇಶಿಸಿದ್ದು, ರಜನಿಕಾಂತ್ ಜೊತೆಗಿನ ಮೊದಲ ಸಹಯೋಗವಾಗಿದೆ. ಸೂಪರ್‌ಸ್ಟಾರ್ ಅವರ 171ನೇ ಚಿತ್ರವು ಎಲ್ಲ ಭಾಷೆಗಳಲ್ಲಿ 65 ಕೋಟಿ ರೂ.ಗಳನ್ನು ಗಳಿಸಿದೆ. ಈ ಮೂಲಕ ಹೃತಿಕ್ ರೋಷನ್–ಜೂನಿಯರ್ ಎನ್‌ಟಿಆರ್ ಅವರ 'ವಾರ್ 2' ಗೆ ತೀವ್ರ ಸ್ಪರ್ಧೆಯನ್ನು** ಒಡ್ಡಿದೆ.



ಫಿಲ್ಮ್ ಟ್ರೇಡ್ ಪೋರ್ಟಲ್ ಖಚಿಭಿಟಟಇ ಪ್ರಕಾರ, ರಜನಿಕಾಂತ್ ನಟನೆಯ ಈ ಚಿತ್ರ ಅತಿ ಹೆಚ್ಚು ಗಳಿಕೆ ಕಂಡ ಅವರ ತಮಿಳು ಚಿತ್ರಗಳಲ್ಲಿ ಒಂದಾಗಿ ಹೊರಹೊಮ್ಮಿದೆ.

ತಮಿಳಿನಲ್ಲಿ ಬೆಳಗಿನ ಪ್ರದರ್ಶನಗಳಿಗೆ ಸುಮಾರು ಶೇ 81.95 ರಷ್ಟು ಜನರು ಭೇಟಿ ನೀಡಿದ್ದಾರೆ. ಮಧ್ಯಾಹ್ನದ ಪ್ರದರ್ಶನಗಳಲ್ಲಿ ಶೇ 85.13, ಸಂಜೆ ಪ್ರದರ್ಶನಗಳಲ್ಲಿ ಶೇ 86.57 ಮತ್ತು ರಾತ್ರಿ ಪ್ರದರ್ಶನಗಳಲ್ಲಿ ಶೇ 94.32 ರಷ್ಟು ಜನರು ಚಿತ್ರಮಂದಿರಗಳಿಗೆ ಭೇಟಿ ನೀಡಿದ್ದಾರೆ.

ರಜನಿಕಾಂತ್ ನಟನೆಯ ಚಿತ್ರ ಹಿಂದಿ ಚಿತ್ರಗಳ ಪಟ್ಟಿಯಲ್ಲಿಯೂ ತನ್ನ ಅಸ್ತಿತ್ವವನ್ನು ಕಂಡುಕೊಂಡಿತು. ಬೆಳಗಿನ ಪ್ರದರ್ಶನಗಳಲ್ಲಿ ಮುಂಬೈನಲ್ಲಿ ಶೇ 35ರಷ್ಟು ಜನರು ಭಾಗವಹಿಸಿದ್ದರು. ಬೆಂಗಳೂರಿನಲ್ಲಿ ಶೇ 41 ರಷ್ಟು ಜನರು ಮತ್ತು ಕೋಲ್ಕತ್ತಾದಲ್ಲಿ ಶೇ 41 ರಷ್ಟು ಜನರು ಚಿತ್ರಮಂದಿರಗಳಿಗೆ ಬಂದಿದ್ದರು.


ಉದ್ಯಮ ವರದಿಗಳ ಪ್ರಕಾರ, ರಜನಿಕಾಂತ್ ಅವರ ಕೂಲಿ ಚಿತ್ರವು ಮೊದಲ ದಿನವೇ 60 ಕೋಟಿ ರೂ. ಗಳಿಸಿದ ಹಿಂದಿನ ಬ್ಲಾಕ್‌ಬಸ್ಟರ್ ಚಿತ್ರ 2.0 ಅನ್ನು ಹಿಂದಿಕ್ಕಿತು. ಆದ್ದರಿಂದ, ಕೂಲಿ ಚಿತ್ರವು ಬಿಡುಗಡೆಯಾದ ಮೊದಲ ದಿನವೇ ಅಧಿಕ ಗಳಿಕೆ ಕಂಡ ರಜನಿಕಾಂತ್ ಅವರ ಮೊದಲ ಚಿತ್ರ ಎಂದು ಹೇಳಲಾಗುತ್ತಿದೆ.

ಆದಾಗ್ಯೂ, ಕೂಲಿ ಚಿತ್ರವು ವಿಜಯ್ ಅವರ ಲಿಯೋ ಚಿತ್ರವನ್ನು (ಲೋಕೇಶ್ ಕನಕರಾಜ್ ನಿರ್ದೇಶಿಸಿದ್ದರು) ಹಿಂದಿಕ್ಕಲು ಸಾಧ್ಯವಾಗಲಿಲ್ಲ. ಲಿಯೋ ಬಿಡುಗಡೆಯಾದ ದಿನವೇ 66 ಕೋಟಿ ರೂ. ಗಳಿಕೆ ಕಂಡಿತ್ತು. ತಮಿಳು ಚಿತ್ರರಂಗದಲ್ಲಿ ಅತಿ ಹೆಚ್ಚು ಗಳಿಕೆ ಕಂಡ ಚಿತ್ರ ಎಂಬ ಸ್ಥಾನವನ್ನು ಭದ್ರಪಡಿಸಿಕೊಂಡಿತು. ಕೂಲಿ ಚಿತ್ರವು ವಾರಾಂತ್ಯದ ಲಾಭವನ್ನು ಪಡೆಯುವ ನಿರೀಕ್ಷೆಯಿದೆ.

ಲೋಕೇಶ್ ಕನಕರಾಜ್ ನಿರ್ದೇಶನದ ಕೂಲಿ ಚಿತ್ರವು ರಜನಿಕಾಂತ್ ಅವರ 171 ನೇ ಚಿತ್ರವಾಗಿದೆ. ಈ ಚಿತ್ರದಲ್ಲಿ ನಾಗಾರ್ಜುನ, ಶ್ರುತಿ ಹಾಸನ್, ಉಪೇಂದ್ರ, ಸೌಬಿನ್ ಶಾಹಿರ್ ಮತ್ತು ಸತ್ಯರಾಜ್ ಪ್ರಮುಖ ಪಾತ್ರಗಳಲ್ಲಿದ್ದಾರೆ. ಅಮೀರ್ ಖಾನ್ ಈ ಚಿತ್ರದಲ್ಲಿ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಕೂಲಿ ಚಿತ್ರವನ್ನು ಕಲಾನಿಧಿ ಮಾರನ್ ಅವರ ಸನ್ ಪಿಕ್ಚರ್ಸ್ ನಿರ್ಮಿಸಿದೆ.

# ಲ್ಯಾಂಡ್‌ಲಾರ್ಡ್' ಸಿನಿಮಾ: 'ಡೇರ್‌ಡೆವಿಲ್ ಮುಸ್ತಾಫಾ' ಖ್ಯಾತಿಯ ಶಿಶಿರ್ ಬೈಕಾಡಿ ಮಾಸ್ ಅವತಾರ!

ರಂಗಭೂಮಿಯಿಂದ ಸಿನಿಮಾಕ್ಕೆ ಶಿಶಿರ್ ಬೈಕಾಡಿ ಅವರ ಪ್ರಯಾಣವು ರೋಮಾಂಚಕಾರಿಯಾಗಿದೆ. ಡೇರ್‌ಡೆವಿಲ್ ಮುಸ್ತಾಫಾ ಚಿತ್ರದಲ್ಲಿನ ನಟನೆಗೆ ವ್ಯಾಪಕ ಮೆಚ್ಚುಗೆ ಗಳಿಸಿದ ಶಿಶಿರ್, ಕನ್ನಡ ಚಿತ್ರರಂಗದಲ್ಲಿ ಭರವಸೆಯ ಪ್ರತಿಭೆಯಾಗಿ ಗುರುತಿಸಿಕೊಂಡರು. ಈ ಪಾತ್ರವು ಅವರಿಗೆ ಅನೇಕ ಅವಕಾಶಗಳನ್ನು ನೀಡಿತು. ಶಿಶಿರ್ ಇದೀಗ ವಿವಿಧ ಭಾಷೆಗಳಲ್ಲಿ ಹಲವಾರು ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ.



ದುನಿಯಾ ವಿಜಯ್ ನಟನೆಯ 'ಲ್ಯಾಂಡ್ ಲಾರ್ಡ್' ಚಿತ್ರದಲ್ಲಿಯೂ ಅವರು ಕಾಣಿಸಿಕೊಳ್ಳುತ್ತಿದ್ದಾರೆ. ಜಡೇಶಾ ಕೆ ಹಂಪಿ ನಿರ್ದೇಶನದ ಈ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ರಿಲೀಸ್ ಆಗಿದ್ದು, ಶಿಶಿರ್ ರಾ, ಮಾಸ್ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ. ಕೆವಿ ಸತ್ಯ ಪ್ರಕಾಶ್ ನಿರ್ಮಿಸಿರುವ ಈ ಚಿತ್ರದಲ್ಲಿ ರಚಿತಾ ರಾಮ್ ನಾಯಕಿಯಾಗಿ ಮತ್ತು ರಿಥನ್ಯಾ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಸ್ವಾಮಿ ಅವರ ಛಾಯಾಗ್ರಹಣ ಮತ್ತು ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ. ಶಿಶಿರ್ ಪಾತ್ರವು ಈ ಆಕ್ಷನ್–ಪ್ಯಾಕ್ಡ್ ಎಂಟರ್ಟೈನರ್‌ನ ಹೈಲೈಟ್ ಗಳಲ್ಲಿ ಒಂದಾಗಿದೆ.

ಅಲ್ಲದೆ, ಇನ್ನೂ ಘೋಷಣೆಯಾಗದ ಚಿತ್ರದ ಕೆಲಸವನ್ನು ಪೂರ್ಣಗೊಳಿಸಿದ್ದಾರೆ. ಇದರಲ್ಲಿ ಪ್ರಮುಖ ಪ್ಯಾನ್–ಇಂಡಿಯಾ ತಾರೆಯೊಬ್ಬರು ನಟಿಸಲಿದ್ದು, ಅವರು ನಟ, ನಿರ್ದೇಶಕ ಮತ್ತು ನಿರ್ಮಾಪಕನ ಜವಾಬ್ದಾರಿ ನಿರ್ವಹಿಸಲಿದ್ದಾರೆ. ವಿವರಗಳು ಇನ್ನೂ ಗೌಪ್ಯವಾಗಿವೆಯಾದರೂ, ಈ ಯೋಜನೆಯು ಅದ್ದೂರಿಯಾಗಿ ಬಿಡುಗಡೆಯಾಗಲು ಸಜ್ಜಾಗುತ್ತಿದೆ.ಶಿಶಿರ್ ತಮ್ಮ ಚೊಚ್ಚಲ ತಮಿಳು ಚಿತ್ರಕ್ಕಾಗಿ ಮಾತುಕತೆ ನಡೆಸುತ್ತಿದ್ದಾರೆ, ಈಗಾಗಲೇ ಚರ್ಚೆಗಳು ಮುಂದುವರೆದಿವೆ.

# ಆಡಿಯೋ ರೈಟ್ಸ್ ದಾಖಲೆ ಮೊತ್ತಕ್ಕೆ ಮಾರಾಟ

ಸ್ಯಾಂಡಲ್ ವುಡ್ ನಲ್ಲಿ ಸಾಕಷ್ಟು ನಿರೀಕ್ಷೆಗಳನ್ನು ಮೂಡಿಸಿರುವ ದುನಿಯಾ ವಿಜಯ್ ಅಭಿನಯದ ಲ್ಯಾಂಡ್ ಲಾರ್ಡ್ ಚಿತ್ರದ ಆಡಿಯೋ ರೈಟ್ಸ್ ಆನಂದ್ ಆಡಿಯೋ ಪಾಲಾಗಿದೆ. ದಾಖಲೆ ಮೊತ್ತಕ್ಕೆ ಚಿತ್ರದ ಆಡಿಯೋ ರೈಟ್ಸ್ ಮಾರಾಟವಾಗಿದೆ.

ಸಾರಥಿ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಹೇಮಂತ್ ಗೌಡ ಕೆ.ಎಸ್ ಮತ್ತು ಕೆ.ವಿ. ಸತ್ಯಪ್ರಕಾಶ್ ನಿರ್ಮಿಸಿರುವ ಈ ಚಿತ್ರವನ್ನು ಜಡೇಶಾ ಕೆ. ಹಂಪಿ ನಿರ್ದೇಶಿಸಿದ್ದಾರೆ.ಸೆಟ್ಟೇರಿದಾಗ್ಲೇ ಭಾರಿ ಸದ್ದು ಮಾಡಿದ್ದ ಈ ಚಿತ್ರದ ಬಹುತೇಕ ಚಿತ್ರೀಕರಣ ಪೂರ್ಣಗೊಂಡಿದ್ದು, ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಬಿರುಸಿನಿಂದ ಸಾಗಿದೆ.ಈ ನಡುವೆ ಚಿತ್ರತಂಡ ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ಸಂತಸದ ಸುದ್ದಿಯೊಂದನ್ನ ಹಂಚಿಕೊಂಡಿದೆ. ಆನಂದ್ ಆಡಿಯೋ ಕಂಪನಿ ಲ್ಯಾಂಡ್ ಲಾರ್ಡ್ ಚಿತ್ರದ ಆಡಿಯೋ ಹಕ್ಕುಗಳನ್ನ ದಾಖಲೆಯ ಬೆಲೆಗೆ ಖರೀದಿಸಿದೆ ಎಂದು ತಿಳಿಸಿದೆ. ಆ ವಿಚಾರವನ್ನ ಚಿತ್ರತಂಡ ಮೋಷನ್ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ವಿಶೇಷವಾಗಿ ಹಂಚಿಕೊಂಡಿದೆ.

## ಬಳ್ಳಾರಿ: ಸೆ.01 ರಂದು ಪ.ಜಾತಿ, ಪ.ಪಂಗಡ ಜನಾಂಗದವರ ಕುಂದು-ಕೊರತೆ ಸಭೆ

**ಬಳ್ಳಾರಿ :** ಬಳ್ಳಾರಿ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಸೆ.01 ರಂದು ಮಧ್ಯಾಹ್ನ 12.30 ಗಂಟೆಗೆ ಬಳ್ಳಾರಿಯ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಂಘದ ಮುಖ್ಯಸ್ಥರು, ಸದಸ್ಯರು, ದಲಿತ ಮುಖಂಡರು ಹಾಗೂ ಸಮುದಾಯದ ಜನರು ಸಮಸ್ಯೆಗಳಿದ್ದಲ್ಲಿ ಅಂದು ನಡೆಯುವ ಕುಂದು ಕೊರತೆ ಸಭೆಯಲ್ಲಿ ಭಾಗವಹಿಸಬಹುದು ಎಂದು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿ: ಆ.29 ರಂದು ಪ.ಜಾತಿ, ಪ.ಪಂಗಡ ಜನಾಂಗದವರ ಕುಂದು-ಕೊರತೆ ಸಭೆ

**ಬಳ್ಳಾರಿ :** ಕಂಪ್ಲಿ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಕಂಪ್ಲಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಆ.29 ರಂದು ಬೆಳಿಗ್ಗೆ 11 ಗಂಟೆಗೆ ಕಂಪ್ಲಿಯ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

# ನ್ಯಾ. ನಾಗಮೋಹನ್ ದಾಸ್ ವರದಿಯಲ್ಲಿ ಬಲಗೈ ಸಮುದಾಯಕ್ಕೆ ಅನ್ಯಾಯ: ಪ್ರತಿಭಟನೆ

**ದಾವಣಗೆರೆ:** ಎಸ್ಸಿ ಒಳ ಮೀಸಲಾತಿ ಕಲ್ಪಿಸಲು ನ್ಯಾ. ಹೆಚ್.ಎನ್.ನಾಗಮೋಹನ್ ದಾಸ್ ಅವರ ಏಕ ಸದಸ್ಯ ಆಯೋಗ ಸಮೀಕ್ಷೆ ನಡೆಸಿ, ಸಲ್ಲಿಸಿರುವ ವರದಿಯಲ್ಲಿ ಬಲಗೈ ಸಮುದಾಯಕ್ಕೆ ಅನ್ಯಾಯವಾಗಿದೆ ಎಂದು ಆರೋಪಿಸಿ ಜಿಲ್ಲಾ ಛಲವಾದಿ ಮಹಾಸಭಾದ ವತಿಯಿಂದ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಇದೇ ಸಂದರ್ಭದಲ್ಲಿ ಮಾತನಾಡಿದ ಛಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಎನ್. ರುದ್ರಮನಿ ಅವರು, ನಾಗಮೋಹನ್ ದಾಸ್ ಆಯೋಗವು ಬಲಗೈ ಸಮುದಾಯದಲ್ಲಿನ ಮೂಲ ಉಪ ಜಾತಿಗಳ ನ್ನು ಒಂದು ಗುಂಪಿನಡಿ ಗುರುತಿಸಿಲ್ಲ. ವರದಿಯಲ್ಲಿ ಪರಿಶಿಷ್ಟ ಜಾತಿಯ ಬಲಗೈ ಸಮುದಾಯಕ್ಕೆ ಸೇರಿದ ಪರೈಯ್ಯ, ಪರವನ್ ಜಾತಿಯನ್ನು ಎಡಗೈ ಪಂಗಡದ ವ್ಯಾಪ್ತಿಗೆ ಸೇರಿಸಲಾಗಿದೆ. ಅಲ್ಲದೇ ಬಲಗೈ ಸಮುದಾಯಕ್ಕೆ ಸೇರಿದ ಇನ್ನೂ ಹಲವು ಜಾತಿಗಳನ್ನು ಅತ್ಯಂತ ಹಿಂದುಳಿದ ಜಾತಿಗಳ ಗುಂಪಿಗೆ ಸೇರಿಸಿ ಬಲಗೈ ಸಮುದಾಯದ ಜನಸಂಖ್ಯೆಯನ್ನು ಉದ್ದೇಶ ಪೂರ್ವಕವಾಗಿ ಕಡಿಮೆ ಮಾಡಲಾಗಿದೆ ಎಂದು ದೂರಿದರು.

ಛಲವಾದಿ ಸಮುದಾಯವನ್ನು ಐದು ಪಂಗಡಗಳಾಗಿ ವಿಭಜಿಸಿ ಕಡಿಮೆ ಜನಸಂಖ್ಯೆ ತೋರಿಸಲಾಗಿದೆ. ಛಲವಾದಿ ಸಮುದಾಯದಲ್ಲಿ ವಿಭಜಿಸಿರುವ ಐದು ಪಂಗಡಗಳನ್ನು ಒಗ್ಗೂಡಿಸಿ ಮೀಸಲಾತಿ ನೀಡಲು ಸಚಿವ ಸಂಪುಟದ ಉಪ ಸಮಿತಿ ರಚಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಛಲವಾದಿ ಮಹಾಸಭಾದ ಪದಾಧಿಕಾರಿಗಳಾದ ಜಯಪ್ರಕಾಶ್, ಶೇಖರಪ್ಪ, ಹೆಚ್.ಕೆ. ಬಸವರಾಜ್, ಹಾಲೇಶಪ್ಪ, ಸಿ.ನಾಗರಾಜ್, ಎಂ.ಸಿ. ಓಂಕಾರಪ್ಪ, ಹೆಚ್.ಜಯಪ್ಪ, ದೊಡ್ಡಮನಿ ರವಿ, ನವೀನಕುಮಾರ್, ಹೆಚ್. ಗಿರೀಶ್, ಹಾಲೇಶ್ ಬಸವನಾಳ್, ಡಾ. ಹೆಚ್. ಜಗನ್ನಾಥ್, ಅಂಜಿನಪ್ಪ, ಧರಣೇಂದ್ರಪ್ಪ, ನಿಜಲಿಂಗಪ್ಪ, ರುದ್ರಮ್ಮ, ಬ್ಯಾಂಕ್ ಶಿವಣ್ಣ, ರಾಘವೇಂದ್ರ, ತಣಿಗೆರೆ ಅಣ್ಣಪ್ಪ, ಕೊಟ್ರಬಸಪ್ಪ, ಮಧುಸೂಧನ್, ಮಲ್ಲಿಕಾರ್ಜುನ್, ಗಂಗಾ ಧರ್, ಪ್ರಶಾಂತ್, ಲೋಕೇಶ್ ಭಾಗವಹಿಸಿದ್ದರು.



## ಬೆಳೆ ವಿಮಾ ಯೋಜನೆಯ ದಿನಾಂಕ ವಿಸ್ತರಣೆ

**ಚಿಕ್ಕಮಗಳೂರು, ಆ.7:** ಸರ್ಕಾರವು 2025ರ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯ ವ್ಯಾಪ್ತಿಗೆ ಚಿಕ್ಕಮಗಳೂರು, ಕಡೂರು, ಕೊಪ್ಪ, ಮೂಡಿಗೆರೆ, ಎನ್.ಆರ್.ಪುರ, ಶೃಂಗೇರಿ, ತರೀಕೆರೆ, ಅಜ್ಜಂಪುರ ಹಾಗೂ ಕಳಸ ತಾಲ್ಲೂಕುಗಳನ್ನು ಒಳಪಡಿಸಲಾಗಿದೆ.

ವಿಮಾ ಯೋಜನೆಗೆ ಬೆಳೆ ಸಾಲ ಪಡೆಯದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 14 ರವರೆಗೆ ಹಾಗೂ ಸಾಲ ಪಡೆದ ರೈತರಿಗೆ ಅಂತಿಮ ದಿನಾಂಕವನ್ನು ಆಗಸ್ಟ್ 30ರವರೆಗೆ ವಿಸ್ತರಿಸಲಾಗಿದೆ.

ಅಡಿಕೆ ಬೆಳೆಗೆ ವಿಮಾ ಮೊತ್ತ 1,28,000 ರೂ. ಆಗಿದ್ದು, ವಿಮಾ ಮೊತ್ತ 6,400 ರೂ. ಆಗಿದೆ. ಕರಿಮೆಣಸು ಬೆಳೆಗೆ ವಿಮಾ ಮೊತ್ತ 47,000 ಆಗಿದ್ದು, ಕಂತು 2,350 ರೂ. ಆಗಿದೆ. ಹಸಿರು ಮೆಣಸಿನಕಾಯಿಗೆ 71,000 ರೂ.ವಿಮಾ ಮೊತ್ತ ಆಗಿದ್ದರೆ, ಕಂತು 3,550 ರೂ. ಆಗಿದೆ. ದಾಳಿಂಬೆಗೆ 1,27,000 ರೂ. ವಿಮಾ ಮೊತ್ತ ಆಗಿದ್ದರೆ, ಕಂತು 6,350 ರೂ. ಆಗಿದೆ. ಮಾವಿಗೆ 80,000 ರೂ. ವಿಮಾ ಮೊತ್ತವಾಗಿದ್ದರೆ, ಕಂತು 4,000 ರೂ. ಆಗಿದೆ.

# ಸ್ವಾಧೀನಾನುಭವ ಪತ್ರಕ್ಕೆ ವಿನಾಯಿತಿಗೆ ನೀಡಲು ಶಾಸಕರಿಗೆ ಮನವಿ

**ಚಿಕ್ಕಮಗಳೂರು:** ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ತಾತ್ಕಾಲಿಕ ಮತ್ತು ಶಾಶ್ವತ ವಿದ್ಯುತ್ ಸಂಪರ್ಕಗಳಿಗೆ ಸ್ವಾಧೀನಾನುಭವ ಪತ್ರಕ್ಕೆ ವಿನಾಯಿತಿ ನೀಡಲು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು ಎಂದು ಕರ್ನಾಟಕ ರಾಜ್ಯ ಅನುಮತಿ ಪಡೆದ ವಿದ್ಯುತ್ ಗುತ್ತಿಗೆದಾರರ ಜಿಲ್ಲಾ ಸಂಘದ ಪದಾಧಿಕಾರಿಗಳು ಶಾಸಕ ಹೆಚ್.ಡಿ. ತಮ್ಮಯ್ಯ ಅವರಿಗೆ ಮನವಿ ಸಲ್ಲಿಸಿದರು.

ಈ ಕುರಿತು ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ಆರ್. ಹರೀಶ್ ಗ್ರಾಹಕರಿಗೆ ವಿದ್ಯುತ್ ನೀಡುವ ಸಲುವಾಗಿ ಸಾರ್ವಜನಿಕರು ಪ್ರಸ್ತುತ ಐದು ಎಸ್ಕಾಂ ಕಂಪನಿಗಳಿಗೆ ಸೇತುವೆಯಾಗಿ ಎಲ್ಲಾ ಕಂಪನಿಗಳ ಅಧಿಕಾರಿಗಳೊಡನೆ ಜೊತೆಗೂಡಿ ವ್ಯವಸ್ಥಿತವಾಗಿ ವಿದ್ಯುತ್ ಸಂಪರ್ಕವನ್ನು ಸಕಾಲದಲ್ಲಿ ಅಳವಡಿಸುತ್ತಾ ಉತ್ತಮ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಎಂದರು.

ಸಂಘದ ಸದಸ್ಯರು ವಸತಿಗಳಿಗೆ, ಕೈಗಾರಿಕೆಗಳಿಗೆ, ವಾಣಿಜ್ಯ ಕಟ್ಟಡಗಳಿಗೆ ಹಾಗೂ ಬಹುಮಹಡಿ ಕಟ್ಟಡಗಳಿಗೆ ಇಲಾಖೆಯ ಆದೇಶದಂತೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಿ ಇಡೀ ರಾಜ್ಯವನ್ನು ಬೆಳಕಿನ ಮೂಲಕ ವೈಭವೀಕರಿಸಿದ್ದಾರೆ. ರಾಜ್ಯದ ಸರ್ವತೋಮುಖ ಬೆಳವಣಿಗೆಯಲ್ಲಿ ಸರ್ಕಾರದ ಅಧಿಕಾರಿಗಳ ಜೊತೆಯಲ್ಲಿ ಸಂಘದ ಸದಸ್ಯರ ಶ್ರಮವು ವಿದ್ಯುದ್ದೀಕರಣದಲ್ಲಿ ಸ್ಮರಣೀವಾಗಿದೆ ಎಂದು ತಿಳಿಸಿದರು.



ಈಗಾಗಲೇ ಸಂಘವು ರಾಜ್ಯಾದ್ಯಂತ 15000ಕ್ಕೂ ಹೆಚ್ಚು ಸದಸ್ಯರುಗಳನ್ನು ಹೊಂದಿದೆ. ಇದನ್ನು ನಂಬಿ 30 ಲಕ್ಷಕ್ಕೂ ಹೆಚ್ಚು ಕಾರ್ಮಿಕರು, ಸೂಪರ್‌ವೈಸರ್‌ಗಳು, ಸಾಮಾಗ್ರಿ ಸರಬರಾಜು, ಮಾರಾಟ ಮತ್ತು ತಯಾರಿಕೆ ಕುಟುಂಬಗಳು ಅವಲಂಬಿತವಾಗಿ ಜೀವನ ನಡೆಸುತ್ತಿದ್ದಾರೆ ಎಂದು ಹೇಳಿದರು.

ಆ ನಿಟ್ಟಿನಲ್ಲಿ ಸರ್ವೋಚ್ಚ ನ್ಯಾಯಾಲಯ ಆದೇಶದಂತೆ ನೂತನ ಕಟ್ಟಡಗಳಿಗೆ ತಾತ್ಕಾಲಿಕ ಮತ್ತು ಶಾಶ್ವತ ವಿದ್ಯುತ್ ಸಂಪರ್ಕ, ನೀರು ಸರಬರಾಜು, ಒಳಚರಂಡಿ ಸಂಪರ್ಕಗಳಿಗೆ ಗ್ರಾ.ಪಂ, ಪ.ಪಂ, ಪುರಸಭೆ, ನಗರಸಭೆ ಸೇರಿದಂತೆ ಸ್ಥಳೀಯ ಪ್ರಾಧಿಕಾರಗಳಿಂದ ಸ್ವಾಧೀನಾನುಭವ ಪತ್ರವನ್ನು ಪಡೆದು ಮೇಲಿನ ಮೂಲ ಭೂತ ಸೌಕರ್ಯಗಳಿಗಾಗಿ ಸಂಬಂಧಿಸಿದ ಕಚೇರಿಗಳಿಗೆ ಸಲ್ಲಿಸುವುದು ಕಡ್ಡಾಯವಾಗಿದೆ ಎಂದರು.

ಈ ಆದೇಶದಿಂದ ರಾಜ್ಯಾದ್ಯಂತ ಎಲ್ಲಾ ರೀತಿಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುತ್ತಿಲ್ಲ. ಇದರಿಂದ ಬೃಹತ್ ಉದ್ಯಮವನ್ನು ನಂಬಿರುವ ಕಟ್ಟಡ ಕೆಲಸಗಾರರು, ವಿನ್ಯಾಸಗಾರರು, ಸಿವಿಲ್, ವಿದ್ಯುತ್ ಗುತ್ತಿಗೆದಾರರು ಇತ್ಯಾದಿ ಸೇರಿದಂತೆ ಲಕ್ಷಾಂತರ ಕುಟುಂಬಗಳು ಬೀದಿಗೆ ಬೀಳುವ ಸ್ಥಿತಿ ನಿರ್ಮಾಣದ ಜೊತೆಗೆ ಬಹುದೊಡ್ಡ ಆದಾಯದ ಮೂಲಕ್ಕೆ ಕೊಡಲಿಪೆಟ್ಟು ಬೀಳಲಿದೆ ಎಂದರು.

ಆದ್ದರಿಂದ ಶಾಸಕರು ರಾಜ್ಯಸರ್ಕಾರದ ಗಮನಕ್ಕೆ ತಂದು ವಿಧಾನಸೌಧದಲ್ಲಿ ನಡೆಯುವ ಮಳೆಗಾಲದ ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆದು, ಎಲ್ಲಾ ರೀತಿಯ ಕಟ್ಟಡ ಕಾರ್ಮಿಕರು, ಗ್ರಾಹಕರಿಗೆ ನ್ಯಾಯ ಒದಗಿಸಿಕೊಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಯು.ನರೇಶ್, ಕೆ.ಟಿ.ಪ್ರಸನ್ನ, ಪ್ರಧಾನ ಕಾರ್ಯದರ್ಶಿ ಆರ್.ಎಂ.ಮರಿಯಾರಾಜ್, ಸಹಕಾರ್ಯದರ್ಶಿ ಹೆಚ್.ಇ. ಹರೀಶ್‌ಕುಮಾರ್, ಸಂಘಟನಾ ಕಾರ್ಯದರ್ಶಿ ಕೆ. ಎಸ್.ಶಾಂತಕುಮಾರ್, ಕೋಶಾಧ್ಯಕ್ಷ ಕೆ.ಅಬ್ದುಲ್‌ಅಲಿ ಹಾಜರಿದ್ದರು.

## ಗೌರಸಮುದ್ರ ಮಾರಮ್ಮ ದೇವಿ ಜಾತ್ರೆ: ಪ್ರಾಣಿಬಲಿ ನಿಷೇಧ

**ಚಿತ್ರದುರ್ಗ:** ಜಿಲ್ಲೆಯ ಚಳ್ಳಕೆರೆ ತಾಲ್ಲೂಕು ಗೌರಸಮುದ್ರ ಗ್ರಾಮದ ಗೌರಸಮುದ್ರ ಮಾರಮ್ಮ ದೇವಿ ಜಾತ್ರೆಯು ಇದೇ ಆಗಸ್ಟ್ 25 ಮತ್ತು 26ರಂದು ನಡೆಯಲಿದ್ದು, ಈ ಜಾತ್ರೆಗೆ ಲಕ್ಷಾಂತರ ಜನ ಭಕ್ತಾದಿಗಳು ಆಗಮಿಸಲಿದ್ದಾರೆ.

ಜಾತ್ರೆಗೆ ಬರುವ ಭಕ್ತಾದಿಗಳು ಜಾತ್ರೆಯಲ್ಲಿ ಯಾವುದೇ ರೀತಿಯ ಪ್ರಾಣಿಬಲಿ ಮಾಡಬಾರದು ಹಾಗೂ ಅಕ್ರಮ ಮದ್ಯ ಮಾರಾಟ ಮತ್ತು ಜೂಜಾಟ ಆಡಬಾರದೆಂದು ಸಾರ್ವಜನಿಕರಿಗೆ ತಿಳಿಯಪಡಿಸಿದೆ. ಪ್ರಾಣಿಬಲಿ, ಅಕ್ರಮ ಮದ್ಯ ಮಾರಾಟ ಮತ್ತು ಜೂಜಾಟವಾಡಿದ ಪಕ್ಷದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ನಟಿ ರಮ್ಯಾ ವಿರುದ್ಧ ಅಶ್ಲೀಲ ಬೆದರಿಕೆ ಸಂದೇಶ; ಮತ್ತಿಬ್ಬರು ಆರೋಪಿಗಳು ವಶಕ್ಕೆ, ಬಂಧಿತರ ಸಂಖ್ಯೆ 9ಕ್ಕೆ ಏರಿಕೆ

**ಬೆಂಗಳೂರು:** ನಟಿ, ಮಾಜಿ ಸಂಸದೆ ರಮ್ಯಾ ಅವರಿಗೆ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಅಶ್ಲೀಲವಾಗಿ ಕಮೆಂಟ್ ಮಾಡಿದ್ದ ಮತ್ತು ಬೆದರಿಕೆಯೊಡ್ಡಿದ್ದ ಆರೋಪ ದಡಿ ಮತ್ತಿಬ್ಬರು ಆರೋಪಿಗಳನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಬಂಧಿತರನ್ನು ಉಡುಪಿ ಮೂಲದ ಆದರ್ಶ್ ಮತ್ತು ಸಂಜಯ್ ಎಂದು ಗುರುತಿಸಲಾಗಿದೆ. ಈ ಮೂಲಕ ಬಂಧಿತರ ಸಂಖ್ಯೆ 9ಕ್ಕೆ ಏರಿಕೆಯಾಗಿದೆ. ಇದೇ ಪ್ರಕರಣದಲ್ಲಿ ಆಗಸ್ಟ್ 4ರಂದು ಭುವನ್ ಗೌಡ ಹಾಗೂ ರಾಜೇಶ್ ಎಂಬುವವರನ್ನು ಬಂಧಿಸಲಾಗಿತ್ತು.

ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟಿ ರಮ್ಯಾ ಅವರು ತಮ್ಮ ಎಕ್ಸ್ ಖಾತೆಯಲ್ಲಿ, 'ಭಾರತದ ಸಾಮಾನ್ಯ ಜನರಿಗೆ ಸುಪ್ರೀಂ ಕೋರ್ಟ್ ಒಂದು ಭರವಸೆಯ ಕಿರಣ ಇದ್ದಂತೆ. ರೇಣುಕಾಸ್ವಾಮಿ ಕುಟುಂಬಕ್ಕೆ ನ್ಯಾಯ

# ಗ್ರಾಹಕರು ಅನಾಮಧೇಯ ಕರೆಗಳಿಗೆ ದನಿಯಾಗಬೇಡಿ

## ಬೆಂಗಳೂರು ಪ್ರಾದೇಶಿಕ ಕಚೇರಿಯ ನಿರ್ದೇಶಕಿ ಸೋನಾಲಿ ಸೇನ್ ಗುಪ್ತಾ ಸಲಹೆ

**ಚಿತ್ರದುರ್ಗ:** ಗ್ರಾಹಕರು ಅನಾಮಧೇಯ ಕರೆಗಳಿಗೆ ದನಿಯಾಗಬೇಡಿ, ಅನಾವಶ್ಯಕ ಡಿಜಿಟಲ್ ಲಿಂಕ್‌ಗಳನ್ನು ತಿರಸ್ಕರಿಸಿ, ಜನ್‌ಧನ್ ಯೋಜನೆ ಖಾತೆಗಳಿಗೆ ಈ ಕೆವೈಸಿ ಮಾಡಿಸಿಕೊಂಡು ಸಕ್ರಿಯಗೊಳಿಸಿಕೊಳ್ಳಿ. ಇದರಿಂದ ಸರ್ಕಾರದ ಯೋಜನೆಗಳ ಲಾಭ ಪಡೆಯಲು ಸಹಕಾರಿಯಾಗಲಿದೆ ಎಂದು ಆರ್.ಬಿ.ಐ. ಬೆಂಗಳೂರು ಪ್ರಾದೇಶಿಕ ಕಚೇರಿಯ ನಿರ್ದೇಶಕಿ ಸೋನಾಲಿ ಸೇನ್ ಗುಪ್ತಾ ತಿಳಿಸಿದರು.

ಹೊಸದುರ್ಗ ತಾಲ್ಲೂಕಿನ ಜಾನಕಲ್ ಗ್ರಾಮದ ಶ್ರೀಕಂಠೇಶ್ವರ ಸ್ವಾಮಿ ದೇವಸ್ಥಾನದ ಸಮುದಾಯ ಭವನದಲ್ಲಿ ಚಿತ್ರದುರ್ಗ ಕೆನರಾ ಬ್ಯಾಂಕ್, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಹಾಗೂ ಜಾನಕಲ್ ಕೆನರಾ ಬ್ಯಾಂಕ್ ಸಹಯೋಗದಲ್ಲಿ ಸೋಮವಾರ ಆಯೋಜಿಸಿದ್ದ ಗ್ರಾಮ ಪಂಚಾಯತ್ ಮಟ್ಟದ ಸಾಮಾಜಿಕ ಭದ್ರತಾ ಯೋಜನೆಗಳ ಸ್ಯಾಚುರೇಶನ್ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಮೊಬೈಲ್‌ಗಳೇ ಇಂದು ನಮ್ಮ ಬ್ಯಾಂಕ್ ಆಗಿವೆ. ಡಿಜಿಟಲ್ ವಂಚನೆಗೆ ಒಳಗಾಗಿ ಹಣ ಕಳೆದುಕೊಳ್ಳಬೇಡಿ. ಗ್ರಾಹಕರು ಡಿಜಿಟಲ್ ವಂಚನೆಗಳಿಂದ ಎಚ್ಚರಿಕೆಯಿಂದ ಇರಬೇಕು ಎಂದು ಸಲಹೆ ನೀಡಿದರು.




ಚಿತ್ರದುರ್ಗ ಮಾರ್ಗದರ್ಶಿ ಬ್ಯಾಂಕ್ ಹಿರಿಯ ವ್ಯವಸ್ಥಾಪಕ ಎಂ.ರಾಘವೇಂದ್ರ ಮಾತನಾಡಿ, ಪ್ರಧಾನಮಂತ್ರಿ ಜೀವನ್‌ಜ್ಯೋತಿ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಹಾಗೂ ಪ್ರಧಾನಮಂತ್ರಿ ಅಟಲ್ ಪಿಂಚಣಿ ಯೋಜನೆಗಳನ್ನು ನೋಂದಣಿ ಮಾಡಿಸಿಕೊಳ್ಳಬೇಕು. ಬ್ಯಾಂಕ್ ಖಾತೆಯನ್ನು ಸಕ್ರಿಯಗೊಳಿಸಿಕೊಳ್ಳಬೇಕು, ಇಲ್ಲವಾದಲ್ಲಿ ಸರ್ಕಾರದ ಯೋಜನೆಯ ಹಣ ಜಮೆಯಾಗುವುದಿಲ್ಲ, ಹಾಗಾಗಿ ಅಭಿಯಾನದಡಿ ವ್ಯವಹಾರ ಮಾಡದೆ ನಿಷ್ಕ್ರಿಯೆಗೊಂಡ ಖಾತೆಗಳನ್ನು ಸ್ಥಳದಲ್ಲೇ ಸಕ್ರಿಯಗೊಳಿಸಿ ಕೊಡಲಾಗುತ್ತದೆ, ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಹೇಳಿದರು.

ಜಾನಕಲ್ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಿವಕುಮಾರ್ ಮಾತನಾಡಿ, ಸಾಮಾಜಿಕ ಭದ್ರತಾ ಯೋಜನೆಗಳನ್ನು ನೋಂದಣಿ ಮಾಡಿಸಿಕೊಂಡು ಪ್ರತಿ ವರ್ಷ ನಿಮ್ಮ ಖಾತೆಗಳಲ್ಲಿ ಕನಿಷ್ಠ ಬ್ಯಾಲೆನ್ಸ್ ಇರುವಂತೆ ನೋಡಿಕೊಳ್ಳಬೇಕು. ಈ ಖಾತೆಗಳು ತನ್‌ತಾನೆ ಸಕ್ರಿಯಗೊಂಡಿರುತ್ತವೆ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಆರ್.ಬಿ.ಐ. ಬೆಂಗಳೂರು ಪ್ರಾದೇಶಿಕ ಕಚೇರಿ ವ್ಯವಸ್ಥಾಪಕಿ ಮೀನಾಕ್ಷಿ, ಆರ್.ಬಿ.ಐ ಸಹಾಯಕ ನಿರ್ದೇಶಕ ಅರುಣ್ ಕುಮಾರ್, ಕೆನರಾ ಬ್ಯಾಂಕ್ ದಾವಣಗೆರೆ ಪ್ರಾದೇಶಿಕ ಕಚೇರಿಯ ಡಿಜಿಎಂ ತನ್ಮಯ್ ದಾಸ್, ಜಾನಕಲ್ ಗ್ರಾಮ ಪಂಚಾಯತ್ ಅಧ್ಯಕ್ಷ ಪ್ರಕಾಶ್, ಎಸ್‌ಬಿಐ ಆರ್ಥಿಕ ಸಮಾಲೋಚಕ ಮಧುಸೂಧನ್, ಹಿರಿಯೂರು ಆರ್ಥಿಕ ಸಾಕ್ಷರತ ಕೇಂದ್ರದ ಜಿಲ್ಲಾ ಸಂಯೋಜಕ ಟಿ.ಆರ್.ಗಿರೀಶ್, ಜಾನಕಲ್ ಕೆನರಾ ಬ್ಯಾಂಕ್ ವ್ಯವಸ್ಥಾಪಕ, ಸಿಬ್ಬಂದಿ ವರ್ಗದವರು, ಮತ್ತಿತರರು ಇದ್ದರು.

# ಭೂ ಮಂಜೂರಾತಿ ನೀಡಿರುವುದನ್ನು ಖಂಡಿಸಿ ಪ್ರತಿಭಟನೆ

**ತರೀಕೆರೆ :** ತಾಲ್ಲೂಕಿನ ಕಸಬಾ ಹೋಬಳಿ, ಅತ್ತಿಗನಾಳು ಗ್ರಾಮದ ಸ.ನಂ.122/3 ರಲ್ಲಿರುವ ಜಮೀನಿನಲ್ಲಿ ಕಣ್ಣಪ್ಪನ ಗುತ್ತಿ ಎಂದು ಪ್ರಚಲಿತವಿರುವ ಈ ಜಾಗವನ್ನು ಅನ್ಯರಿಗೆ ಮಂಜೂರು ಮಾಡಿರುವುದನ್ನು ರದ್ದುಮಾಡಿ ಈ ಸ್ಥಳವನ್ನು ಸಾರ್ವಜನಿಕ ಧಾರ್ಮಿಕ ಸ್ಥಳವನ್ನಾಗಿ ಮುಂದುವರೆಸಬೇಕೆಂದು ಒತ್ತಾಯಿಸಿ ತಾಲ್ಲೂಕು ವಾಲ್ಮೀಕಿ ನಾಯಕ ಸಮಾಜದ ವತಿಯಿಂದ ಪಟ್ಟಣದಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಂಘದ ತಾಲ್ಲೂಕು ಅಧ್ಯಕ್ಷ ಎಚ್.ಆರ್. ಗೋವಿಂದಪ್ಪ ಈ ಜಾಗಕ್ಕೆ ಕೆಲವು ನಕಲಿ ದಾಖಲೆಗಳನ್ನು ಸೃಷ್ಟಿಸಿ ಖಾತೆ ಮಾಡಿಸಿಕೊಂಡು, ಕ್ರಿಮಿನಲ್ ಕೇಸ್ ದಾಖಲಿಸಿ ಖಾತೆಯನ್ನು ವಜಾ ಮಾಡದೆ ಇದ್ದರೆ ಮುಂದಿನ ದಿನಗಳಲ್ಲಿ ಉಪವಾಸ ಸತ್ಯಾಗ್ರಹ ಕೈಗೊಳ್ಳಬೇಕಾಗುವುದು ಎಂದು ಹೇಳಿದರು.



ಸಂಘದ ಕಾರ್ಯದರ್ಶಿ ಸಂತೋಷ್‌ರವರು ಮಾತನಾಡುತ್ತಾ, ಈ ಹಿಂದಿನಿಂದಲೂ ಬೇಡ ಸಮುದಾಯದವರು ವಾಸಮಾಡುವ ಸ್ಥಳಗಳಲ್ಲಿ ನಮ್ಮ ಸಮಾಜದ ಆರಾಧ ದೈವ ಕಣ್ಣಪ್ಪನವರ ಹೆಸರಿನಲ್ಲಿ 'ಕಣ್ಣಪ್ಪ ಗುತ್ತಿ' ಎಂದು ನಮ್ಮ ಪೂರ್ವಿಕರು ಗುರುತಿಸುತ್ತಿದ್ದರು. ಈ ಜಾಗದಲ್ಲಿ ನಾವುಗಳು ಹಿಂದೆ ವಾಸವಿದ್ದು, ಕಾಲಾನಂತರ ನಾವು ಬೇ-ರೆಕಡೆ ವಾಸಿಸುತ್ತಿದ್ದು, ಆ ಜಾಗದಲ್ಲಿ ಜಾತ್ರೆ, ಪೂಜೆ, ಸಾಂಸ್ಕೃತಿಕ, ಧಾರ್ಮಿಕ ಆಚರಣೆಗಳನ್ನು ಮಾಡಿಕೊಂಡು ಬಂದಿರುವುದರಿಂದ, ಆ ಜಾಗವು ನಮ್ಮದೇ ಆಗಿರುತ್ತದೆ. ಆದ್ದರಿಂದ ಈ ಜಾಗವು ಸಾರ್ವಜನಿಕ ಸ್ಥಳ ಆಗಿರುವುದರಿಂದ ಈ ಮಂಜೂರಿಗೆ ಅವಕಾಶವೇ ಇರುವುದಿಲ್ಲ. ಆದ್ದ-ರಿಂದ ಅನ್ಯರ ಖಾತೆಯನ್ನು ತಕ್ಷಣ ವಜಾ ಮಾಡಬೇಕೆಂದು ಆಗ್ರಹಿಸಿದರು.

# ಜಿಲ್ಲೆಯ 9 ಲಕ್ಷ ಮಂದಿಗೆ 2 ಸಾವಿರ ಕೋಟಿ ರೂ. ಸಂದಾಯ: ಶಿವಾನಂದಸ್ವಾಮಿ

**ಚಿಕ್ಕಮಗಳೂರು, ಆ.20:** ಜಿಲ್ಲೆಯಲ್ಲಿ ಇದುವರೆವಿಗೆ ಐದು ಗ್ಯಾರಂಟಿ ಯೋಜನೆಗಳಿಂದ 9 ಲಕ್ಷ ಫಲಾನುಭವಿಗಳಿಗೆ 2 ಸಾವಿರ ಕೋಟಿ ರೂ. ಸಂದಾಯವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಹೇಳಿದರು.

ಇಂದು ನಗರದ ಜಿ.ಪಂ. ಮಿನಿ ಸಭಾಂಗಣದಲ್ಲಿ ಇಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಐದು ಇಲಾಖೆಗಳಿಗೆ ಸಂಬಂಧಪಟ್ಟಂತೆ ಯೋಜನೆಗಳು ಕಾರ್ಯಗತವಾಗಿರುವ ಬಗ್ಗೆ ಯಾವುದಾದರೂ ಕುಂಠಿತ ವಿಚಾರಗಳನ್ನು ಸುದೀರ್ಘವಾಗಿ ಚರ್ಚೆ ಮಾಡುವಂತೆ ತಿಳಿಸಿದ ಅವರು, ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳು ಶೇ.97ರಷ್ಟು ಯಶಸ್ವಿಯಾಗಿವೆ ಎಂದು ಹೇಳಿದರು.

ಇದುವರೆಗೆ ಜಿಲ್ಲೆಯಲ್ಲಿ 2 ಲಕ್ಷದ 62 ಸಾವಿರದ 944 ಯಜಮಾನಿಯರಿಗೆ ಗೃಹಲಕ್ಷ್ಮೀ ಮೂಲಕ ಮಾಸಿಕ ಸುಮಾರು 53 ಕೋಟಿ ರೂ.ಗಳನ್ನು 21 ಕಂತುಗಳ ಮೂಲಕ ನೀಡಲಾಗಿದೆ. ಮಾಸಿಕವಾಗಿ ಇದುವರೆಗೂ 1 ಸಾವಿರ ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ನೇರವಾಗಿ ಫಲಾನುಭವಿಗಳ ಖಾತೆಗೆ ತಲಾ 2000 ರೂ. ಜಮಾ ಮಾಡಿದೆ ಎಂದು ಹೇಳಿದರು.



ಶಕ್ತಿ ಯೋಜನೆಯಡಿ 60 ಸಾವಿರ ಜನ ಪ್ರತಿದಿನ ಮಹಿಳಾ ಫಲಾನುಭವಿಗಳು ಪ್ರಯಾಣ ಮಾಡುತ್ತಿದ್ದಾರೆ, 24 ತಿಂಗಳಲ್ಲಿ 4 ಕೋಟಿ 67 ಟ್ರಿಪ್ ಬಸ್‌ಗಳು ಓಡಾಡಿವೆ. ಅದಕ್ಕೆ ಸಂಬಂಧಪಟ್ಟಂತೆ 188 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಮಹಿಳೆಯರ ಪ್ರಯಾಣ-ಕ್ಕೆ ಒದಗಿಸಿದೆ ಎಂದ ಅವರು, ಮಲೆನಾಡು ಭಾಗದಲ್ಲಿ ಅದರಲ್ಲೂ ವಿಶೇಷವಾಗಿ ನರಸಿಂಹರಾಜಪುರ, ಬಾಳೆಹೊನ್ನೂರಿಗೆ ಸದಾ ಓಡಾಡಲು ಅನುಕೂಲವಾಗುವಂತೆ ಸಾರಿಗೆ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಯುವನಿಧಿ ಯೋಜನೆಯಡಿ ಒಟ್ಟು ಜಿಲ್ಲೆಯಲ್ಲಿ 3506 ಜನ ಪದವೀಧರರಿಗೆ 1 ಕೋಟಿ 5 ಲಕ್ಷ 12 ಸಾವಿರ ರೂ. ನೀಡಲಾಗಿದೆ. 36 ಜನ ಡಿಪ್ಲೊಮಾ ವಿದ್ಯಾರ್ಥಿಗಳಿಗೆ 54 ಸಾವಿರ ರೂ. ನೀಡಲಾಗಿದೆ. ಇದೂವರೆಗೂ 9 ಕೋಟಿ 48 ಲಕ್ಷ 29 ಸಾವಿರ ರೂ.ಗಳ ಸಂದಾಯವಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿ ಜಗದೀಶ್ ಸಭೆಗೆ ಮಾಹಿತಿ ನೀಡಿದರು. 4488 ವಿದ್ಯಾರ್ಥಿಗಳು ಹೊಸದಾಗಿ ನೋಂದಣಿಯಾಗಿದ್ದು, ಅದರಲ್ಲಿ 4431 ವಿದ್ಯಾರ್ಥಿಗಳು ಪದವೀಧರರಾಗಿದ್ದು, ಡಿಪ್ಲೊಮಾ ಆಗಿರುವ 57 ವಿದ್ಯಾರ್ಥಿಗಳು ಸೇರ್ಪಡೆಯಾಗಿದ್ದಾರೆ ಎಂದ ಅವರು, ಈಗಾಗಲೇ ಎಲ್ಲಾ ತಾಲ್ಲೂಕಿನ ಕಾಲೇಜಿನಲ್ಲಿ ವ್ಯಾಪಕವಾಗಿ ಪ್ರಚಾರ ಮಾಡಲಾಗಿದೆ. ಜೊತೆಗೆ ಎಲ್ಲಾ ಕಡೆ ತರಬೇತಿ ಶಿಬಿರಗಳು ಪ್ರಾರಂಭವಾಗಿದ್ದು, ಅದನ್ನು ಮುಂದುವರಿಸಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅನ್ನಭಾಗ್ಯ ಯೋಜನೆಯಡಿ 2 ಲಕ್ಷದ 49 ಸಾವಿರದ 128 ಬಿಪಿಎಲ್ ಕಾರ್ಡ್‌ಗಳ 8 ಲಕ್ಷದ ಒಂದು ಸಾವಿರದ ಐನೂರ ಮೂವತ್ತಾರು ಫಲಾನುಭವಿಗಳಿಗೆ 5 ಕೆ.ಜಿ. ಅಕ್ಕಿಯ ಹಣದ ಬದಲು 5 ಕೆ.ಜಿ ಅಕ್ಕಿಯನ್ನು ನೀಡಲಾಗಿದ್ದು, ಆಗಸ್ಟ್ ಮಾಹೆಗೆ 43420 ಕ್ವಿಂಟಾಲ್ ಅಕ್ಕಿ ಬಿಡುಗಡೆಯಾಗಿದ್ದು, ಇದಕ್ಕೆ ಅಂದಾಜು 9 ಕೋಟಿ ರೂ. ವೆಚ್ಚವಾಗಿದೆ ಎಂದು ಹೇಳಿದರು. ಯೋಜನೆ ಆರಂಭದಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ 294 ಕೋಟಿ ರೂಪಾಯಿ ಹಣ ಸಲ್ಲಿಕೆಯಾಗಿದೆ ಎಂದು ಅಧಿಕಾರಿ ಆಹಾರ ಮತ್ತು ನಾಗರಿಕ ಪೂ-ರೈಕೆ ಇಲಾಖೆಯ ಉಪನಿರ್ದೇಶಕರಾದ ಯೋಗಾನಂದ್ ಹೇಳಿದರು.

ಇದೇ ವೇಳೆ ಮಾತನಾಡಿದ ಅಧ್ಯಕ್ಷರು, ಅನ್ನಭಾಗ್ಯ ಯೋಜನೆಯಡಿ ನಮ್ಮ ಜಿಲ್ಲೆಯಲ್ಲಿ ಫಲಾನುಭವಿಗಳಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು. ಇನ್ನು ಮುಂದೆ ನ್ಯಾಯಬೆಲೆ ಅಂಗಡಿಯಲ್ಲಿ ಐರೀಷ್ ತಂತ್ರಜ್ಞಾನದ ಮೂಲಕ ಫಲಾನುಭವಿಗಳನ್ನು ಗುರುತಿಸಿ ಪಡಿತರ ಅಕ್ಕಿ ವಿತರಣೆ ಮಾಡಲು ರಾಜ್ಯ ಸರ್ಕಾರ ಮುಂದಾಗಿದೆ. ನಮ್ಮ ಜಿಲ್ಲೆಯಲ್ಲೂ ಕೂಡ ಈ ತಂತ್ರಜ್ಞಾನದ ಮೂಲಕ ಫಲಾನುಭವಿಗಳನ್ನು ಗುರುತಿಸಿ ವಿತರಿಸಬೇಕೆಂದರು.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯ 3 ಲಕ್ಷದ 12 ಸಾವಿರ ಮೀಟರ್‌ಗಳಿಗೆ ಸಂಬಂಧಿಸಿದಂತೆ ಸುಮಾರು 9 ಲಕ್ಷ ಜನರಿಗೆ ಪ್ರತಿ ತಿಂಗಳಿಗೆ ಉಚಿತ ವಿದ್ಯುತ್ ಒದಗಿಸುವ ಸಲುವಾಗಿ 12 ಕೋಟಿ ರೂ.ಗಳನ್ನು ಸರ್ಕಾರ ಮೆಸ್ಕಾಂಗೆ ಸಂದಾಯ ಮಾಡುತ್ತಿದ್ದು, ಇದುವರೆಗೆ 300 ಕೋಟಿ ರೂ. ವಿನಿಯೋಗವಾಗಿದೆ ಎಂದು ಅಧೀಕ್ಷಕ ಅಭಿಯಂತರ ಪ್ರದೀಪ್ ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆ ಉಪಾಧ್ಯಕ್ಷರುಗಳಾದ ಎಸ್.ಎನ್. ಮಂಜುನಾಥ್, ಹೆಚ್.ಎಸ್.ಕೃಷ್ಣೇಗೌಡ, ಹೇಮಾವತಿ ಹಾಗೂ ಚಂದ್ರಮೌಳಿ, ಪ್ರಾಧಿಕಾರದ ಸದಸ್ಯರು, ಹಾಗೂ ಎಲ್ಲಾ ತಾಲ್ಲೂಕುಗಳ ಅಧ್ಯಕ್ಷರುಗಳು, ಜಿ.ಪಂ. ಮುಖ್ಯ ಯೋಜನಾಧಿಕಾರಿಗಳಾದ ರಾಜ್‌ಗೋಪಾಲ್ ಐದೂ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**